# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ಚಿಂತಿಸಬೇಡಿ, ನಿಮ್ಮ ದುಃಖ ಇಂದು ಮಂಜುಗಡ್ಡೆಯ ಹಾಗೆ ಕರಗುತ್ತದೆ. ಕೊಂಡ ಹೊಸ ಕಾರ್ಯಯೋಜನೆಗಳು ನಿಮ್ಮ ನಿರೀಕ್ಷೆಗಳನ್ನು ತಲುಪುವುದಿಲ್ಲ

### ವೃಷಭ ರಾಶಿ

ಆರೋಗ್ಯ ಪರಿಪೂರ್ಣವಾಗಿರುತ್ತದೆ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಮಕ್ಕಳು ಅಭ್ಯಾಸಗಳ ಮೇಲೆ ಗಮನ ಹರಿಸಬೇಕು ಹಾಗೂ ಭವಿಷ್ಯದ ಬಗ್ಗೆ ಯೋಜನೆ ರೂಪಿಸಬೇಕು. ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ. ಒಂದು ಕಠಿಣ ಸಮಯದ ನಂತರ, ಕೆಲಸದಲ್ಲಿ ಏನಾದರೂ ಸುಂದರವಾದ್ದರಿಂದ ಈ ದಿನ ನಿಮಗೆ ಆಶ್ಚರ್ಯವನ್ನುಂಟು ಮಾಡುತ್ತದೆ. ಜೀವನದ ಪ್ರಕ್ಷುಬ್ಧತೆಯ ಮಧ್ಯೆ, ಇಂದು ನೀವು ನಿಮ್ಮ ಮಕ್ಕಳಿಗಾಗಿ ಸಮಯವನ್ನು ತೆಗೆದುಕೊಳ್ಳುತ್ತೀರಿ.

### ಮಿಥುನ ರಾಶಿ

ನಿಮ್ಮ ಜಗಳಗಂಟ ನಡವಳಿಕೆ ನಿಮ್ಮ ಸಂಬಂಧವನ್ನು ಶಾಶ್ವತವಾಗಿ ಹಾಳು ಮಾಡಬಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿಡಿ.ನೀವು ತೆರೆದ ಮನಸ್ಸನ್ನು ಹೊಂದುವ ಮೂಲಕ ಮತ್ತು ಯಾರಾದರ ವಿರುದ್ಧ ಪೂರ್ವಾಗ್ರಹವನ್ನು ಕೈಬಿಡುವ ಮೂಲಕ ಇದರಿಂದ ಹೊರಬರಬಹುದು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

### ಕರ್ಕ ರಾಶಿ

ಧ್ಯಾನ ಪರಿಹಾರ ತರುತ್ತದೆ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ನಿಮ್ಮ ಸ್ನೇಹಿತರು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ. ಪ್ರಣಯ ಉಂಟಾಗುವ ಸಾಧ್ಯತೆಯಿದ್ದರೂ ಇಂದ್ರಿಯದ ಭಾವನೆಗಳು ನಿಮ್ಮ ಸಂಬಂಧವನ್ನು ಹಾಳು ಮಾಡಬಹುದು. ನೀವು ಕೆಲಸದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ.

### ಸಿಂಹ ರಾಶಿ

ನಿಮ್ಮ ಕುಂದಿದ ಜೀವಂತಿಕೆ ವ್ಯವಸ್ಥೆಯಲ್ಲಿ ದೀರ್ಘಕಾಲೀನ ವಿಷದಂತ ವರ್ತಿಸುತ್ತದೆ. ನಿಮ್ಮನ್ನು ಸೃಜನಶೀಲ ಕೆಲಸದಲ್ಲಿ ತೊಡಗಿಸಿಕೊಳ್ಳುವುದು ಮತ್ತುರೋಗದ ವಿರುದ್ಧ ಹೋರಾಡಲು ಪ್ರೇರೇಪಿಸುವುದು ಒಳ್ಳೆಯದು. ನಿಮ್ಮ ಸ್ನೇಹಿತರ ಸಹಾಯದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾಗುತ್ತವೆ. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು–ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

### ಕನ್ಯಾ ರಾಶಿ

ಯಾರಾದರೂ ನಿಮ್ಮನ್ನು ಬಲಿಪಶುವನ್ನಾಗಿ ಮಾಡಲು ಪ್ರಯತ್ನಿಸಬಹುದಾದ್ದರಿಂದ ಎಚ್ಚರಿಕೆಯಿಂದಿರಿ. ಒತ್ತಡ ಹೆಚ್ಚಾಗಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ. ಪ್ರಣಯದ ನಡತೆಗಳು ಫಲ ನೀಡುವುದಿಲ್ಲ.

### ತುಲಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ತರಾತುರಿಯಲ್ಲಿ ಹೂಡಿಕೆಗಳನ್ನು ಮಾಡಬೇಡಿ – ನೀವು ಎಲ್ಲಾ ಸಾಧ್ಯವಿರುವ ಕೋನಗಳಿಂದ ಹೂಡಿಕೆಯನ್ನು ಪರಿಶೀಲಿಸದೇ ಹೋದರೆ ನಷ್ಟ ಖಚಿತ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

### ವೃಶ್ಚಿಕ ರಾಶಿ

ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ನಿಮ್ಮ ಸ್ನೇಹಿತರು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ.

### ಧನು ರಾಶಿ

ಇತರರನ್ನು ಟೀಕಿಸುವ ನಿಮ್ಮ ಅಭ್ಯಾಸದಿಂದಾಗಿ ಇಂದು ನೀವೇ ಕೆಲವು ಟೀಕೆಗಳನ್ನು ಎದುರಿಸುವ ಸಾಧ್ಯತೆಗಳಿವೆ. ನಿಮ್ಮ ಹಾಸ್ಯಪ್ರಜ್ಞೆ ಜಾಗೃತವಾಗಿರಲಿ ಮತ್ತು ನಿಮ್ಮ ಸ್ವರಕ್ಷಣೆ ಕಡಿಮೆಯಿರಲಿ. ಹೀಗಿದ್ದಲ್ಲಿ ಟೀಕೆಯನ್ನು ಎದುರಿಸುವ ಸಾಮರ್ಥ್ಯ ನಿಮ್ಮಲ್ಲಿ ಹೆಚ್ಚಿರುತ್ತದೆ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

### ಮಕರ ರಾಶಿ

ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ನೀವು ಇಂದು ಹಾಜರಾದ ಸಾಮಾಜಿಕ ಸಂತೋಷಕೂಟದಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ.

### ಕುಂಭ ರಾಶಿ

ಮಕ್ಕಳೊಂದಿಗೆ ಆಟವಾಡುವುದು ನಿಮಗೆ ಯಾವತ್ತೂ ಅದ್ಭುತ ಚಿಕಿತ್ಸೆಯ ಅನುಭವ ನೀಡುತ್ತದೆ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು.

### ಮೀನ ರಾಶಿ

ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ. ನೀವು ನಿಮ್ಮ ಮೇಲೆ ನಂಬಿಕೆಯನ್ನಿಡುವ ಅಗತ್ಯವಿದೆ. ಸಮುದ್ರದಾಚೆಯ ಸಂಬಂಧಿಯಿಂದ ಒಂದು ಉಡುಗೊರೆ ನಿಮ್ಮನ್ನು ಸಂತೋಷಪಡಿಸುತ್ತದೆ. ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ. ನೀವು ನಿರಾಸೆ ಅನುಭವಿಸುತ್ತೀರಿ ಅದೇಕೆಂದರೆ ನೀವು ಬಯಸುತ್ತಿದ್ದ ಗುರುತಿಸುವಿಕೆ ಮತ್ತು ಪ್ರತಿಫಲಗಳು ಮುಂದೂಡಲ್ಪಡುತ್ತವೆ.

## ಸ್ಪೀಡ್ ಬೋಟಗೆ ಚಾಲನೆ ನೀಡಿದ ಸಚಿವ ಎಚ್.ಕೆ.ಪಾಟೀಲ



**ಗದಗ:** ಗದಗ ನಗರದ ಭೀಷ್ಮವಿಹಾರ ಧಾಮದಲ್ಲಿ ಮಂಗಳವಾರ (ಮೇ.27) ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ಸ್ಪೀಡ್ ಬೋಟಗೆ ಚಾಲನೆ ನೀಡಿದರು.

ಈಗಾಗಲೇ ಭೀಷ್ಮವಿಹಾರ ಧಾಮದಲ್ಲಿ ಸೌರಶಕ್ತಿ ಚಾಲಿತ ಬೋಟ ಸೇರಿದಂತೆ ವಿವಿಧ ಬೋಟುಗಳು ಪ್ರವಾಸಿಗರನ್ನು ಆಕರ್ಷಿಸುತ್ತಿದ್ದು ಇದರ ಜೊತೆಗೆ ಇಂದು ಚಾಲನೆ ನೀಡಿದ ಸ್ಪೀಡ ಬೋಟ್ ಮೂಲಕ ಭೀಷ್ಮ ಕೆರೆಯ ಪರ್ಯಟನೆ ಮಾಡಿದಂತಹ ಎಚ್.ಕೆ.ಪಾಟೀಲ ಅವರು ಸಂತಸ ವ್ಯಕ್ತಪಡಿಸಿದರು. ಜಿಲ್ಲಾಧಿಕಾರಿಗಳಾದ ಸಿ.ಎನ್.ಶ್ರೀಧರ, ಜಿಲ್ಲಾಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಬಿ.ಬಿ.ಅಸೂಟಿ ಅವರುಗಳು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರೊಂದಿಗೆ ಉಪಸ್ಥಿತರಿದ್ದರು.

## ಕೋವಿಡ್ ಭಯ ಬೇಡ ಮುನ್ನೆಚ್ಚರಿಕೆ ಕ್ರಮ ಪಾಲಿಸಿ



**ಹಾಸನ:** ಕೋವಿಡ್ ಪಾಸಿಟಿವ್ ಬಂದ ತಕ್ಷಣ ಭಯ ಬೇಡ ಮುಂಜಾಗ್ರತ ಕ್ರಮಗಳನ್ನು ಅನುಸರಿಸಬೇಕು, ಸ್ಯಾನಿಟೈಸಿಂಗ್ ಜೊತೆಗೆ ಮಾಸ್ಕ್ ಧರಿಸುವ ಮೂಲಕ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಿ. ನಾವು ಸ್ವಚ್ಛವಾಗಿರುವುದರ ಜೊತೆಗೆ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳೋಣ ಎಂದು ಸಂಸದರಾದ ಶ್ರೇಯಸ್ ಪಟೇಲ್ ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮುಂಗಾರು ಮಳೆ ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ವಹಿಸುವ ಕುರಿತು ಅರೋಗ್ಯ ಇಲಾಖೆ ಅಧಿಕಾರಿಗಳೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ನಡೆಸಿದ ಸಭೆಯಲ್ಲಿ ಮಾತನಾಡಿ ನಾಳೆಯಿಂದ ಕೋವಿಡ್ ಟೆಸ್ಟಿಂಗ್ ಆರಂಭ ಮಾಡಲಾಗುತ್ತಿದೆ. ಎಲ್ಲ ತಾಲ್ಲೂಕು ಆಸ್ಪತ್ರೆಗಳಲ್ಲಿ 10 ಬೆಡ್‌ಗಳನ್ನು ಕೋವಿಡ್ ಸಂಬಂಧಿಸಿದ ರೋಗಿಗಳಿಗೆ, ಜಿಲ್ಲಾ ಆಸ್ಪತ್ರೆಯಲ್ಲಿ ನೂರು ಬೆಡ್‌ಗಳನ್ನು ಹಾಗೂ ಐಸೋಲೇಶನ್ ವಾರ್ಡ್‌ಗಳನ್ನು ಸಿದ್ಧಮಾಡಲಾಗಿದೆ ಎಂದು ತಿಳಿಸಿದರು.

ಟೆಸ್ಟಿಂಗ್ ಕಿಟ್‌ಗಳನ್ನು ಈಗಾಗಲೇ ಬೆಂಗಳೂರಿನಿಂದ ತರಿಸಿಕೊಂಡಿದ್ದೇವೆ. ಜಿಲ್ಲೆಯಲ್ಲಿ ಶೇ.95 ರಷ್ಟು ಬೆಡ್‌ಗಳು, ಆಕ್ಸಿಜನ್ ಟ್ಯಾಂಕ್‌ಗಳು ಸುಸಜ್ಜಿತವಾಗಿವೆ ಉಸಿರಾಟ, ಶ್ವಾಸಕೋಶ ತೊಂದರೆ ಇರುವವರಿಗೆ ಕಡ್ಡಾಯವಾಗಿ ಟೆಸ್ಟ್ ಮಾಡುತ್ತೇವೆ ಎಂದು ತಿಳಿಸಿದರಲ್ಲದೆ ಡೆಂಗ್ಯೂ ರೋಗದ ಲಕ್ಷಣಗಳು, ಮುಂಜಾಗ್ರತೆ ಕ್ರಮಗಳ ಕುರಿತು ಮಾಹಿತಿ ನೀಡಿದರು.

ಹಿಮ್ಸ್‌ನ ಡಾ॥ ರಾಘವೇಂದ್ರ ಅವರು ಮಾತನಾಡಿ ಜಿಲ್ಲಾ ಆಸ್ಪತ್ರೆಯಲ್ಲಿ ಈಗಾಗಲೇ ಎಲ್ಲಾ ರೀತಿಯ ಸಿದ್ಧತೆಯನ್ನು ಮಾಡಿಕೊಳ್ಳಲಾಗಿದೆ ಪ್ರತ್ಯೇಕವಾಗಿ 100 ಬೆಡ್‌ಗಳನ್ನು ಸಿದ್ಧಮಾಡಿ ಇಟ್ಟುಕೊಂಡಿದ್ದೇವೆ, ಆಕ್ಸಿಜನ್, ಔಷಧಗಳ ಕೊರತೆ ಇಲ್ಲ ಎಂದರು.

ಡಾ॥ ಚೇತನ್, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ॥ ನಾಗಪ್ಪ ಹಾಗೂ ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಮಕ್ಕಳ ಬೆಳವಣಿಗೆಗೆ ಬೇಸಿಗೆ ಶಿಬಿರಗಳು ಸಹಕಾರಿ: ನ್ಯಾ. ಎಂ.ಎಸ್.ಸಂತೋಷ್

**ಶಿವಮೊಗ್ಗ:** ಮಕ್ಕಳು ತಮ್ಮ ಬೆಳವಣಿಗೆಗೆ ಪೂರಕವಾದ ಹೊಸ ವಿಷಯಗಳನ್ನು ತಿಳಿದುಕೊಳ್ಳುವುದು ಅತಿ ಅಗತ್ಯವಾಗಿದ್ದು, ಮಕ್ಕಳ ಬೆಳವಣಿಗೆಗೆ ಇಂತಹ ಬೇಸಿಗೆ ಶಿಬಿರಗಳು ಸಹಕಾರಿಯಾಗಲಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಂ.ಎಸ್.ಸಂತೋಷ್ ಹೇಳಿದರು.

ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಸಮಿತಿ ಇವರ ಸಹಯೋಗದಲ್ಲಿ ಕಾಶಿಪುರದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ 5 ರಿಂದ 16 ವರ್ಷದೊಳಗಿನ ಮಕ್ಕಳಿಗೆ ಆಯೋಜಿಸಿದ್ದ ಉಚಿತ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭವನ್ನು ಸೋಮವಾರ ಸರ್ಕಾರಿ ವೀಕ್ಷಣಾಲಯದಲ್ಲಿ ಚಂಡೆ ಬಾರಿಸುವ ಹಾಗೂ ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು

ಮಕ್ಕಳು ತಮ್ಮ ದಿನಚರಿಯನ್ನು ಸರಿಯಾದ ಕ್ರಮದಲ್ಲಿ ನಿಭಾಯಿಸಬೇಕು. ಅದನ್ನು ಬದುಕಿಗೆ ಸೂತ್ರದಂತೆ ಅವಳಡಿಸಿಕೊಳ್ಳಬೇಕು. ಆಗ ಮಾತ್ರ ಬದುಕಿನಲ್ಲಿ ಉನ್ನತ ಮಟ್ಟಕ್ಕೆ ಹೋಗಲು ಸಾಧ್ಯ. ಎ.ಪಿ.ಜೆ ಅಬ್ದುಲ್ ಕಲಾಂ ಅವರನ್ನು ಮಾದರಿಯಾಗಿ ತೆಗೆದುಕೊಳ್ಳಬೇಕು. ಅವರಂತೆ ನೀವೆಲ್ಲಾ ಉತ್ತುಂಗಕ್ಕೆ ಏರಬೇಕು ಎಂದರು.

ಜಿ.ಪಂ. ಉಪ ಕಾರ್ಯದರ್ಶಿಯಾದ ಶ್ರೀಮತಿ ಸುಜಾತ ಮಾತನಾಡಿ, ಮಕ್ಕಳ ಮನೋವಿಕಾಸಕ್ಕೆ ಬೇಸಿಗೆ ಶಿಬಿರ ಅತ್ಯಗತ್ಯ. ಮೊದಲೆಲ್ಲಾ ಬೇಸಿಗೆ ರಜೆ ಬಂದ ಕೂಡಲೇ ಅಜ್ಜಿ ಮನೆಗೆ ಹೋಗಿ ಅಲ್ಲಿನ ವಾತಾರಣದಲ್ಲಿದ್ದು, ಅಲ್ಲಿನ ದೇಸಿ ಆಟಗಳನ್ನು ಆಡುತ್ತಾ ಕಾಲ ಕಳೆಯುತ್ತಿದ್ದೆವು. ಆದರೆ ಇಂದಿನ ಮಕ್ಕಳು ಹೆಚ್ಚಾಗಿ ಮೊಬೈಲ್, ಟಿವಿಯ ಬಳಕೆಯಲ್ಲೆ ಮುಳುಗಿ ಹೋಗಿದ್ದಾರೆ. ಇದರಿಂದ ಸರಿಯಾಗಿ ಊಟ ಮತ್ತು ನಿದ್ರೆ ಮಾಡುವುದಿಲ್ಲ. ಮಕ್ಕಳಿಗೆ ಮಾನಸಿಕ ಸಮಸ್ಯೆಗಳು ಉಂಟಾಗುತ್ತಿವೆ ಎಂದರು.

ಬೇಸಿಗೆ ಶಿಬಿರದಲ್ಲಿ ಯೋಗ, ಧ್ಯಾನ, ಶ್ಲೋಕ, ಚಿತ್ರಕಲೆ, ಕರಕುಶಲತೆ, ಸಮೂಹ ನೃತ್ಯ, ಸಂಗೀತ, ರಂಗಕಲೆ, ಅಬಾಕಸ್‌ನಂತಹ ಸಕಾರಾತ್ಮಕ ಕಲಿಕೆಗಳು ಒಳಗೊಂಡಿದ್ದು, ಮಕ್ಕಳು ಇದರಲ್ಲಿ ಭಾಗವಹಿಸುವುದರಿಂದ ಮನೋವಿಕಾಸಕ್ಕೆ ಸಹಕಾರಿಯಾಗುತ್ತದೆ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಬಿ.ಹೆಚ್.ಕೃಷ್ಣಪ್ಪ ಮಾತನಾಡಿ, ಬೇಸಿಗೆ ಶಿಬಿರದಲ್ಲಿ ಮಕ್ಕಳಿಗೆ ಉಪಯೋಗವಾಗುವಂತಹ ಐದು ಚಟುವಟಿಕೆಗಳನ್ನು 15 ದಿನಗಳ ಕಾಲ ನಡೆಸಲಾಯಿತು. ಶಿಬಿರದಲ್ಲಿ 108 ಮಕ್ಕಳು ನೋಂದಣಿಯಾಗಿದ್ದು, ಚಿತ್ರಕಲೆ, ಕರಕುಶಲತೆ, ಸಮೂಹ ನೃತ್ಯ, ಸಂಗೀತ, ರಂಗ ಕಲೆ, ಫೈನ್ ಮೋಟಾರ್ ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ವಿವಿಧ ರೀತಿಯ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು. ಸರ್ಕಾರಿ ಶಾಲೆಯ ಮಕ್ಕಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ರಾಜ್ಯ ಬಾಲಭವನ ಸೊಸೈಟಿ ಬೆಂಗಳೂರು ವತಿಯಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು, ಆ ಮೂಲಕ ಎಲ್ಲಾ ಮಕ್ಕಳಿಗೆ ಇದರ ಸದುಪಯೋಗ ಮಾಡಿಕೊಳ್ಳಲು ಸಹಾಯಕವಾಯಿತು ಎಂದರು.

ಜಿಲ್ಲಾ ಬಾಲ ಭವನ ಸಮಿತಿಯ ಕಾರ್ಯಕ್ರಮ ಸಂಯೋಜಕರಾದ ಆರ್. ಮಂಜುಳಾರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಸಂದರ್ಭದಲ್ಲಿ ಮಕ್ಕಳು "ಮೊಬೈಲ್ ಬಿಡಿ ಪುಸ್ತಕ ಹಿಡಿ" ಎನ್ನುವ ಕಿರು ನಾಟಕವನ್ನು ಪ್ರದರ್ಶಿಸಿದರು. ಶಿಬಿರದಲ್ಲಿ ಭಾಗವಹಿಸಿದ್ದ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಹೆಚ್. ಉಮೇಶ್ , ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ರೇಖ್ಯಾ ನಾಯಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಶಿರೇಖಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೈತ್ರಿಕುಮಾರಿ, ಮುಖ್ಯೋಪಾಧ್ಯಾರಾದ ಹಾಲ ನಾಯಕ್, ಚಿತ್ರಕಲಾ ಹಾಗೂ ಕರಕುಶಲ ಕಲೆ ಶಿಕ್ಷಕ ಕೆ.ಎ.ವಿಶಾಲ್, ಸಂಗೀತ ಶಿಕ್ಷಕ ಅರುಣ್ ಎಸ್ ಘಾಟೆ, ನೃತ್ಯ ಶಿಕ್ಷಕಿ ಜೆ.ಕವಿತಾ ರಾಣಿ, ರಂಗಕಲೆ ಶಿಕ್ಷಕ ಯೋಗೇಶ್ ಹಾಜರಿದ್ದರು.

## ರಾಜ್ಯ ಮಟ್ಟದ ನೇಮಕಾತಿ ಕ್ಯಾಂಪಸ್ ಸಂದರ್ಶನ ಯಶಸ್ವಿ




**ಗದಗ :** ಸರ್ಕಾರಿ ಪಾಲಿಟೆಕ್ನಿಕ್, ನರಸಾಪೂರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಡಿಪ್ಲೋಮಾ ವಿವಿಧ ವಿಭಾಗಗಳಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಖಣಾದಟರಟಿ ಉಟರಂಭಚಿಟ ಇಟಿಜಡಿರಥಿ ಖಟುಣಜಜ, ಏಚಿಡಿಟಿಚಿಣಚಿಞಚಿ ಬಹುರಾಷ್ಟ್ರೀಯ ಕಂಪನಿ ವತಿಯಿಂದ ರಾಜ್ಯ ಮಟ್ಟದ ನೇಮಕಾತಿ ಕ್ಯಾಂಪಸ್ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿತ್ತು.

ಸದರಿ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಡಿಪ್ಲೋಮಾ ಪಾಸಾದ ಸುಮಾರು 200 ವಿದ್ಯಾರ್ಥಿಗಳು ನೇಮಕಾತಿ ಸಂದರ್ಶನದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ Suzlon Global Energy Limited, Karnataka

ಬಹುರಾಷ್ಟ್ರೀಯ ಕಂಪನಿ ಅಧಿಕಾರಿಗಳಾದ ಶ್ರೀ ಜಗದೀಶ ಊಖಂ ಮುಖ್ಯಸ್ಥರು ಹಾಗೂ ಇತರೆ ವಿವಿಧ ವಿಭಾಗಗಳ ಅಧಿಕಾರಿಗಳು ಹಾಜರಿದ್ದು, ಕಂಪನಿಯ ಕುರಿತು ಮಾಹಿತಿಯನ್ನು ಒದಗಿಸಿದರು ಹಾಗೂ ವಿದ್ಯಾರ್ಥಿಗಳಿಗೆ ಸಂದರ್ಶನವನ್ನು ಜರುಗಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರು, ವಿಭಾಗಾಧಿಕಾರಿಗಳು, ಉದ್ಯೋಗ ಮತ್ತು ತರಬೇತಿ ಅಧಿಕಾರಿಗಳು ಎಲ್ಲ ಸಿಬ್ಬಂದಿಗಳು ಹಾಗೂ ಉದ್ಯೋಗಾಕಾಂಕ್ಷಿ ಅಭ್ಯರ್ಥಿಗಳು ಹಾಜರಿದ್ದರು

## ಫ್ಯಾಷನ್ ಸ್ಪರ್ಧೆಯಲ್ಲಿ ನೇಹಾ ಚನ್ನಗಿರಿ ಪ್ರಥಮ ಸ್ಥಾನ



**ದಾವಣಗೆರೆ:** ಅಭಿನಿತ ಚಾರಿಟೇಬಲ್ ಟ್ರಸ್ಟ್‌ವತಿಯಿಂದ ಇತ್ತೀಚಿಗೆ ದಾವಣಗೆರೆಯ ಬಾಪೂಜಿ ಭವನಲ್ಲಿ ನಡೆದ ಫ್ಯಾಷನ್ ದಿವ ಪ್ರೈಡ್ ಐಶಾನ್ ಆಫ್ ಸೌತ್ ಇಂಡಿಯಾ–2025 ಸೀಸನ್ 7 ಯಶಸ್ವಿಯಾಗಿ ಆಯೋಜಿಸಲಾಯಿತು.

ದಾವಣಗೆರೆಯ ಹೆಸರಾಂತ ಚನ್ನಗಿರಿ ವಂಶದ ಶ್ರೀಮತಿ ರಶ್ಮಿ ಮತ್ತು ಭರತ ಎಸ್. ಚನ್ನಗಿರಿಯವರ ಸುಪುತ್ರಿ ಕುಮಾರಿ ನೇಹಾ ಚನ್ನಗಿರಿಯವರು ಈ ಫ್ಯಾಷನ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ದಾವಣಗೆರೆಯ ಆರ್.ಜಿ. ಕಾಲೇಜಿನ ತೃತೀಯ ವರ್ಷದ ಬಿ.ಬಿ.ಎ. ವ್ಯಾಸಂಗ ಮಾಡುತ್ತಿರುವ ನೇಹಾ ಚನ್ನಗಿರಿಯವರು ಚಿತ್ರಕಲೆ, ಸಾಂಸ್ಕೃತಿಕ ಚಟುವಟಿಕೆ ಸಂಗೀತ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವುದು ಶ್ಲಾಘನೀಯ. ಈ ಸಮಾರಂಭದಲ್ಲಿ ದೂಡಾ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ, ದಾವಣಗೆರೆ ಮಹಾನಗರ ಪಾಲಿಕೆಯ ಮಾಜಿ ಸದಸ್ಯ ಎ.ನಾಗರಾಜ್, ಅಭಿನಿತ ಚಾರಿಟೇಬಲ್ ಟ್ರಸ್ಟ್‌ನ ಸಂಸ್ಥಾಪಕರಾದ ಶ್ರೀಮತಿ ಫ್ಯಾಷನ್ ದಿವ ಎಂ.ಎನ್. ಶಿವಕುಮಾರ್ ಸ್ಟೇಟ್ ಪಾರ್ಕ್ ಮಾಲೀಕರಾದ ರೂಪಿತ್ ನಾಗರಾಜ್, ನಿಖಿತ ಶೆಟ್ಟಿ, ರೋಹಿತ್ ಕೂಡ್ಲಿ, ಫ್ಯಾಷನ್ ಗ್ರೂಮರ್, ಶಬದ್ ಖಾನ್, ಗೌರವ್ ಲೋಖ್ರೆ ಮುಂತಾದವರು ಉಪಸ್ಥಿತರಿದ್ದರು.

ಕುಮಾರಿ ನೇಹಾ ಚನ್ನಗಿರಿಯವರಿಗೆ ಚನ್ನಗಿರಿ ವಂಶಸ್ಥರು ಸೇರಿದಂತೆ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಹಾಗೂ ವಿವಿಧ ಸಂಘಟನೆಗಳು ಅಭಿಮಾನದಿಂದ ಅಭಿನಂದಿಸಿದ್ದಾರೆ.

## ಒಳಮೀಸಲಾತಿ ಹೋರಾಟ ಪಾದಯಾತ್ರೆಗೆ ಅಡ್ಡಿ ಪಡಿಸುವವರ ವಿರುದ್ಧ ಕ್ರಮಕ್ಕೆ ಆಗ್ರಹ

**ದಾವಣಗೆರೆ:** ಒಳಮೀಸಲಾತಿ ಹೋರಾಟದ ಪಾದಯಾತ್ರೆಗೆ ಅಡ್ಡಿಪಡಿಸುವವರನ್ನು ತಕ್ಷಣ ಬಂಧಿಸಿ ಕಾನೂನು ಕ್ರಮ ಜರುಗಿಸುವಂತೆ ಆಗ್ರಹಿಸಿ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿ ವತಿಯಿಂದ ಜಿಲ್ಲಾಧಿಕಾರಿಗಳ ಮುಖಾಂತರ ಮಂಗಳವಾರ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಮೈಸೂರು ಚಾಮುಂಡಿ ಬೆಟ್ಟದಲ್ಲಿ ಕಾರ್ಯಕ್ರಮ ಮಾಡುವ ಸಂದರ್ಭದಲ್ಲಿ ರಾಜಕೀಯದ ನಾಲ್ವರು ಬೆಂಬಲಿಗರು ಕಲ್ಲು ತೂರಲು ಪ್ರಯತ್ನಿಸಿದ್ದಾರೆ. ಅವರನ್ನು ಬಂಧಿಸುವ ಬದಲಿಗೆ ಕ್ರಾಂತಿಕಾರಿ ರಥಯಾತ್ರೆಯಲ್ಲಿ ಶಾಂತಿಯುತವಾಗಿ ಅರೆಬೆತ್ತಲೆ, ಧರಣಿ ಮಾಡುವವರನ್ನು ಬಂಧಿಸಿರುತ್ತಾರೆ. ಯಾವ ಕಾರಣಕ್ಕೆ ಅವರನ್ನು ಬಂಧಿಸಲಾಯಿತು ನಿಖರ ಮಾಹಿತಿಯನ್ನು ಜನರಿಗೆ ತಿಳಿಸಬೇಕು ಎಂದು ಆಗ್ರಹಿಸಿದರು.

ಮಾದಿಗ ಮೀಸಲಾತಿ ಹೋರಾಟ ಸಮಿತಿಯವರು ಬೀದಿಗಿಳಿದು ಹೋರಾಟ ಮಾಡಿದರೆ ಬಂಧಿಸುವುದಾಗಿ ಪೊಲೀಸರು ಹೇಳುತ್ತಿದ್ದಾರೆ.

ಮೈಸೂರಲ್ಲಿ ಸಂಚಾರಿ ಸಮಸ್ಯ ಆಗಲಿದೆ ಎಂಥ ನೆಪ ಹೇಳುತ್ತಿದ್ದಾರೆ. ಕ್ರಾಂತಿಕಾರಿ ರಥಯಾತ್ರೆ ಕಾರ್ಯಕರ್ತರನ್ನು ಮೈಕೈ ಮುಟ್ಟಿ ಎಳೆದಾಡುತ್ತಿದ್ದಾರೆ. ಪೊಲೀಸರು ಕಾರಣ ಇಲ್ಲದೆ ಹೋರಾಟಗಾರರನ್ನು ಬಂದಿಸುತ್ತಿದ್ದಾರೆ ಎಂದು ದೂರಿದರು.

ಯಾವ ಕಾರಣಕ್ಕೆ ರಥಯಾತ್ರೆ ತಡೆಯುತ್ತಿದ್ದಾರೆ ಎಂದು ತಿಳಿಸಲಿ. ತುಳಿತಕ್ಕೊಳಗಾಗಿರುವ ಮಾದಿಗ ಸಮಾಜಕ್ಕೆ ರಕ್ಷಣೆ ಕೊಡುವುದನ್ನು ಬಿಟ್ಟು ಮಾದಿಗರ ಹೋರಾಟ ಹತ್ತಿಕ್ಕುವ ದುಸ್ಸಾಹಸ ಮಾಡಲಾಗುತ್ತಿದೆ. ಮಾದಿಗ ಮೀಸಲಾತಿ ಹೋರಾಟ ಕ್ರಾಂತಿಕಾರಿ ಪಾದಯಾತ್ರೆ ಜೂನ್ 9 ರಂದು ಫ್ರೀಡಂ ಪಾರ್ಕ್‌ನಲ್ಲಿ ತಲುಪುವ ತನಕ ಪೊಲೀಸ್ ಬಂದೋಬಸ್ತು ಕಲ್ಪಿಸುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಸಿ. ಬಸವರಾಜ್, ಹೆಗ್ಗೆರೆ ರಂಗಪ್ಪ, ದುಗ್ಗಪ್ಪ ಜೆಡಿಎಸ್, ಹನುಮಂತಪ್ಪ, ಜಿಗಳಿ ಹಾಲೇಶ್, ಕೆ.ಸಿ. ನಿರಂಜನ ಮೂರ್ತಿ ಇನ್ನಿತರರು ಪಾಲ್ಗೊಂಡಿದ್ದರು.

# ಶಿವಪ್ರಿಯಾನಂದ ಸ್ವಾಮೀಜಿ ಅವರ ಪುರಪ್ರವೇಶ ಸಮಾರಂಭ

**ಗದಗ:** ಜೀವನದಲ್ಲಿ ಅತ್ಯಂತ ಕಠಿಣವಾದುದು ಬ್ರಹ್ಮಚರ್ಯ ಆಚರಣೆ ಮಾಡುವುದು ಹಾಗೂ ಸನ್ಯಾಸತ್ವ ಸ್ವೀಕರಿಸುವುದು. ಸ್ವಾಮಿ ವಿವೇಕಾನಂದ ತತ್ವಸಿದ್ಧಾಂತಗಳಿಂದ ಪ್ರಭಾವಕ್ಕೆ ಒಳಗಾಗಿ ಸನ್ಯಾಸತ್ವ ಪಡೆದಿರುವ ಶಿವಪ್ರಿಯಾನಂದ ಸ್ವಾಮೀಜಿ ಅವರು ಇನ್ನು ಮುಂದೆ ತಮ್ಮ ಬದುಕನ್ನು ಎಚ್ಚರಿಕೆಯಿಂದ ಹೆಜ್ಜೆ ಇಡಬೇಕಾದ ಜೀವನವಾಗಿರುತ್ತದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಶ್ರೀ ರಾಮಕೃಷ್ಣ ವಿವೇಕಾನಂದಾಶ್ರಮದ ಶಿವಪ್ರಿಯಾನಂದ ಸ್ವಾಮೀಜಿ(ಪುನೀತ ಮಹಾರಾಜ) ಸನ್ಯಾಸ ಸ್ವೀಕರಿಸಿದ ನಂತರ ಮಂಗಳವಾರ ಹಮ್ಮಿಕೊಂಡಿದ್ದ ಪುರಪ್ರವೇಶ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಿವಪ್ರಿಯಾನಂದ ಸ್ವಾಮೀಜಿ ಅವರ ಬದುಕಿನಲ್ಲಿ ಕೆಲವು ವರ್ಷಗಳು ಬಹು ಕಠಿಣವಾಗಿರುತ್ತವೆ. ಅವೆಲ್ಲವುಗಳನ್ನು ಮೆಟ್ಟಿ ನಿಂತು ದ್ವೇಷ, ರಾಗವಿಲ್ಲದೇ ಎಲ್ಲರನ್ನು ಅಪ್ಪಿಕೊಳ್ಳುವ ಮೂಲಕ ನಮ್ಮ ಭಾಗದ ಜನರನ್ನು ಆಕರ್ಷಿಸುವಂತಾಗಬೇಕು ಎಂದರು.



ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಅವರ ಶಿಷ್ಯರಾಗಿರುವ ಶಿವಪ್ರಿಯಾನಂದ ಸ್ವಾಮೀಜಿ ಅವರು ಶ್ರೀಗಳ ಆಧ್ಯಾತ್ಮವನ್ನು, ವಿವೇಕಾನಂದರ ತತ್ವಜ್ಞಾನವನ್ನು, ರಾಮಕೃಷ್ಣ ಪರಮಹಂಸರ ಸಂದೇಶಗಳನ್ನು ಕೇಳಿ ತಿಳಿದು ತಮ್ಮ ಜ್ಞಾನಕ್ಷಿತಿಜವನ್ನು ವಿಸ್ತರಿಸಿಕೊಂಡು ಸನ್ಯಾಸತ್ವನ್ನು ಪಡೆದು ಗದಗ ಕ್ಷೇತ್ರದಲ್ಲಿ ಅತ್ಯಂತ ಧೈರ್ಯದಿಂದ ಕಾಲಿಟ್ಟಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿದ್ಯಾಧರ ದೊಡ್ಡಮನಿ, ಬಿ.ಆರ್. ದೇವರಡ್ಡಿ, ಶರಣಪ್ಪಗೌಡ ಪಾಟೀಲ, ರಾಜೇಂದ್ರ ಗೊಡಬೋಲೆ, ರುದ್ರಮ್ಮ ಕೆರಕಲಮಟ್ಟಿ, ಶ್ರೀನಿವಾಸ ಹುಯಿಲಗೋಳ, ಶಿವಲೀಲಾ ಅಕ್ಕಿ, ಜಿ.ವಿ. ಬಳಗಾನೂರ, ಪ್ರಭು ಬುರಬುರೆ, ಶಿವಣ್ಣ ನೀಲಗುಂದ, ಚನ್ನಪ್ಪ ಜಗಲಿ, ಬಸವರಾಜ ಸುಂಕಾಪೂರ, ನೀಲಮ್ಮ ಬೋಳನವರ,

ಕೃಷ್ಣಗೌಡ ಪಾಟೀಲ, ಎಸ್.ವೈ. ಚಿಕ್ಕಟ್ಟಿ, ರವಿ ಮೂಲಿಮನಿ, ಷಣ್ಮುಖಪ್ಪ ಬಡ್ನಿ, ಆರ್. ಎನ್. ದೇಶಪಾಂಡೆ, ಮಲ್ಲಪ್ಪ ಕಲಗುಡಿ, ಸಿ.ಬಿ. ದೊಡ್ಡಗೌಡರ, ಸಿ.ಬಿ. ಕರಿಕಟ್ಟಿ, ಎನ್.ಎಸ್. ಹಿರೇಮನಿಪಾಟೀಲ, ಶಿವಾನಂದ ಮಾದಣ್ಣವರ, ಶಿವಪ್ಪ ಸಿಂಗಟಾಲಕೇರಿ, ರಾಮಚಂದ್ರ ಕುಲಕರ್ಣಿ, ಶಿವಕುಮಾರ ಶಿವನಗುತ್ತಿ ಇದ್ದರು. ಜೆ.ಕೆ. ಜಮಾದಾರ ನಿರ್ವಹಿಸಿದರು.

## ಮಹಾಂತೇಶ್ ಅಗಡಿ ನಿಧನಕ್ಕೆ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಸಂತಾಪ

**ದಾವಣಗೆರೆ:** ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಸೇವೆ ಸಲ್ಲಿಸುತ್ತಿದ್ದ ಅಪ್ಪಟ ಬಸವ ತತ್ವ ಪ್ರತಿಪಾದಕರು ಮತ್ತು ಮೇ ಒಂದನೇ ತಾರೀಖು ಬಸವ ಪರ ಸಂಘಟನೆಗಳು ಸೇರಿ ನಡೆಸಿದ ಬಸವ ಜಯಂತಿ ಉತ್ಸವ ನೇತೃತ್ವ ವಹಿಸಿದ್ದ ಶರಣ ಮಹಾಂತೇಶ್ ಅಗಡಿ ಅವರ ನಿಧನ ತುಂಬಲಾರದ ನಷ್ಟವಾಗಿದೆ ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ನುಡಿನಮನ ಸಲ್ಲಿಸಿದೆ.

ಶ್ರೀಯುತರ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ಮತ್ತು ಅವರ ಕುಟುಂಬದ ಸದಸ್ಯರಿಗೆ ಬಸವಾದಿ ಶಿವಶರಣರ ಕೃಪೆ ಸದಾ ಇರಲೆಂದು ಬಯಸುತ್ತೇವೆ. ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು.ತಿಳಿಸಿದೆ.

ಒಳಮೀಸಲಾತಿ ಹೋರಾಟ ಪಾದಯಾತ್ರೆಗೆ ಅಡ್ಡಿಪಡಿಸುವವರ ವಿರುದ್ಧ ಕ್ರಮಕ್ಕೆ ಆಗ್ರಹ

## ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನ ತೋಟಗಾರಿಕೆ ಇಲಾಖೆ ವತಿಯಿಂದ ವಿವಿಧ ಯೋಜನೆಗಳ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತ ರೈತರು ಅರ್ಜಿ ಸಲ್ಲಿಸಲು ಜೂನ್ 6 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ತಮ್ಮ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ಸಮೀಪದ ರೈತ ಸಂಪರ್ಕ ಕೇಂದ್ರದ ಸಹಾಯ ತೋಟಗಾರಿಕೆ ಅಧಿಕಾರಿಯವರನ್ನು ಸಂಪರ್ಕಿಸಲು ತೋಟಗಾರಿಕೆ ಉಪನಿರ್ದೇಶಕರಾದ ರಾಘವೇಂದ್ರ ಪ್ರಸಾದ್ ತಿಳಿಸಿದ್ದಾರೆ.

## ರಹಿಮಾನ್ ಸಾಬ್ ಎಲ್ ಅವರಿಗೆ ಪಿಎಚ್ ಡಿ ಪದವಿ



**ದಾವಣಗೆರೆ:** ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ರಹಿಮಾನ್ ಸಾಬ್ .ಎಲ್., ಇವರಿಗೆ ಬೆಂಗಳೂರು ವಿಶ್ವವಿದ್ಯಾಲಯ ಪಿಎಚ್ ಡಿ ಪದವಿ ನೀಡಿದೆ. ಇವರು ಪ್ರೊ. ಎಂ ಶಶಿಧರ್, ಮುಖ್ಯಸ್ಥರು, ಇತಿಹಾಸ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಇವರ ಮಾರ್ಗದರ್ಶನದಲ್ಲಿ , ಪ್ರಾಚೀನ ಭಾರತದಲ್ಲಿ ಸಾಮಾಜಿಕ ಜೀವನ (ಸಾಮಾನ್ಯ ಶಕವರ್ಷ 3ರಿಂದ 6ನೇ ಶತಮಾನ) ಎನ್ನುವ ವಿಷಯದ ಕುರಿತು ಮಹಾಪ್ರಬಂಧವನ್ನು ಮಂಡಿಸಿದ್ದರು. ರಹಿಮಾನ್ ಸಾಬ್. ಎಲ್. ರವರು ಶ್ರೀ ಲಾಲಾಸಾಹೇಬ್ ಹಾಗೂ ಶೇಖ್ ಚಿನ್ನಾಬೀಬಿ ದಂಪತಿಗಳ ಪುತ್ರನಾಗಿದ್ದಾರೆ.

# ಸಿಎಂ ಸಿದ್ದರಾಮಯ್ಯ ನಡೆಗೆ ಪ್ರತಿಪಕ್ಷದ ನಾಯಕ ಅಶೋಕ್ ವ್ಯಂಗ್ಯ



**ಬೆಂಗಳೂರು, ಮೇ 28:** ಭ್ರಷ್ಟಾಚಾರದ ಪಿತಾಮಹ ಎನಿಸಿಕೊಂಡಿರುವ ಕಾಂಗ್ರೆಸ್ ಪಕ್ಷದ ವಿರುದ್ಧ ಜೀವನವೆಲ್ಲಾ ಹೋರಾಟ ಮಾಡಿ, ನಂತರ ಅಧಿಕಾರಕ್ಕಾಗಿ ಅದೇ ಹುತ್ತದಲ್ಲಿ ಸೇರಿಕೊಂಡಿರುವ ಮಹಾನುಭಾವರು, ಭ್ರಷ್ಟಾಚಾರದ ಬಗ್ಗೆ ಮಾತನಾಡುವುದು ಈ ಶತಮಾನದ ಅತ್ಯಂತ ದೊಡ್ಡ ವಿಪರ್ಯಾಸ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಆಶೋಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಡೆಗೆ ವ್ಯಂಗ್ಯವಾಡಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಮೂಡಾದಲ್ಲಿ ಅಕ್ರಮವಾಗಿ ಕೋಟ್ಯಾಂತರ ರೂಪಾಯಿ ಬೆಲೆ ಬಾಳುವ 14 ಸೈಟು ಕಬಳಿಸಿ ಸಿಕ್ಕಿಬಿದ್ದಾಗ ವಾಪಸ್ಸುಕೊಟ್ಟ ಮಹಾನುಭಾವರು, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನೂರಾರು ಕೋಟಿ ರೂ.ಅವ್ಯವಹಾರ ಆಗಿದೆ ಎಂದು ವಿಧಾನಸಭೆಯ ಅಧಿವೇಶನದಲ್ಲಿ ಸ್ವತಃ ಒಪ್ಪಿಕೊಂಡ ಮೇಲೂ ಅಧಿಕಾರದಲ್ಲಿ ಮುಂದುವರೆಯುತ್ತಿರುವ ಮಹಾನುಭಾವರು ಎಂದು ಕುಹಕವಾಡಿದ್ದಾರೆ.

# ಕುಡಿಯುವ ನೀರಿನ ಕಾಮಗಾರಿ ಪರಿಶೀಲನೆ

**ತುಮಕೂರು :** ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಶುಕ್ರವಾರ ಮಧುಗಿರಿ ಪುರಸಭೆ ವ್ಯಾಪ್ತಿಯ ವಿವಿಧ ವಾರ್ಡುಗಳಿಗೆ ಭೇಟಿ ನೀಡಿ ಕುಡಿಯುವ ನೀರಿನ ಕಾಮಗಾರಿಗಳನ್ನು ಪರಿಶೀಲಿಸಿದರು.

ಪುರಸಭೆ ವ್ಯಾಪ್ತಿ ವಾರ್ಡ್ ನಂಬರ್ 11 ಹಾಗೂ 15ನೇ ವಾರ್ಡಿನಲ್ಲಿ ಕೈಗೊಂಡಿರುವ ಕುಡಿಯುವ ನೀರಿನ ಕಾಮಗಾರಿಗಳನ್ನು ವೀಕ್ಷಿಸಿದ ಅವರು, 11ನೇ ವಾರ್ಡಿನಲ್ಲಿ ಕಾಮಗಾರಿ ನಡೆಯುತ್ತಿರುವ ಸ್ಥಳದಲ್ಲಿ ಕುಡಿಯುವ ನೀರು ಪೋಲಾಗುತ್ತಿದ್ದು, ಯಾವೊಬ್ಬ ಗುತ್ತಿಗೆದಾರರು, ಅಧಿಕಾರಿಗಳೂ ಗಮನಿಸದೇ ಇರುವುದು ಅಧಿಕಾರಿಗಳ ಕರ್ತವ್ಯನಿರ್ಲಕ್ಷ್ಯತೆ ಎದ್ದು ಕಾಣಿಸುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಭಿವೃದ್ಧಿ ಕಾಮಗಾರಿ ನಡೆಯುವ ಸ್ಥಳದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಹಾಜರಿದ್ದು, ಕಾಮಗಾರಿ ಗುಣಮಟ್ಟವನ್ನು ಪರಿಶೀಲಿಸಬೇಕು. ಕಾಮಗಾರಿ ಸ್ಥಳಕ್ಕೆ ಕೂಡಲೇ ಇಂಜಿನಿಯರ್‌ಗಳನ್ನು ನಿಯೋಜಿಸಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಸುರೇಶ್ ಅವರಿಗೆ ನಿರ್ದೇಶನ ನೀಡಿದರು.

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅಮೃತ್ ಯೋಜನೆಯಡಿ ಕುಡಿಯುವ ನೀರಿನ ಕಾಮಗಾರಿಗಳು ನಡೆ–ಯುತ್ತಿದ್ದು, ಕುಡಿಯುವ ನೀರಿನ



ಕಾಮಗಾರಿ ಕೈಗೊಳ್ಳುವಾಗ ನೀರಿನ ಪೈಪ್‌ಲೈನ್‌ಗೆ ಚರಂಡಿ ನೀರು ಮಿಶ್ರಣವಾಗದಂತೆ ಎಚ್ಚರಿಕೆ ವಹಿಸಬೇಕು. ಮಳೆಗಾಲ ವಾಗಿರುವುದರಿಂದ ಮಳೆ ನೀರು ತೆರೆದ ಚರಂಡಿಗೆ ಸೇರಿ ನೀರಿನ ಅರಿವು ಹೆಚ್ಚಾಗಿ ಕಲುಷಿತ ನೀರು ಕುಡಿಯುವ ನೀರಿನ ಪೈಪ್‌ಲೈನ್‌ಗೆ ಸೇರುವ ಸಾಧ್ಯತೆಯಿರುತ್ತದೆ. ಕಲುಷಿತ ನೀರಿನಿಂದ ನಾಗರಿಕರಿಗೆ ಆರೋಗ್ಯ ಸಮಸ್ಯೆಗಳು ಎದುರಾಗಲಿರುವ ಕಾರಣ ತಕ್ಷಣವೇ ತೆರೆದ ಚರಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಬೇಕು. ಪೈಪ್ ಲೈನ್ ಕಾಮಗಾರಿ ಪ್ರಗತಿಗೆ ಅಸಡ್ಡೆ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಿದರು.

ಮಧುಗಿರಿ ಪುರಸಭೆಯಿಂದ ಸರಬರಾಜು ಮಾಡುತ್ತಿರುವ ಕುಡಿಯುವ ನೀರು ಕೆಟ್ಟ ವಾಸನೆಯಿಂದ ಕೂಡಿದೆ ಎಂದು ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆಯಲ್ಲಿ ಇಂದು ಭೇಟಿ ನೀಡಿ ಪರಿಶೀಲಿಸಲಾಗುತ್ತಿದೆ. ಕುಡಿಯುವ ನೀರಿನ ಯಾವುದೇ ಮೂಲಗಳನ್ನು ಕಡ್ಡಾಯವಾಗಿ ಪ್ರಯೋಗಾಲಯದಲ್ಲಿ ಪರೀಕ್ಷೆಗೊಳಪಡಿಸಬೇಕು. ಕುಡಿಯಲು ಯೋಗ್ಯವಾದ ನೀರನ್ನು ಮಾತ್ರ ಜನರಿಗೆ ಒದಗಿಸಬೇಕು ಎಂದರಲ್ಲದೆ, ಕಳೆದ ವರ್ಷವಷ್ಟೇ ಮಧುಗಿರಿ ತಾಲ್ಲೂಕಿನ ಚಿನ್ನೇನಹಳ್ಳಿಯಲ್ಲಿ ಕಲುಷಿತ ನೀರು ಸೇವಿಸಿ ಸಾವಿನ ಪ್ರಕರಣ ವರದಿಯಾಗಿತ್ತು. ಮತ್ತೊಮ್ಮೆ ಇಂತಹ ಪ್ರಕರಣಗಳು ಮರುಕಳಿಸದಂತೆ ಅಧಿಕಾರಿಗಳು ಜಾಗ್ರತೆವಹಿಸಬೇಕು ಎಂದು ಸೂಚಿಸಿದರು. ನಂತರ ಪಟ್ಟಣದ ರಾಜೀವ್‌ಗಾಂಧಿ ಕ್ರೀಡಾಂಗಣದ ಬಳಿಯಿರುವ ಜೆ.ಎಸ್.ಆಸ್ಪತ್ರೆಗೆ ಭೇಟಿ ನೀಡಿ ಆಸ್ಪತ್ರೆ ಸ್ವಚ್ಛತೆ, ಸಿಬ್ಬಂದಿ ಸಂಖ್ಯಾಬಲವನ್ನು ಪರಿಶೀಲಿಸಿದರು.

ಬಳಿಕ ಕೊರಟಗೆರೆ ಪಟ್ಟಣದ ಹೊರವಲಯದಲ್ಲಿರುವ ಕಾಮೇನ ಹಳ್ಳಿಗೆ ಭೇಟಿ ನೀಡಿ ಅಮೃತ್ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳನ್ನು ಸಮರ್ಪಕವಾಗಿ ಪೂರ್ಣಗೊಳಿಸಬೇಕು. ಕಲುಷಿತ ನೀರಿನಿಂದ ಜನರ ಆರೋಗ್ಯದಲ್ಲಿ ಏರು–ಪೇರು, ವಾಂತಿ–ಬೇಧಿ, ಸಾವಿನ ಪ್ರಕರಣಗಳು ವರದಿಯಾದರೆ ಸಂಬಂಧಿಸಿದ ಅಧಿಕಾರಿಗಳೇ ಹೊಣೆ ಎಂದು ತಾಕೀತು ಮಾಡಿದರು.

ನಂತರ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಸೌಲಭ್ಯ ಪಡೆದಿರುವ ಕೊರಟಗೆರೆ ತಾಲ್ಲೂಕು ಪಾತಗಾನ ಹಳ್ಳಿಯ ರೈತ ಶ್ರೀನಿವಾಸ್ ಅವರ ಜಮೀನಿಗೆ ಭೇಟಿ ನೀಡಿ ಕೊಳವೆಬಾವಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿರುವ ಬಗ್ಗೆ ಪರಿಶೀಲಿಸಿದರು. ಇದೇ ವೇಳೆ ಮಾತನಾಡಿದ ಅವರು ಗಂಗಾ ಕಲ್ಯಾಣ ಯೋಜನೆಯಡಿ ಬಾಕಿಯಿರುವ ಕೊಳವೆಬಾವಿ ಕೊರೆಯುವ, ಈಗಾಗಲೇ ಕೊರೆದಿರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಧುಗಿರಿ ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ, ತಹಶೀಲ್ದಾರ್ ಶಿರಿನ್‌ತಾಜ್, ಕೊರಟಗೆರೆ ತಹಶೀಲ್ದಾರ್ ಮಂಜುನಾಥ್ ಹಾಗೂ ಮತ್ತಿತರ

# ಶಿಕ್ಷಕರು ಮಕ್ಕಳ ಜೊತೆ ಉತ್ತಮ ಭಾಂದವ್ಯ ಹೊಂದಬೇಕು



**ಶಿವಮೊಗ, ಮೇ 23:** ವೃತ್ತಿಗೆ ಗೌರವ ಕೊಡಿ, ಯಾವ ವ್ಯಕ್ತಿ ವೃತ್ತಿಗೆ ಗೌರವ ಕೊಡುತ್ತಾನೋ ಆ ವ್ಯಕ್ತಿಯ ಬದುಕು ಹಸನಾಗುವುದು, ಪ್ರತಿಯೊಬ್ಬ ಶಿಕ್ಷಕರು ಮಕ್ಕಳ ಜೊತೆ ಉತ್ತಮ ಒಡನಾಟದಿಂದ ಎಂದು ಶ್ರೀ ಆದಿಚುಂಚನಗಿರಿ ಶಿವಮೊಗ್ಗ ಶಾಖಾ ಮಠದ ಶ್ರೀ ಸಾಯಿನಾಥ ಸ್ವಾಮೀಜಿಯವರು ಹೇಳಿದರು.

ಅವರು ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್, ಶಿವಮೊಗ್ಗ ಶಾಖೆಯ, ಶರಾವತಿ ನಗರದ ಬಿಜಿಎಸ್ ವಸತಿ ಶಾಲೆಯ ಬಿಜಿಎಸ್ ಸಭಾ ಭವನದಲ್ಲಿ ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟಿನ ವ್ಯಾಪ್ತಿಯ ವಿವಿಧ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶಿಕ್ಷಕರ ಮೂರು ದಿನಗಳವರೆಗೆ ನಡೆದ ಕಾರ್ಯಾಗಾರದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಶಿಕ್ಷಕರು ಮಕ್ಕಳಿಗೆ ಬೇಕು–ಬೇಡಗಳ ಬಗ್ಗೆ ತಿಳಿದು ತರಬೇತಿ ಕೊಟ್ಟಾಗ ಮಾತ್ರ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯ. ಪುನಶ್ಚೇತನ ಕಾರ್ಯಕ್ರಮಗಳು ಶಿಕ್ಷಕರಿಗೆ ಮೂರು ದಿನಗಳಿಂದ ನಡೆಯುತ್ತಿದ್ದು, ಶಿಕ್ಷಕರು ವರ್ಷಪೂರ್ತಿ ಶೈಕ್ಷಣಿಕ ಜೀವನದಲ್ಲಿ ಮಕ್ಕಳ ಜೊತೆ ತೊಡಗಿಸಿಕೊಂಡಿರುತ್ತೀರಿ, ಬೇಸಿಗೆ ರಜೆ ಬಂದಿರುವುದರಿಂದ ಬಹಳ ಸಂತೋಷದಿಂದ ಕುಟುಂಬವರ್ಗದವರ ಜೊತೆಗೆ ಸಮಯವನ್ನು ಕಳೆಯುತ್ತಿರುತ್ತೀರಿ, ಶಾಲೆ ಆರಂಭವಾಗುತ್ತಿದ್ದು, ಶಿಕ್ಷಕರಾದ ನೀವು ಮಕ್ಕಳೇ ಸರ್ವಸ್ವ, ವೃತ್ತಿ ಜೀವನ ಶಿಕ್ಷಕರಿಗೆ ವ್ರತ ಇದ್ದ ಹಾಗೆ ಎಂಬುದನ್ನು ಅರಿಯಬೇಕು ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಮನೋಶಾಸ್ತ್ರಜ್ಞ ಡಾ. ಅರವಿಂದ್ ಮಾತನಾಡುತ್ತಾ, ಶಿಕ್ಷಕರು ತರಗತಿಯಲ್ಲಿ ಮಕ್ಕಳ ಮೊದಲ ಸಮಸ್ಯೆಯನ್ನು ಅರಿತು ಅದನ್ನು ಬಗೆಹರಿಸುವ ನಿಟ್ಟಿನಲ್ಲಿ ಗಮನಹರಿಸಬೇಕು. ಈ ರೀತಿ ಮಾಡಿದಾಗ ಮಕ್ಕಳ ಮನಸ್ಸಿನಲ್ಲಿನ ಭಾವನೆಗಳನ್ನು ಅರಿತುಕೊಳ್ಳಲು ಸಹಾಯಕವಾಗುತ್ತದೆ. ಮಕ್ಕಳ ಮನಸ್ಸನ್ನು ಹಾಗೂ ಅವರ ಸಮಸ್ಯೆಗಳನ್ನು ಅರಿತು ಬಗೆಹರಿಸುವ ವ್ಯವಸ್ಥೆ ನಮ್ಮ ದೇಶದಲ್ಲಿ ಕಡಿಮೆ. ಇಂತಹ ಸಮಯದಲ್ಲಿ ಶಿಕ್ಷಕರಿಗೆ ಕಾರ್ಯಾಗಾರ ನಡೆಸುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಬಿಜಿಎಸ್ ಶಾಲಾ ಕಾಲೇಜಿನ ಪ್ರಾಂಶುಪಾಲ ಸುರೇಶ್ ಎಸ್.ಹೆಚ್., ಬಿಜಿಎಸ್ ವಸತಿ ಶಾಲೆಯ ಮುಖ್ಯ ಶಿಕ್ಷಕ ಗಿರೀಶ್, ಆದಿಚುಂಚನಗಿರಿ ಸಂಯುಕ್ತ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಪ್ರಾಂಶುಪಾಲ ದಿವ್ಯ ಕರಣಂ, ಮುಖ್ಯ ಶಿಕ್ಷಕಿ ವೀಣಾ ಇನ್ನೂ ಮುಂತಾದವರಿದ್ದರು.

## ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ: ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಬಳ್ಳಾರಿ:** ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಯಶವಂತನಗರದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗೆ 1 ನೇ ತರಗತಿ ಮತ್ತು 6 ನೇ ತರಗತಿಯ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಂದ ಪ್ರಸಕ್ತ ಸಾಲಿಗೆ ವಸತಿ ನಿಲಯ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಇದೇ ವಸತಿ ಶಾಲೆಯಲ್ಲಿ ಪಡೆದು ಭರ್ತಿ ಮಾಡಿ ಜೂ 06 ರೊಳಗಾಗಿ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08395–200073 ಗೆ ಸಂಪರ್ಕಿಸಬಹುದು ಎಂದು ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮದ ನಾಗರೀಕರು ಸಹ 'ಅರಿವು ಕೇಂದ್ರ'ದ ಸದುಪಯೋಗ ಪಡೆಯಬೇಕು : ಹೇಮಂತ್

**ಶಿವಮೊಗ್ಗ :** ಗ್ರಾಮೀಣ ಪ್ರದೇಶದ ಮಕ್ಕಳಲ್ಲಿ ಓದುವ ಹವ್ಯಾಸವನ್ನು ಪ್ರೋತ್ಸಾಹಿಸಲು ಆರಂಭಿಸಲಾಗಿರುವ 'ಅರಿವು' ಕೇಂದ್ರಗಳು ಉತ್ತಮವಾಗಿ ನಡೆಯುತ್ತಿದ್ದು ಗ್ರಾಮಗಳ ಪ್ರತಿ ನಾಗರೀಕರು ಸಹ ಇದರ ಸದುಪಯೋಗ ಪಡೆಯಬೇಕೆಂದು ಜಿಲ್ಲಾ ಪಂಚಾಯತ್ ಸಿಇಓ ಹೇಮಂತ್ ಎನ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಇವರ ಸಹಯೋಗದಲ್ಲಿ ಶುಕ್ರವಾರ ಜಿ.ಪಂ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಚಿಣ್ಣರ ಚೆಲುವು–ಬೇಸಿಗೆ ಸಡಗರದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾ.ಪಂ ವ್ಯಾಪ್ತಿಯ ಅರಿವು ಕೇಂದ್ರಗಳಲ್ಲಿ ನಡೆದ ಚಿಣ್ಣರ ಚೆಲುವು–ಬೇಸಿಗೆ ಸಡಗರ ಶಿಬಿರವು ನಾಲ್ಕು ವಾರಗಳ ಕಾಲ ಅತ್ಯುತ್ತಮವಾಗಿ ನಡೆದಿದ್ದು, ಉತ್ತಮವಾಗಿ ಬೇಸಿಗೆ ಶಿಬಿರವನ್ನು ಆಯೋಜಿಸಿ ಯಶಸ್ವಿಗೊಳಿಸಿದ ಗ್ರಾ.ಪಂ ಅಧಿಕಾರಿ, ಸಿಬ್ಬಂದಿಗಳು, ತಾ.ಪಂ ಇಓ, ಸಹಾಯಕ ನಿರ್ದೇಶಕರು, ಗ್ರಂಥಾಲಯ



ಮೇಲ್ವಿಚಾರಕರಿಗೆ ಧನ್ಯವಾದಗಳು ಎಂದು ಅಭಿನಂದಿಸಿದರು.

ಅರಿವು ಕೇಂದ್ರಗಳಲ್ಲಿ ಅಗತ್ಯವಾಗಿ ಬೇಕಿರುವ ಮೂಲಭೂತ ಸೌಕರ್ಯಗಳ ಕುರಿತು ಗ್ರಂಥಾಲಯ ಮೇಲ್ವಿಚಾರಕರು, ವಿದ್ಯಾರ್ಥಿಗಳು, ಇತರೆ ಅಧಿಕಾರಿ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಸವಿವರವಾಗಿ ತಿಳಿಸಿದ್ದು, ಅರಿವು ಕೇಂದ್ರಗಳಲ್ಲಿ ಮಕ್ಕಳಿಗೆ ಅಗತ್ಯವಾಗಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸುವೆಡೆ ಹಾಗೂ ಇವುಗಳ ಅಭಿವೃದ್ಧಿ ಕಡೆ ಗಮನ ಹರಿಸುತ್ತೇವೆ ಎಂದರು.

ಅರಿವು ಕೇಂದ್ರ ಕೇವಲ ಮಕ್ಕಳಿಗೆ ಮಾತ್ರವಲ್ಲ, ಗ್ರಾಮಗಳ ಪ್ರತಿ ನಾಗರೀಕರು ದಿನ ಪತ್ರಿಕೆ, ಇತರೆ ಪುಸ್ತಕಗಳನ್ನು ಓದುವ ಮೂಲಕ ಮಾಹಿತಿ ಪಡೆಯಲು ಒಂದು ಉತ್ತಮ ಸ್ಥಳವಾಗಿದೆ. ಓದುವ ಹವ್ಯಾಸ ಬೆಳೆಸುವುದು ಇದರ ಮುಖ್ಯ ಉದ್ದೇಶವಾಗಿದ್ದು ಮಕ್ಕಳು, ನಾಗರೀಕರ ಸಬಲೀಕರಣಕ್ಕೆ ಈ ಓದು ಸಹಕಾರ ನೀಡಲಿದೆ. 80 ವರ್ಷ ಮೀರಿದ ವೃದ್ದರೂ ಅರಿವು ಕೇಂದ್ರಗಳಿಗೆ ಭೇಟಿ ನೀಡಿ, ದಿನಪತ್ರಿಕೆಗಳು, ಇತರೆ ಪುಸ್ತಕಗಳನ್ನು ಓದುತ್ತಿರುವುದನ್ನು ಕಾಣುತ್ತಿದ್ದೇವೆ. ಮಕ್ಕಳ ಜೊತೆ ಪೋಷಕರೂ ಅರಿವು ಕೇಂದ್ರಗಳಿಗೆ ಭೇಟಿ ನೀಡಬೇಕು ಎಂದರು

ಅರಿವು ಕೇಂದ್ರಗಳಿಗೆ ಇನ್ನು ಮುಂದೆ ವೇಳಾಪಟ್ಟಿಯನ್ನು ನೀಡಲಾಗುವುದು. ಮಕ್ಕಳಿಗೆ ಪಠ್ಯೇತರ ಹಾಗೂ ವೈವಿಧ್ಯಮಯ ಚಟುವಟಿಕೆಗಳು ಇಷ್ಟವಾಗುತ್ತವೆ. ಈ ನಿಟ್ಟಿನಲ್ಲಿ ವೇಳಾಪಟ್ಟಿ ಸಿದ್ದಪಡಿಸಿ, ಪ್ರತಿದಿನ ವಿಭಿನ್ನ ಚಟುವಟಿಕೆಗಳನ್ನು ಕೈಗೊಳ್ಳಲಾಗುವುದು. ಇಂತಹ ಚಟುವಟಿಕೆಗಳು ಮಕ್ಕಳ ಸರ್ವತೋಮುಖ ಅಭಿವೃದ್ಧಿಗೂ ಸಹಕಾರಿಯಾಗುತ್ತದೆ ಎಂದರು.

ಇನ್ನು ಮುಂದೆ ವರ್ಷದಲ್ಲಿ ಎರಡು ಬಾರಿ ಅಂದರೆ ಬೇಸಿಗೆ ಮತ್ತು ದಸರಾ ರಜೆಯಲ್ಲೂ ಶಿಬಿರ ನಡೆಸಲು ಯೋಚಿಸಲಾಗುತ್ತಿದೆ. ಹಾಗೂ ಅರಿವು ಕೇಂದ್ರಗಳಲ್ಲಿ ಮಕ್ಕಳಲ್ಲಿ ಓದುವ ಹವ್ಯಾಸ ಉತ್ತೇಜಿಸಲು ವಾರಕ್ಕೊಮ್ಮೆ ಸರ್ಕಾರಿ ಶಾಲಾ ಶಿಕ್ಷಕರು ಭೇಟಿ ನೀಡುವಂತೆ ಆದೇಶಿಸಲಾಗುವುದು ಎಂದು ತಿಳಿಸಿದರು.

ವೈಯಕ್ತಿಕವಾಗಿ ನಾನು ಗ್ರಂಥಾಲಯವನ್ನು ಹೆಚ್ಚು ಬಳಕೆ ಮಾಡಿಕೊಂಡಿದ್ದೇನೆ. ಭಾರತೀಯ ಆಡಳಿತ ಸೇವೆ ಪರೀಕ್ಷೆಗೆ ಸಿದ್ದತೆ ಮಾಡಿಕೊಳ್ಳುವ ವೇಳೆ ನಾನು ಸರ್ಕಾರಿ ಗ್ರಂಥಾಲಯವನ್ನು ಯಥೇಚ್ಛವಾಗಿ ಉಪಯೋಗ ಮಾಡಿಕೊಂಡಿದ್ದೇನೆ. ಗ್ರಂಥಾಲಯಗಳಲ್ಲಿ ವಿದ್ಯಾರ್ಥಿಗಳು ಯಾವುದೇ ಅಡಚಣೆಗಳಿಲ್ಲದೆ, ನೆಮ್ಮದಿಯಿಂದ ಓದಲು ಸಾಧ್ಯವಾಗುತ್ತದೆ.

ಈ ಬೇಸಿಗೆ ಶಿಬಿರದಲ್ಲಿ ಗ್ರಾ.ಪಂ ವ್ಯಾಪ್ತಿಯ ಯಾವುದೇ ವಿದ್ಯಾರ್ಥಿಗಳು, ರಜೆಗಾಗಿ ಬಂದಿರುವ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು. ಪಠ್ಯೇತರ ಚಟುವಟಿಕೆಗಳು, ಸೃಜನಾತ್ಮಕತೆ ಉತ್ತೇಜಿಸುವ ಚಟುವಟಿಕೆಗಳನ್ನು ಹೆಚ್ಚಾಗಿ ಕೈಗೊಳ್ಳಲಾಗುತ್ತದೆ. ಗ್ರಾ.ಪಂ ಹಾಗೂ ತಾಲ್ಲೂಕು ಮಟ್ಟದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಿವಿಧ ರೀತಿಯ ಸ್ಪರ್ಧೆಗಳನ್ನು ಏರ್ಪಡಿಸಿದ್ದು ಅಲ್ಲಿ ವಿಜೇತರಾದವರಿಗೆ ಇಂದು ಜಿಲ್ಲಾ ಪಂಚಾಯತ್‌ನಲ್ಲಿ ಜಿಲ್ಲಾ ಮಟ್ಟದ ಚೆಸ್, ಕೇರಂ, ಚಿತ್ರಕಲೆ ಮತ್ತು ರಸಪ್ರಶ್ನೆ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು ಎಂದು ತಿಳಿಸಿದರು.

# ಅಮೃತ ಭಾರತ್ ಯೋಜನೆಯಡಿ ಅಭಿವೃದ್ದಿಗೊಂಡ ಗದಗ ರೈಲ್ವೆ ಸ್ಟೇಷನ್ ಲೋಕಾರ್ಪಣೆ

**ಗದಗ :** ಕರ್ನಾಟಕದ ರೈಲ್ವೆ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ 2025–26ರಲ್ಲಿ 7600 ಕೋಟಿ ರೂ. ಅನುದಾನ ಒದಗಿಸಿದ್ದಾರೆ. ಕಳೆದೊಂದು ದಶಕದಲ್ಲಿ ಪ್ರತಿ ವರ್ಷ ಕರ್ನಾಟಕಕ್ಕೆ 7 ಸಾವಿರ ಕೋಟಿ ರೂ.ಗೂ ಹೆಚ್ಚು ಅನುದಾನ ಒದಗಿಸಿದ್ದು, ಸದ್ಯ 51 ಸಾವಿರ ಕೋಟಿ ರೂ. ಕಾಮಗಾರಿ ಪ್ರಗತಿಯಲ್ಲಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಅವರು ಹೇಳಿದರು.

ಅಮೃತ ಭಾರತ್ ರೈಲ್ವೆ ಸ್ಟೇಷನ್ ಯೋಜನೆಯಡಿ 23.24 ಕೋಟಿ ರೂ. ವೆಚ್ಚದಲ್ಲಿ ಪುನರಾಭಿವೃದ್ಧಿ ಕಂಡ ಗದಗ ರೈಲ್ವೆ ನಿಲ್ದಾಣ ಲೋಕಾರ್ಪಣೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಸರಕಾರ ಪ್ರತಿ ವರ್ಷ 7 ಸಾವಿರ ಕೋಟಿ ರೂ. ನೀಡುವ ಮೂಲಕ ಅತ್ಯಂತ ಗರಿಷ್ಠ ಅನುದಾನ ಒದಗಿಸಿ ರಾಜ್ಯದ ರೈಲ್ವೆ ಯೋಜನೆಗೆ ವೇಗ ನೀಡಿದೆ ಎಂದರು.

2014 ರಲ್ಲಿ ದೇಶದಲ್ಲಿ 21–22 ಸಾವಿರ ಕಿ.ಮೀ. ರೈಲ್ವೆ ಮಾರ್ಗ ವಿದ್ಯುದ್ದೀಕರಣ ಆಗಿತ್ತು. ಸದ್ಯ 69 ಸಾವಿರ ಕಿ.ಮಿ. ಮಾರ್ಗವನ್ನು ವಿದ್ಯುದ್ದೀಕರಣ ಮಾಡಲಾಗಿದೆ. ಕೇವಲ ದಶಕದ ಅವಧಿಯಲ್ಲಿ 40 ಸಾವಿರ ಕಿ.ಮೀ. ವಿದ್ಯುದ್ದೀಕರಣ ಮಾಡಿರುವುದು ದಾಖಲೆ ಮಾತ್ರವಲ್ಲದೇ ಜಗತ್ತಿನಲ್ಲಿಯೇ ರೈಲ್ವೆ ಮಾರ್ಗ ವಿದ್ಯುದ್ದೀಕರಣ ಹೊಂದಿದ ರಾಷ್ಟ್ರಗಳಲ್ಲಿ ಭಾರತ 2ನೇ ಸ್ಥಾನದಲ್ಲಿದೆ ಎಂದರು.

ರೈಲ್ವೆಗಳ ವಿದ್ಯುದ್ದೀಕರಣದಿಂದ ವಿದೇಶದಿಂದ ಆಮದು ಮಾಡಿಕೊಳ್ಳುತ್ತಿದ್ದ ಡಿಸೇಲ್ ಮೇಲಿನ ಅವಲಂಬನೆ ಹಾಗೂ ವಾಯು ಮಾಲಿನ್ಯ ಕಡಿಮೆಯಾಗಲು



ಕಾರಣವಾಗಿದೆ. ಸದ್ಯ ದೇಶದ 99 ಪ್ರತಿಶತ ರೈಲುಗಳು ವಿದ್ಯುತ್‌ನಿಂದ ಓಡುತ್ತಿದ್ದು, ಈ ಪೈಕಿ ಶೇ. 50 ರಷ್ಟು ಕಲ್ಲಿದ್ದಲು ಮೂಲಕ ಉತ್ಪತ್ತಿಯಾಗುವ ವಿದ್ಯುತ್ ಬಳಕೆ ಮಾಡಲಾಗುತ್ತಿದ್ದರೆ, ಇನ್ನುಳಿದ ಶೇ.50 ರಷ್ಟು ವಿದ್ಯುತ್‌ನ್ನು ಸೋಲಾರ್, ಪವನ ವಿದ್ಯುತ್ ನಿಂದ ಪಡೆದು 640 ಕೋಟಿ ಲೀಟರ್ ಡೀಸೆಲ್ ಉಳಿತಾಯ ಮಾಡಿದ್ದೇವೆ ಎಂದರು.

ಕರ್ನಾಟಕದಲ್ಲಿ 1659 ಕಿ.ಮೀ. ಹೊಸ ರೈಲ್ವೆ ಮಾರ್ಗ ಅನುಷ್ಠಾನಗೊಳಿಸಲಾಗುತ್ತಿದ್ದು, ಇದು ಶ್ರೀಲಂಕಾದ ಒಟ್ಟು ರೈಲ್ವೆ ಜಾಲಕ್ಕಿಂತ ಹೆಚ್ಚಾಗಿದೆ. ಅದೇ ರೀತಿ ರೈಲ್ವೆ ಸುರಕ್ಷಾ ಕ್ಷೇತ್ರಕ್ಕೂ ಆದ್ಯತೆ ನೀಡಿ–ದ್ದು, ಒಟ್ಟಾರೆ 1,16,514 ಕೋಟಿ ರೂ. ವ್ಯಯ ಮಾಡಲಾಗುತ್ತಿದೆ. ಗಂಟೆಗೆ 130 ಕಿ.ಮೀ. ವೇಗದಲ್ಲಿ ವಂದೇ ಭಾರತ್ ರೈಲುಗಳು ಓಡಾಡುತ್ತಿರುವುದು ದೇಶ ಪ್ರಗತಿ ಪಥದಲ್ಲಿ ಸಾಗುತ್ತಿರುವುದಕ್ಕೆ ಸಾಕ್ಷಿಯಾಗಿದೆ ಎಂದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ರಾಜಸ್ಥಾನದ ಬಿಕಾನೇರ್ ರೈಲು ನಿಲ್ದಾಣದಲ್ಲಿ ವರ್ಚುವಲ್ ಮೂಲಕ ಈ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಅಮೃತ ಭಾರತ್ ಸ್ಟೇಶನ್ ಪುನರಾಭಿವೃದ್ಧಿ ಯೋಜನೆಯಡಿ ದೇಶದಲ್ಲಿ ಆಧುನಿಕ ಮೂಲ ಸೌಕರ್ಯವುಳ್ಳ ರೈಲ್ವೆ ಸೇವೆ ಒದಗಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಇದರಿಂದ ದೇಶ ಹೊಸ ಪ್ರಗತಿಯತ್ತ ಸಾಗುತ್ತಿದೆ. ಪ್ರತಿ ರಾಜ್ಯದಲ್ಲಿಯೂ ಯುವಜನರಿಗೆ ಉದ್ಯೋಗ ಅವಕಾಶ ಲಭಿಸುತ್ತಿವೆ. ಅಮೃತ ಭಾರತ ಸ್ಟೇಶನ್ ಯೋಜನೆಯು ಸಂಸ್ಕೃತಿಯ ಭಾರತ ದೇಶದ ಸಂಸ್ಕೃತಿಯ ಪ್ರತೀಕವಾಗಿದೆ. ರೈಲ್ವೆ ಸ್ವಚ್ಛತೆ ಹಾಗೂ ಸಂರಕ್ಷಣೆಗೆ ಸಾರ್ವಜನಿಕರ ಜವಾಬ್ದಾರಿ ಮಹತ್ತರವಾಗಿದ್ದು ಈ ಹಿನ್ನೆಲೆಯಲ್ಲಿ ರೈಲಿನ ಸ್ವಚ್ಛತೆ ಕಾಪಾಡಿಕೊಳ್ಳಬೇಕಾಗಿದೆ. ಕಾರ್ಮಿಕರಿಗೆ, ಉದ್ಯಮಿದಾರರಿಗೆ, ವ್ಯಾಪಾರಸ್ಥರಿಗೆ ಸರಕು ಸಾಗಾಣಿ–ಕೆ ಮಾಡಲು ಅತ್ಯಂತ ಕಡಿಮೆ ವೆಚ್ಚದಲ್ಲಿ ಕೈಗೆಟಕುವ ದರದಲ್ಲಿ ರೈಲ್ವೆ ಸೌಲಭ್ಯವು ದೊರಕಿದಂತಾಗಿದೆ ಎಂದರು. ದೇಶದಲ್ಲಿ ಭಯೋತ್ಪಾದಕರ ಹಾಗೂ ನುಸುಳು ಕೋರರ, ದೇಶದ್ರೋಹಿಗಳ ಹುಟ್ಟು ಅಡಗಿಸಿ ನಮ್ಮ ಸೇನೆಯು ಶೌರ್ಯದಿಂದ ಹೋರಾಡಿದೆ. ಅಪ್ರತಿಮ ಪರಾಕ್ರಮ ವನ್ನು ಪ್ರದರ್ಶಿಸಿದೆ. ಉಗ್ರರ ದಮನ ಮಾಡಲು ಚಕ್ರವ್ಯೂಹ ರಚಿಸಿ ಸಿಂಧೂರ ಕಾರ್ಯಾಚರಣೆ ಮಾಡಿ ಯಶಸ್ವಿಯಾಗಿದ್ದು, ಇನ್ನು ಮುಂದೆಯೂ ದೇಶದಲ್ಲಿ ಭಯೋತ್ಪಾದನೆ ಮರುಕಳಿಸಿದರೆ ಇದರ ಪರಿಣಾಮ ಭಯಂಕರವಾಗಿ ಭಯೋತ್ಪಾದಕರು ಎದುರಿಸಬೇಕಾಗುತ್ತದೆ ಎಂಬುದನ್ನು ಮನವರಿಕೆ ಮಾಡಿಕೊಡಲಾಗಿದೆ.

ಸಂಸದ ಬಸವರಾಜ ಬೊಮ್ಮಾಯಿ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿ, ಗದಗ ರೈಲ್ವೆ ನಿಲ್ದಾಣದ ಪುನರ್ ಅಭಿವೃದ್ಧಿ ಈ ಭಾಗದ ಕೈಗಾರಿ–ಕೆ, ವಾಣಿಜ್ಯ ಮತ್ತು ಪ್ರವಾಸೋದ್ಯಮಕ್ಕೆ ಬಲ ತುಂಬಿದೆ. 1884 ರಲ್ಲಿ ಆರಂಭವಾದ ಗದಗ ರೈಲ್ವೆ ನಿಲ್ದಾಣಕ್ಕೆ ಭವ್ಯ ಇತಿಹಾಸವಿದೆ. ಇಂಥ ನಿಲ್ದಾಣವನ್ನು ಅಭಿವೃದ್ಧಿ ಮಾಡಿರುವುದು ಸಂತಸ ತಂದಿದೆ ಎಂದ ಅವರು, ರೈಲ್ವೆ ನಿಲ್ದಾಣದ ಅಭಿವೃದ್ಧಿ ಜೊತೆಗೆ ಗದಗ– ವಾಡಿ, ಗದಗ– ಯಲವಗಿ ರೈಲ್ವೆ ಮಾರ್ಗ ಅನುಷ್ಠಾನಕ್ಕೆ ಆದ್ಯತೆ ನೀಡಲಾಗುವುದು. ಪ್ರಧಾನಿ ನರೇಂದ್ರ ಮೋದಿ ಅವರು ರೈಲ್ವೆ ಜೊತೆಗೆ ರಸ್ತೆ ಅಭಿವೃದ್ಧಿಗೂ ಆದ್ಯತೆ ನೀಡಿರುವುದು ವಿಕಸಿತ ಭಾರತಕ್ಕೆ ಸಾಕ್ಷಿಯಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ನೈರುತ್ಯ ರೈಲ್ವೆ ವಲಯದ ಪ್ರಧಾನ ವಾಣಿಜ್ಯ ವ್ಯವಸ್ಥಾಪಕ ಎಸ್.ಪಿ. ಶಾಸ್ತ್ರೀ, ನೈರುತ್ಯ ರೈಲ್ವೆ ವಲಯದಲ್ಲಿ ಗದಗ ರೈಲ್ವೆ ನಿಲ್ದಾಣ ಅತ್ಯಂತ ಪ್ರಮುಖವಾಗಿದೆ. ಪ್ರತಿನಿತ್ಯ ಸರಾಸರಿ 4 ಸಾವಿರ ಜನ ಸಂಚಾರ ಮಾಡುತ್ತಾರೆ. ಅಂದಾಜು 5 ಲಕ್ಷ ರೂ. ಆದಾಯವಿದೆ. ಒಟ್ಟು 23.24 ಕೋಟಿ ರೂ. ವೆಚ್ಚದಲ್ಲಿ ರೈಲ್ವೆ ನಿಲ್ದಾಣ ಪುನರಾಭಿವೃದ್ಧಿ ಆಗಿದೆ ಎಂದರು.

ಇದೇ ಸಂದರ್ಭದಲ್ಲಿ ಅಮೃತ ಭಾರತ್ ಸ್ಟೇಶನ್ ಯೋಜನೆಯಡಿ ಶಾಲಾ ಮಕ್ಕಳಿಗೆ ಚಿತ್ರಕಲಾ, ಪ್ರಬಂಧ, ಚರ್ಚಾ ಸ್ಪರ್ಧೆ ಏರ್ಪಡಿಸಲಾಗಿದ್ದು ಆ ಸ್ಪರ್ಧೆಯಲ್ಲಿ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು ಸಾನ್ನಿಧ್ಯ ವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ರಾಜು ಕುರಡಗಿ, ವಿ.ಎಚ್.ಹಿರೇಗೌಡ್ರ, ತಾತನಗೌಡ ಪಾಟೀಲ, ಎಸ್.ಸಿ.ಸಂಶಿಮಠ, ಸಂಗಮೇಶ ದುಂದೂರ , ಹುಬ್ಬಳ್ಳಿ ವಿಭಾಗೀಯ ಸೀನಿಯರ್ ಡಿವಿಜಿನಲ್ ಪರ್ಸನಲ್ ಆಫೀಸರ್ ( ಕಾರ್ಮಿಕ ಅಧಿಕಾರಿ) ಆರ್. ಪ್ರಸಾದ , ಗಣ್ಯರು, ಹಿರಿಯರು, ರೈಲ್ವೆ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

# ಮುಸ್ಲಿಂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿದ ಜಿಲ್ಲೆಯ ಎಲ್ಲಾ ಮುಸ್ಲಿಂ ವಿದ್ಯಾರ್ಥಿಗಳಿಗೆ ದುಮ್ಮಿ ಹುಸೇನ್ ಸಾಬ್ ಶೈಕ್ಷಣಿಕ ಮತ್ತು ಚಾರಿಟೇಬಲ್ ಟ್ರಸ್ಟ್ ವತಿಯಿಂದ ಪ್ರತಿಭಾ ಪುರಸ್ಕಾರಕ್ಕೆ ಆಹ್ವಾನಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ಗೇಮ್ಸ್ ಗ್ಯಾಲಕ್ಕಿ, ವಿದ್ಯಾನಗರ ಮುಖ್ಯರಸ್ತೆ, ದಾವಣಗೆರೆ ಇಲ್ಲಿ ಅರ್ಜಿ ಪಡೆದು ಆಧಾರ್ ಮತ್ತು ಅಂಕಪಟ್ಟಿಯೊಂದಿಗೆ ಜೂನ್. 25ರ ಒಳಗಾಗಿ ಭರ್ತಿ ಮಾಡಿದ ಅರ್ಜಿಯನ್ನು ಫೋಟೋ ಲಗತ್ತಿಸಿ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ: 9448729083 ಕ್ಕೆ ಸಂಪರ್ಕಿಸಬಹುದು ಎಂದು ಟ್ರಸ್ಟ್ನ ಅಧ್ಯಕ್ಷ ಡಾ. ಡಿ. ಅಬ್ದುಲ್ ಬುಡನ್ ತಿಳಿಸಿದ್ದಾರೆ.

# ಹೆಣ್ಣು ಮಕ್ಕಳಿಗೆ ಮದುವೆಯ ವಯಸ್ಸು 18 ಆಗಿರಬೇಕು; ಇದರ ಮಹತ್ವ ಪಾಲಕರಿಗೆ ತಿಳಿಸಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

**ಬಳ್ಳಾರಿ:** ಹೆಣ್ಣು ಮಕ್ಕಳಿಗೆ ಮದುವೆಯ ವಯಸ್ಸು 18 ಆಗಿರಬೇಕು. ಇದರ ಅವಶ್ಯಕತೆ ಮತ್ತು ಮಹತ್ವದ ಬಗ್ಗೆ ಪಾಲಕರಿಗೆ ತಿಳಿಸುವ ಮೂಲಕ ಗರ್ಭಿಣಿ ಅವಧಿಯ ಗಂಡಾಂತರಗಳನ್ನು ದೂರಗೊಳಿಸಲು ಅರಿವು ಮೂಡಿಸುವ ಕಾರ್ಯವಾಗಬಾಎಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಜಿಲ್ಲಾ ಆರೋಗ್ಯ ಅಭಿಯಾನದ ಅಂತರ್ ಇಲಾಖೆ ಸಭೆಯಲ್ಲಿ ಅವರು ಮಾತನಾಡಿದರು.

ಶಿಶು ಜನನದ ನಂತರ ಉಂಟಾಗಬಹುದಾದ ತಾಯಿ ಮರಣಗಳನ್ನು ತಡೆಗಟ್ಟಲು ಪಾಲಕರಿಗೆ ಹೆಣ್ಣು ಮಗುವಿಗೆ 18 ವರ್ಷಗಳ ನಂತರ ಮದುವೆ ಮಾಡುವುದರ ಬಗ್ಗೆ ಮನದಟ್ಟು ಮಾಡಿಕೊಡಬೇಕು. ತಾಯ್ತನದ ಜವಾಬ್ದಾರಿ ಹಾಗೂ ವೈಜ್ಞಾನಿಕವಾಗಿ ಗರ್ಭಕೋಶದ ಸಂಪೂರ್ಣ ಬೆಳವಣಿಗೆ ಮಹತ್ವ ಸಹ ತಿಳಿಸುವ ಮೂಲಕ ಹೆಣ್ಣುಮಕ್ಕಳ ಕನಿಷ್ಠ 20 ವರ್ಷ ವಯಸ್ಸಿನ ನಂತರದ ಅವಧಿ ಗರ್ಭವತಿಯಾಗಲು ಸೂಕ್ತ ಸಮಯ ಎಂದು ಸಮುದಾಯದಲ್ಲಿ ಜಾಗೃತಿ ನೀಡುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರ



ಮರಣವನ್ನು ಶೂನ್ಯಕ್ಕೆ ತರಲು ಗರ್ಭಿಣಿ ಎಂದು ನೋಂದಣಿ ಮಾಡಿದ ದಿನದಿಂದಲೇ ಯಾವುದೇ ಸಣ್ಣ ಆರೋಗ್ಯ ಸಮಸ್ಯೆ ಕಂಡುಬಂದರೂ ನಿರ್ಲಕ್ಷಿಸದೇ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸೂಕ್ತ ಪರೀಕ್ಷೆ ಮಾಡಿಸುವ ವ್ಯವಸ್ಥೆ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಬೇಕು ಎಂದರು.

ಇದರ ಜೊತೆಗೆ ಗರ್ಭಿಣಿಯ ಆರೋಗ್ಯದ ಸಮಸ್ಯೆಗಳನ್ನು ಸ್ಥಳೀಯ ಮಟ್ಟದ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ಸಾಧ್ಯವಾಗದಿದ್ದರೆ ಪಾಲಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮನವರಿಕೆ ಮಾಡಿ ಮೇಲ್ಮಟ್ಟದ ಆಸ್ಪತ್ರೆಗೆ ಮುಂಚಿತವಾಗಿ ಮಾಹಿತಿ ನೀಡಿ ಗರ್ಭಿಣಿಯನ್ನು ಕಳುಹಿಸಿಕೊಡುವ ವ್ಯವಸ್ಥೆ ಮಾಡಬೇಕು ಎಂದರು.

ಚೊಚ್ಚಲು ಹೆರಿಗೆ, ಅಧಿಕ ರಕ್ತದೊತ್ತಡ, ಮೊದಲ ಹೆರಿಗೆ ಸಿಸೆರಿಯನ್ ಆಗಿದ್ದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಮಟ್ಟದಿಂದ ಸಕಾಲದಲ್ಲಿ ಇಲಾಖೆಯ ಆಂಬ್ಯುಲೆನ್ಸ್ ಅಥವಾ 108 ತುರ್ತು ವಾಹನ ವ್ಯವಸ್ಥೆ ಮೂಲಕ ಕಳುಹಿಸಬೇಕು. ತಾಲ್ಲೂಕ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಹಾಗೂ ಬಿಎಮ್‌ಸಿ ಆರ್.ಸಿ ಆಸ್ಪತ್ರೆಗಳಲ್ಲಿ ಸುಸಜ್ಜಿತ ಹೆರಿಗೆ ಸೌಲಭ್ಯ ಹಾಗೂ ನುರಿತ ವೈದ್ಯರು ಇರುವ ಕುರಿತು ಕ್ಷೇತ್ರ ಮಟ್ಟದಲ್ಲಿ ಜಾಗೃತಿ ನೀಡುವಂತೆ ತಿಳಿಸಿದರು.

ಗರ್ಭಿಣಿ ಎಂದು ತಿಳಿದ ದಿನದಿಂದಲೇ ಗರ್ಭಿಣಿಗೆ ಕಂಡು ಬರಬಹುದಾದ ಸಾಮಾನ್ಯ, ಗಂಭೀರ ಸಮಸ್ಯೆಗಳ ಕುರಿತು ಮುತುವರ್ಜಿ ವಹಿಸಲು ಕ್ಷೇತ್ರ ಮಟ್ಟದ ಸಿಬ್ಬಂದಿಯವರು ಸದಾ ತಾಯಿಯೊಂದಿಗೆ ಹಾಗೂ ಪಾಲಕರೊಂದಿಗೆ ಸಂಪರ್ಕದಲ್ಲಿರಬೇಕು. ಕಬ್ಬಿಣಾಂಶ ಮಾತ್ರೆ ಸೇವನೆಯಿಂದಾಗುವ ಪ್ರಯೋಜನ ತಿಳಿಸಬೇಕು ಎಂದರು.

ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಮಾತನಾಡಿ, ಆಸ್ಪತ್ರೆಯಲ್ಲಿ ಹೆರಿಗೆಯಾದಲ್ಲಿ ಸಹಜ ಹೆರಿಗೆ 48 ಗಂಟೆಗಳ ಕಾಲ, ಸಿಜರಿಯನ್ ಹೆರಿಗೆ ಐದು ದಿನಗಳ ಕಾಲ ಕಡ್ಡಾಯವಾಗಿ ದಾಖಲು ಮಾಡಿಕೊಂಡು ನಿರಂತರವಾಗಿ ತಾಯಿಯ ಆರೋಗ್ಯದ ಕುರಿತು ಪರಿಶೀಲಿಸಿ ವೈದ್ಯರು ಮತ್ತು ಸಿಬ್ಬಂದಿಯವರು ಯಾವುದೇ ಲೋಪವಿಲ್ಲದಂತೆ ಕರ್ತವ್ಯ ನಿರ್ವಹಿಸಲು ಸೂಚಿಸಿದರು.

ಜನನಿ ಶಿಶು ಸುರಕ್ಷಾ ಕಾರ್ಯಕ್ರಮ ಯೋಜನೆಯಡಿಯಲ್ಲಿ ದೊರಕುವ ಉಚಿತ ಊಟ, ಉಚಿತ ಔಷಧಿ, ಉಚಿತ ರಕ್ತ, ಉಚಿತ ಪರೀಕ್ಷೆ, ಉಚಿತ ನಗುಮಗು ವಾಹನ ಮೂಲಕ ಮನೆಗೆ ಬಿಡುವ ಕುರಿತು ಹಾಗೂ ಜನನಿ ಸುರಕ್ಷಾ ಯೋಜನೆಯಡಿ ಸಹಾಯಧನವನ್ನು ಅವರ ಖಾತೆಗೆ ಜಮೆ ಆಗುವ ಬಗ್ಗೆ ತಿಳಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್ ಬಸಾರೆಡ್ಡಿ, ವೈದ್ಯಕಿಯ ಅಧೀಕ್ಷಕಿ ಡಾ.ಇಂದುಮತಿ, ಪ್ರಸೂತಿ ವಿಭಾಗದ ಡಾ.ವಿರೇಂದ್ರಕುಮಾರ, ವಿಮ್ಸ್ ಮಕ್ಕಳ ವಿಭಾಗದ ಡಾ.ವಿಶ್ವನಾಥ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ ವಿ., ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವಿರೇಂದ್ರಕುಮಾರ, ತಜ್ಞವೈದ್ಯರಾದ ಡಾ.ಬಾಲು ವೆಂಕಟೇಶ್, ಡಾ.ಕೊಟ್ರೇಶ್, ಡಾ.ಶ್ರೀಧರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಸೇರಿದಂತೆ ತಾಲೂಕಾ ಆರೋಗ್ಯಾಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು ಇತರರು ಉಪಸ್ಥಿತರಿದ್ದರು.

### ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

# ಮುಂಗಾರು ಪೂರ್ವ ಮಳೆ; 72 ಗಂಟೆಯೊಳಗೆ ಹಾನಿ ಪರಿಹಾರ ನೀಡಬೇಕು: ಡಾ. ತ್ರಿಲೋಕ ಚಂದ್ರ

**ಬಳ್ಳಾರಿ:** ಪೂರ್ವ ಮುಂಗಾರು ಆರಂಭಗೊಂಡ ಹಿನ್ನಲೆಯಲ್ಲಿ ಮಳೆಯಿಂದಾಗುವ ಹಾನಿಯನ್ನು ಸೂಕ್ತ ಪರಿಶೀಲನೆ ನಡೆಸಿ 72 ಗಂಟೆಯೊಳಗೆ ಹಾನಿ ಪರಿಹಾರ ಒದಗಿಸಲು ಮುಂದಾಗಬೇಕು ಎಂದು ಜಿಪಂ ಆಡಳಿತಾಧಿಕಾರಿಯೂ ಆಗಿರುವ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕಚಂದ್ರ ಅವರು ಹೇಳಿದರು.



ನಗರದ ಜಿಲ್ಲಾ ಪಂಚಾಯತ್ ನ ನಜೀರ್ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ ಸೇರಿದಂತೆ) ಏಪ್ರಿಲ್ ಮಾಹೆಯ ಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮಾಹಿತಿಯನ್ವಯ ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆಯಾಗುವ ಸಂಭವವಿದ್ದು, ಈಗಾಗಲೇ ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಹಾಗಾಗಿ ಆಯಾ ತಾಲ್ಲೂಕು ತಹಶೀಲ್ದಾರರು ಹಾಗೂ ಕಂದಾಯ ಅಧಿಕಾರಿಗಳು ಈ ಕುರಿತು ಎಚ್ಚರ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ವಾರ್ಷಿಕ 599.5 ಮಿ.ಮೀ ವಾಡಿಕೆ ಮಳೆಯಿದ್ದು, ಕಳೆದ ವರ್ಷ ಮೇ 20 ರವರೆಗೆ 53.6 ಮಿ.ಮೀ ಮಳೆಯಾಗಿದೆ ಹಾಗೂ ಪ್ರಸ್ತುತ ವರ್ಷ 88.4 ಮಿ.ಮೀ ಮಳೆಯಾಗಿ ಸುಮಾರು ಶೇ.64 ರಷ್ಟು ಹೆಚ್ಚು ಮಳೆ ಸುರಿದಿದೆ. ಅದೇರೀತಿಯಾಗಿ ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ದಾಸ್ತಾನು ಸಮರ್ಪಕವಾಗಿದ್ದು, ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಆಭಾವದ ಕೊರತೆಯಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಸಭೆಗೆ ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ರೈತರಿಗೆ ಕಳಪೆ ಗುಣಮಟ್ಟದ ಬಿತ್ತನೆ ಬೀಜ ಮತ್ತು ರಸಗೊಬ್ಬರ ಪೂರೈಕೆಯಾಗದಂತೆ ಎಚ್ಚರವಹಿಸಬೇಕು. ದಾಸ್ತಾನು ಲಭ್ಯತೆ ಕುರಿತು ರೈತರಿಗೆ ಮಾಹಿತಿ ನೀಡಬೇಕು. ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನಿನ ಕುರಿತು ಮಾಹಿತಿ ಪ್ರದರ್ಶಿಸಬೇಕು. ರೈತರು ಕಾಯುವುದು, ನೂಕುನುಗ್ಗಲು ಹಾಗೂ ಇತರೆ ವ್ಯವಸ್ಥೆಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಕೃಷಿ ಪರಿಕರಗಳ ಪರಿವೀಕ್ಷರ ತಂಡಗಳನ್ನು ರಚಿಸಿ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಗುಣಮಟ್ಟ ಹಾಗೂ ಬೆಲೆ ನಿಯಂತ್ರಣಕ್ಕೆ ಕ್ರಮವಹಿಸಲಾಗಿದೆ. ಕೃಷಿ ಪರಿಕರ ಮಾರಾಟಗಾರರು ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳನ್ನೇ ಮಾರಾಟ ಮಾಡಬೇಕು ತಪ್ಪಿದಲ್ಲಿ ಕಾನೂನು ರೀತ್ಯ ಕಠಿಣ ಕ್ರಮ ಜರುಗಿಸಲಾಗುವುದು ಎಂಬುದರ ಕುರಿತು ಸಭೇ ನಡೆಸುವ ಮೂಲಕ ಅವರಿಗೆ ಮಾಹಿತಿ ನೀಡಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಸಭೆಗೆ ವಿವರಿಸಿದರು.ಜಿಲ್ಲೆಯಲ್ಲಿ ಕುಡಿಯುವ ನೀರು ಸರಬರಾಜು ಮೂಲಗಳ ಬಗ್ಗೆ ನಿಗಾವಹಿಸಬೇಕು. ಕಲುಷಿತ ನೀರು ಕಲಬೆರಕೆಗೊಳ್ಳದಂತೆ ಎಚ್ಚರವಹಿಸಬೇಕು. ಮುಖ್ಯವಾಗಿ ಕುಡಿಯುವ ನೀರಿನ ಪೈಪ್ ಲೈನ್‌ಗಳು ಸೋರಿಕೆ ಕಂಡುಬಂದಲ್ಲಿ ಕೂಡಲೇ ರಿಪೇರಿ ಮಾಡಿಸಲು ಕ್ರಮವಹಿಸಬೇಕು.

# ಖಾಲಿ ಸೈಟ್‌ನಲ್ಲಿ ತರಕಾರಿ ಬೆಳೆದು ಮಾದರಿಯಾದ ಕುಟುಂಬ : ಡಾ ಎಚ್.ಕೆ.ಎಸ್. ಸ್ವಾಮಿ

**ಚಿತ್ರದುರ್ಗ:** ನಗರದ ಟೀಚರ್ಸ್ ಕಾಲೋನಿಯಲ್ಲಿ ವಾಸವಾಗಿರುವ ನಿವೃತ್ತ ಶಿಕ್ಷಕರಾದ ಮಂಜುನಾಥ್ ರವರ ಕುಟುಂಬ ಖಾಲಿ ಸೈಟ್ ನಲ್ಲಿ, ಬೇಲಿ ಹಾಕಿ, ಹನಿ ನೀರಾವರಿ ಮಾಡಿ, ತರಕಾರಿ ಬೆಳೆದು, ಇತರರಿಗೆ ಮಾದರಿಯಾಗಿದ್ದು, ಆಹಾರ ಸಮಸ್ಯೆ ನೀಗಿಸುವ ನಿಟ್ಟಿನಲ್ಲಿ ಪ್ರಯತ್ನಿಸುತ್ತಿದ್ದು, ನಗರದ ಜನರು ಸಹ ಖಾಲಿ ಸೈಟ್ಗಳಲ್ಲಿ, ಟೆರೆಸ್ ಮೇಲೆ, ತರಕಾರಿಗಳನ್ನು ಬೆಳೆದು ಹೆಚ್ಚುತ್ತಿರುವ ಜನಸಂಖ್ಯೆಗೆ ಆಹಾರ ಒದಗಿಸುವ ನಿಟ್ಟಿನಲ್ಲಿ ಕೆಲಸ ನಿರ್ವಹಿಸಿದರೇ ಜನರ ಮೆಚ್ಚುಗೆಗಳಿಸುತ್ತದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ಕರೆ ನೀಡಿದ್ದಾರೆ.

ಅವರು ಟೀಚರ್ಸ್ ಕಾಲೋನಿಯಲ್ಲಿ ವಾಸವಾಗಿರುವ ನಿವೃತ್ತಿ ಶಿಕ್ಷಕರಾದ ಮಂಜುನಾಥ್ ರವರ ಮನೆಯ ಪಕ್ಕದ ಖಾಲಿ ಸೈಟ್ ನಲ್ಲಿ ಬೆಳೆದ ಬದನೆಕಾಯಿ, ಸೌತೆಕಾಯಿ, ಟೊಮೆಟೊ ಇನ್ನಿತರ ತರಕಾರಿಗಳನ್ನ ಸಂಗ್ರಹಿಸುತ್ತಾ ಮಾತನಾಡುತ್ತಿದ್ದರು.

ಗ್ರಾಮೀಣ ಜನರು ನಗರಗಳ ಕಡೆ ವಲಸೆ ಬಂದರೂ ಸಹ ತಮ್ಮ ಮೂಲ ಉದ್ಯೋಗವಾದ



ಕೃಷಿ ಕೈಗಾರಿಕೆಯನ್ನು, ಕೃಷಿ ಚಟುವಟಿಕೆಯನ್ನ ಮರೆಯಲು ಸಾಧ್ಯವಾಗುವುದಿಲ್ಲ, ಬಿಡುವಿನ ಸಮಯದಲ್ಲಿ ಒಂದಿಷ್ಟು ಖಾಲಿ ಜಾಗದಲ್ಲಿ ತರಕಾರಿಗಳನ್ನು ಬೆಳೆದಿಟ್ಟುಕೊಂಡು, ತಮ್ಮ ದಿನ ನಿತ್ಯದ ಬೇಡಿಕೆಗಳನ್ನ ಈಡೇರಿಸಿಕೊಳ್ಳುತ್ತಾ, ಇನ್ನೊಂದಿಷ್ಟು ಹೆಚ್ಚಾದ ತರಕಾರಿಗಳನ್ನ ಅಕ್ಕಪಕ್ಕದ ಮನೆಯವರಿಗೆ ಉಚಿತವಾಗಿ ವಿತರಿಸಿ, ಅವರ ಹಸಿವನ್ನು ನೀಗಿಸುವ ನಿಟ್ಟಿನಲ್ಲಿ ಪ್ರಯತ್ನಿಸುತ್ತಿರುವುದು ಶ್ಲಾಘನೀಯ ಎಂದರು

ನಗರದ ಸುತ್ತಮುತ್ತ ಸಾಕಷ್ಟು ಖಾಲಿ ಜಾಗಗಳು ಹಾಗೆ ವ್ಯರ್ಥವಾಗಿ, ಹಾಳುಬಿಟ್ಟು ಯಾವುದೇ ಉತ್ಪನ್ನವಿಲ್ಲದಂತೆ ಮಾಡಿರುವ ಉದಾಹರಣೆಗಳು ಸಾಕಷ್ಟು ದೊರೆಯುತ್ತವೆ, ಆದರೆ ಟೀಚರ್ಸ್ ಕಾಲೋನಿಯಲ್ಲಿ ಖಾಲಿ ಇದ್ದ ಸೈಟಿಗೆ, ಬೇಲಿ ಹಾಕಿಕೊಂಡು, ಹನಿ ನೀರಾವರಿ ವ್ಯವಸ್ಥೆ ಕಲ್ಪಿಸಿಕೊಂಡು, ದಿನ ನಿತ್ಯ ಒಂದಿಷ್ಟು ತರಕಾರಿ ಗಿಡಗಳಿಗೆ ನೀರುಣಿಸಿ, ತಮಗೆ ಬೇಕಾದಷ್ಟು ಬದನೆಕಾಯಿ, ಟೊಮೆಟೊ, ಸೌತೆಕಾಯಿ, ಮೂಲಂಗಿ, ಕ್ಯಾರೆಟ್, ಸೊಪ್ಪು ಬೆಳೆದುಕೊಂಡು ಜೀವನ ನಿರ್ವಹಿಸುತ್ತಿರುವ ಇಂತಹ ಶಿಕ್ಷಕ ಕುಟುಂಬಗಳು ಹೆಚ್ಚಾಗಬೇಕಾಗಿದೆ ಎಂದರು.

ಅಕ್ಕ ಪಕ್ಕದವರಿಗೆ ಖಾಲಿ ಸೈಟ್ಗಳಲ್ಲಿ ತರಕಾರಿ ಬೆಳೆಯುವ ದೃಶ್ಯವೂ ಸಹ ವಿಚಿತ್ರವಾಗಿ, ಹೊಸ ಅನುಭವವನ್ನು ನೀಡುತ್ತಿದೆ, ಈ ರೀತಿ ನಾವು ಸಹ ಖಾಲಿ ನಿವೇಶನಗಳಲ್ಲಿ ತರಕಾರಿಗಳನ್ನು ಬೆಳೆದುಕೊಳ್ಳಬಹುದಾ ಎಂದು ಅಪನಂಬಿಕೆ



ಮೂಡುತ್ತದೆ, ಅದಕ್ಕೆ ವಿರುದ್ಧವಾಗಿ ಇವರು ಕಷ್ಟಪಟ್ಟು, ಸಣ್ಣ ಸೈಟ್ನಲ್ಲೇ ವ್ಯವಸಾಯದ ರೀತಿಯಲ್ಲಿ ಮಣ್ಣು ಕೆತ್ತಿ, ಹುಲ್ಲು ಕೆತ್ತಿ ಸುಂದರಗೊಳಿಸಿಕೊಂಡು ಅದಕ್ಕೆ ಬದನೆಕಾಯಿ ಸಸಿಗಳನ್ನು, ಸೌತೆಕಾಯಿ ಬೀಜಗಳನ್ನ, ಟೊಮೇಟೊ ಸಸಿಗಳನ್ನು ನೆಟ್ಟು, ಜನರ ಎದುರಿಗೆ ತರಕಾರಿಗಳನ್ನು ಉತ್ಪಾದನೆ ಮಾಡಿ, ಬೇರೆಯವರಿಗೂ ಸಹ ಈ ರೀತಿ ಸಣ್ಣ ಮಟ್ಟದ ಉತ್ಪಾದನೆ ಮುಖಾಂತರ ನಾವು ಒಂದಿಷ್ಟು ದೇಶದ ಆಹಾರ ಸಮಸ್ಯೆಯನ್ನ, ಆರ್ಥಿಕ ಸಮಸ್ಯೆಯನ್ನ ನೀಗಿಸಬಹುದು ಎಂದು ದಾರಿ ತೋರಿಸಿದ್ದಾರೆ ಎಂದರು.

ಹೆಚ್ಚುತ್ತಿರುವ ತರಕಾರಿ ಬೆಲೆ, ಬಡವರ ಕೈಗೆಟುಕದಂತಾಗಿ, ನಮ್ಮ ನಮ್ಮಲ್ಲೇ ಉತ್ಪಾದನೆ ಮಾಡಿದ ತರಕಾರಿಗಳನ್ನು ಬಳಕೆ ಮಾಡಿದರೆ, ಮಾರುಕಟ್ಟೆಯಲ್ಲಿ ಏರುತ್ತಿರುವ ತರಕಾರಿ ಬೆಲೆಯನ್ನು ಇಳಿಸಬಹುದು ಎಂದು ಗಾಂಧೀಜಿಯವರ ಕಾಲದಲ್ಲೂ ಸಹ ಸ್ವಲ್ಪಮಟ್ಟಿಗೆ ಉತ್ಪಾದನೆ ಮಾಡಿದಾಗ, ಮನುಷ್ಯ ಮಾರುಕಟ್ಟೆಯಲ್ಲಿರುವ ಬೆಲೆ ತಗ್ಗಿಸಲು ಅನುಕೂಲಕರವಾಗುತ್ತದೆ ಎಂದಿದ್ದರು. ಸ್ವಲ್ಪ ಮಟ್ಟಿಗೆ ನಾವು ಖಾದಿ ಉತ್ಪಾದನೆ ಮಾಡಿದರು ಸಹ ಮಾರುಕಟ್ಟೆಯಲ್ಲಿರುವ ಬಟ್ಟೆಯ ಬೆಲೆ ಇಳಿಯುತ್ತದೆ ಎಂಬುದನ್ನು ಅಂದು ಪ್ರಸ್ತುತಪಡಿಸಿದ್ದರು. ಅದೇ ಸಿದ್ಧಾಂತವನ್ನು ಹೀಗೂ ಸಹ ನಾವು ಸಣ್ಣ ಉತ್ಪಾದನೆ ಇದ್ದರೂ ಸಹ, ಅದು ಅಗಾಧವಾದ ಪರಿಣಾಮ ಬೀರುತ್ತದೆ ಎಂಬುದನ್ನು ಅರಿತುಕೊಳ್ಳ ಬಹುದು .

# ಅಪೌಷ್ಠಿಕತೆ ನಿವಾರಣೆಗೆ ಪಾಲಕರು ಸಹಕರಿಸಿ

## ಡಿಹೆಚ್‌ಓ ಡಾ.ಯಲ್ಲಾ ರಮೇಶಬಾಬು

**ಬಳ್ಳಾರಿ:** ಮಕ್ಕಳಿಗೆ ವಯೋಸಹಜ ತೂಕ ಹಾಗೂ ಆರೋಗ್ಯ ಸುರಕ್ಷತೆಗಾಗಿ ವಿಶೇಷ ಬಾಲಚೈತನ್ಯ ಮಕ್ಕಳ ಆರೈಕೆಯಡಿ ಮಕ್ಕಳ ತಜ್ಞರಿಂದ ಪರೀಕ್ಷೆ ಮಾಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಸೋಮವಾರದಂದು ಬಳ್ಳಾರಿ ತಾಲ್ಲೂಕಿನ ಕೊಳಗಲ್ಲು ಗ್ರಾಮದಲ್ಲಿ ಐದು ವರ್ಷದೊಳಗಿನ ಮಕ್ಕಳ ಮನೆಗೆ ಭೇಟಿ ನೀಡಿ ಪಾಲಕರ ಜೊತೆ ಮಕ್ಕಳ ಆರೋಗ್ಯ ವಿಚಾರಿಸಿ ಅವರು ಮಾತನಾಡಿದರು.

ಹುಟ್ಟಿದ ಮಗುವಿನ ಸಹಜ ತೂಕ 2.5 ಕೆ.ಜಿ ಇದ್ದರೆ ಆ ಮಗು ಸಹಜ ತೂಕದ ಮಗುವಾಗಿರುತ್ತದೆ. ಒಂದು ವೇಳೆ ಕಡಿಮೆ ಇದ್ದರೆ ಸೂಕ್ತ ಚಿಕಿತ್ಸೆಗೆ ಒಳಪಡಿಸಲಾಗುತ್ತದೆ. ಐದು ವರ್ಷದ ಮಗುವಿನ ಆರೋಗ್ಯದ ದೃಷ್ಠಿಯಿಂದ ಬಾಲಚೈತನ್ಯ ಕಾರ್ಯಕ್ರಮದಡಿ ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಮಕ್ಕಳ ತಜ್ಞ ವೈದ್ಯರ ಮೂಲಕ ಮಾಡಲಾಗುವ ತಪಾಸಣಾ ಶಿಬಿರದಲ್ಲಿ ಪಾಲಕರು ಮಕ್ಕಳ ಪರೀಕ್ಷೆ ಮಾಡಿಸಬೇಕು ಎಂದು ಅವರು ತಿಳಿಸಿದರು.

ಸಾಮಾನ್ಯವಾಗಿ ಒಂದು ವರ್ಷದ ಮಗು 10 ಕೆ.ಜಿ ಮೇಲ್ಪಟ್ಟು, ಎರಡು ವರ್ಷದ ಮಗು 12 ಕೆ.ಜಿ, ಮೂರು ವರ್ಷದ ಮಗು 14 ಕೆ.ಜಿ, 4 ವರ್ಷದ ಮಗು 16 ಕೆ.ಜಿ ಮತ್ತು 5 ವರ್ಷದ ಮಗು 18 ಕೆ.ಜಿ ಇರುವುದು ಮಗುವಿನ ಸಹಜ ತೂಕ ಮತ್ತು ಉತ್ತಮ ಆರೋಗ್ಯವನ್ನು ಸೂಚಿಸುತ್ತದೆ ಎಂದು ತಿಳಿಸಿದರು.

ಮಕ್ಕಳ ಆರೋಗ್ಯದಲ್ಲಿ ಬೇರೆ ಯಾವುದಾದರೂ ಅರೋಗ್ಯ ಸಮಸ್ಯೆ ಕಂಡುಬಂದಲ್ಲಿ, ಬೆಳವಣಿಗೆ ಕುಂಟಿತವಾದಲ್ಲಿ, ಆಹಾರ ಸೇವನೆಗೆ ಹಿಂದೇಟು ಹಾಕುತ್ತಿದ್ದರೆ, ಪದೇಪದೇ ಕಾಯಿಲೆಗೆ ಒಳಗಾಗುತ್ತಿದ್ದರೆ ಮಗುವಿನ ಬೆಳವಣಿಗೆಗೆ ಅಡ್ಡಿಯುಂಟಾಗುತ್ತದೆ. ಈ ಹಿನ್ನೆಲೆಯಲ್ಲಿ ವೈದ್ಯರು ಸೂಚಿಸಿದ ಔಷಧಿ ಹಾಗೂ ಮಗುವಿನ ವಯಸ್ಸು 06 ತಿಂಗಳು ತುಂಬುವವರೆಗೆ ತಾಯಿ ಹಾಲು ನೀಡಬೇಕು. ನಂತರದಲ್ಲಿ ಪೂರಕ ಪೌಷ್ಟಿಕ ಆಹಾರ ಉಣಿಸುವ ಮೂಲಕ ಮಕ್ಕಳ ಆರೋಗ್ಯವಂತರನ್ನಾಗಿ ಮಾಡಲು ಪಾಲಕರು ವಿಶೇಷ ಆರೈಕೆ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

*ಪೌಷ್ಠಿಕ ಮನಶ್ವೇತನ ಕೇಂದ್ರ:*

ಒಂದು ವೇಳೆ ಮೇಲಿನವುಗಳೆಲ್ಲವೂಗಳ ಆರೈಕೆಯಿಂದ ಮಗುವಿನ ತೂಕದಲ್ಲಿ ಏರಿಕೆ, ಆರೋಗ್ಯದಲ್ಲಿ ಸುಧಾರಣೆ ಕಂಡುಬರದೇ ಇದ್ದಲ್ಲಿ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಲ್ಲಿ ಪೌಷ್ಟಿಕ ಮನಶ್ವೇತನ ಕೇಂದ್ರ ಇದ್ದು, ಇಲ್ಲಿ 14 ದಿನಗಳ ವರೆಗೆ ಮಗುವಿನ ಸೂಕ್ತ ಆರೈಕೆಗಾಗಿ ತಾಯಿಯು ವಸತಿ ಕೈಗೊಳ್ಳಲು ಅವಕಾಶದೊಂದಿಗೆ ಮಗುವಿನ ಎಲ್ಲ ಪರೀಕ್ಷೆಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. ಅದೇರೀತಿಯಾಗಿ ಸಂಡೂರು, ಸಿರುಗುಪ್ಪ, ಕಂಪ್ಲಿ ತಾಲ್ಲೂಕು ಸರಕಾರಿ ಆಸ್ಪತ್ರೆಗಳಲ್ಲಿ ಸಹ ಈ ಸೌಲಭ್ಯವಿದ್ದು ಇದರು ಸದುಪಯೋಗ ಪಡೆಯಲು ಎಂದು ಡಿಹೆಚ್ಓ ವಿನಂತಿಸಿದರು.

# ‘ದುಡಿಯೋಣ ಬಾ ಅಭಿಯಾನ’ದ ಸದುಪಯೋಗಪಡಿಸಿಕೊಳ್ಳಲು ಕರೆ

**ತುಮಕೂರು:** ಗ್ರಾಮೀಣ ಜನರಿಗೆ ಉದ್ಯೋಗ ಒದಗಿಸಲು ‘ದುಡಿಯೋಣ ಬಾ ಅಭಿಯಾನ’ದ ಮೂಲಕ ಸ್ಥಳೀಯವಾಗಿ ಕೆಲಸ ನೀಡಲಾಗುವುದು. ಗ್ರಾಮೀಣ ಜನರು ಅಭಿಯಾನದ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹರ್ಷ ಕುಮಾರ್ ಕೆ. ಹೇಳಿದರು.

ತಾಲ್ಲೂಕಿನ ಹರಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಂಗಳವಾರ ನರೇಗಾ ಯೋಜನೆಯಡಿ ‘ದುಡಿಯೋಣ ಬಾ ಅಭಿಯಾನ’ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬಡ ಕುಟುಂಬಗಳನ್ನು ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮಾಡುವುದು, ಸ್ಥಳೀಯರಿಗೆ ಉದ್ಯೋಗ ನೀಡುವ ಮೂಲಕ ಸ್ವಾವಲಂಬಿ ಬದುಕು ಸಾಗಿಸುವಂತೆ ಮಾಡುವುದು, ಗ್ರಾಮೀಣ ಭಾಗದಲ್ಲಿ ವಲಸೆ ತಪ್ಪಿಸಿ ಕೂಲಿಕಾರರಿಗೆ ಕೆಲಸ ಒದಗಿಸುವುದು ನರೇಗಾ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.



ತಾಲೂಕಿನಲ್ಲಿ ದುಡಿಯೋಣ ಬಾ ಅಭಿಯಾನವನ್ನು ಗ್ರಾಮೀಣ ಜನರು ಸದ್ಬಳಕೆ ಮಾಡಿಕೊಂಡಾಗ ಮಾತ್ರ ಸರ್ಕಾರದ ಯೋಜನೆ ಯಶಸ್ವಿಯಾಗಲಿದೆ. ಈ ನಿಟ್ಟಿನಲ್ಲಿ ವೈಯಕ್ತಿಕ ಅಥವಾ ಸಾಮೂಹಿಕ ಕೂಲಿಯನ್ನು ಸೃಷ್ಟಿಸಲು ದುಡಿಯೋಣ ಬಾ ಅಭಿಯಾನ ಸಹಕಾರಿಯಾಗಿದೆ. ಹರಳೂರು ಗ್ರಾಮದ ರೈತರಿಗೆ ಉದ್ಯೋಗ ಖಾತರಿ ಯೋಜನೆಯ ಮಾಹಿತಿಯುಳ್ಳ ಕರಪತ್ರಗಳನ್ನು ಹಂಚುವ ಮೂಲಕ ಕೂಲಿ ಆಧಾರಿತ ಕಾಮಗಾರಿಗಳನ್ನು ಕೈಗೊಳ್ಳುವಂತೆ ತಿಳಿಸಿದರು. ನಂತರ ರೈತರ ಮನೆ-ಮನೆಗೆ ಭೇಟಿ ನೀಡಿ, ಕೂಲಿ ಆಧಾರಿತ ಕಾಮಗಾರಿಗಳಿಗೆ ಕಾರ್ಯಾದೇಶವನ್ನು ವಿತರಿಸಿದರು.

ಈ ವೇಳೆ ಸಹಾಯಕ ನಿರ್ದೇಶಕರು (ಗ್ರಾ.ಉ), ಗ್ರಾಮ ಪಂಚಾಯಿತಿ ಪಿಡಿಒ, ತಾಂತ್ರಿಕ ಸಂಯೋಜಕರು, ತಾಲ್ಲೂಕು ಐಇಸಿ ಸಂಯೋಜಕರು ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಜರಿದ್ದರು.

### ಸಾರಿಗೆ ಬಸ್-ಕಾರು ನಡುವೆ ಅಪಘಾತ:

# ಅಪಾಯದಿಂದ ಪಾರು



**ಮೂಡಿಗೆರೆ:** ಚಿಕ್ಕಮಗಳೂರು ಜಿಲ್ಲೆಯಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯ ನಡುವೆ ಕೆಎಸ್ಆರ್‌ಟಿಸಿ ಬಸ್ ಹಾಗೂ ಕಾರ್ ನಡುವೆ ಅಪಘಾತ ಸಂಭವಿಸಿರುವ ಘಟನೆ ಜಿಲ್ಲೆಯ ಮೂಡಿಗೆರೆ ತಾಲೂಕಿನ ಬಡವನದಿಣ್ಣೆ ಗ್ರಾಮದ ಬಳಿ ನಡೆದಿದೆ.

ಅಪಘಾತದ ರಭಸಕ್ಕೆ ಕಾರಿನ ಮುಂಭಾಗ ಸಂಪೂರ್ಣ ನಜ್ಜುಗುಜ್ಜಾಗಿದೆ. ಕಾರಿನಲ್ಲಿದ್ದವರು ಸಣ್ಣಪುಟ್ಟ ಗಾಯಗಳಿಂದ ಪಾರಾಗಿದ್ದಾರೆ. ಅಪಘಾತದ ಬಳಿಕ ಕೆಎಸ್ಆರ್‌ಟಿಸಿ ಬಸ್ ರಸ್ತೆ ಪಕ್ಕದ ಗದ್ದೆಗೆ ನುಗ್ಗಿದೆ.

ಬಸ್ಸಿನಲ್ಲಿದ್ದವರು ಅನಾಹುತದಿಂದ ಪಾರಾಗಿದ್ದಾರೆ. ಈ ಮಾರ್ಗವು ಚಿಕ್ಕಮಗಳೂರಿನಿಂದ ದಕ್ಷಿಣ ಕನ್ನಡಕ್ಕೆ ಸಂಪರ್ಕ ನೀಡುವ ರಸ್ತೆಯಾಗಿದೆ ಕಳೆದ ಎರಡು ದಿನಗಳಿಂದ ನಿರಂತರವಾಗಿ ಧಾರಾಕಾರ ಮಳೆಯಾಗುತ್ತಿದ್ದು ಚಾರ್ಮಾಡಿ ಘಾಟ್ ನಲ್ಲಿ ವಾಹನ ಸವಾರರು ಪರದಾಡುವಂತಾಗಿದೆ.

# ಶಿಕ್ಷಕನಾದವನು ಪ್ರತಿನಿತ್ಯ ವಿದ್ಯಾರ್ಥಿಯಾಗಿದ್ದಾಗ ಮಾತ್ರ ಪರಿಪಕ್ವತೆ ಪಡೆಯುತ್ತಾನೆ

**ಶಿವಮೊಗ್ಗ :** ಶಿಕ್ಷಕನಾದವನು ಪ್ರತಿನಿತ್ಯ ವಿದ್ಯಾರ್ಥಿಯಾಗಿದ್ದಾಗ ಮಾತ್ರ ಪರಿಪಕ್ವತೆಯನ್ನು ಪಡೆಯುತ್ತಾನೆ ಎಂದು ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸಾಯಿನಾಥ ಸ್ವಾಮೀಜಿ ಹೇಳಿದರು.

ಅವರು ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್, ಶಿವಮೊಗ್ಗ ಶಾಖೆಯ, ಶರಾವತಿ ನಗರದ ಬಿಜಿಎಸ್ ವಸತಿ ಶಾಲೆಯ ಬಿಜಿಎಸ್ ಸಭಾ ಭವನದಲ್ಲಿ ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟಿನ ವ್ಯಾಪ್ತಿಯ ವಿವಿಧ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶಿಕ್ಷಕರ

ಮೂರು ದಿನದ ಕಾರ್ಯಾಗಾರದ ಸಾನಿಧ್ಯ ವಹಿಸಿ ಮಾತನಾಡಿದ ಅವರ ವಿದ್ಯೆಯನ್ನು ಕಲಿಯುವಾಗಲು ಬಾಗಬೇಕು, ನೀಡುವಾಗಲೂ ಬಾಗಬೇಕು ಆಗ ಮಾತ್ರ ವಿನಯದಿಂದ ವಿದ್ಯೆ ಒಲಿಯುತ್ತದೆ ಎಂದು ಅಭಿಪ್ರಾಯಪಟ್ಟರು.

ನಾನು ಶಿಕ್ಷಕನಾಗಿದ್ದೇನೆ ಕಲಿಯುವುದು ಏನೂ ಇಲ್ಲ ಎಂದುಕೊಂಡರೆ ಆ ಶಿಕ್ಷಕ ಪರಿಪೂರ್ಣ ಶಿಕ್ಷಕನಾಗಲು ಸಾಧ್ಯವಿಲ್ಲ. ವಿದ್ಯಾರ್ಥಿಗಳ ಜೊತೆ



ಇರುವಾಗ ಶಿಕ್ಷಕನಾಗಿ, ಉಳಿದ ಅವಧಿಯಲ್ಲಿ ವಿದ್ಯಾರ್ಥಿಯಾಗಿ ವಿಷಯಗಳ ಗ್ರಹಿಕೆಯನ್ನು ಮಾಡುತ್ತಾ ಇದ್ದರೆ ಮಾತ್ರ ಉತ್ತಮ ಶಿಕ್ಷಕನಾಗಿ ಹೊರಹೊಮ್ಮಲು ಸಾಧ್ಯ ಎಂದರು.

ಪ್ರತಿವರ್ಷ ಬೇಸಿಗೆಯ ಸಮಯದಲ್ಲಿ ಈ ಕಾರ್ಯಾಗಾರ ನಡೆಯುತ್ತದೆ. ಈ ಅವಧಿಯಲ್ಲಿ ಮಾವು ಮತ್ತು ಹಲಸಿನ ಹಣ್ಣುಗಳು ಲಭ್ಯವಿರುತ್ತದೆ. ಮಾವು ಮತ್ತು ಹಲಸು ಮಾಗಿದಷ್ಟು ಹೆಚ್ಚು ರುಚಿಯಾಗಿರುತ್ತದೆ ಮತ್ತು ರಸಭರಿತವಾಗುತ್ತದೆ. ಅದೇ ರೀತಿ ಶಿಕ್ಷಕನಾದವನೂ ಸಹ ತನ್ನ ಕ್ಷೇತ್ರದಲ್ಲಿ ಮಾಗಬೇಕೆಂದು ಸೂಚ್ಯವಾಗಿ ಹೇಳಿದರು.

ಮಕ್ಕಳಿಗೆ ತರಬೇತಿ, ನಿರಂತರ ಅಭ್ಯಾಸ ಮಾಡುವುದರ ಮೂಲಕ ಅವರ ಸಾಧನೆಗೆ ಶಕ್ತಿ ತುಂಬುವುದು, ಮಕ್ಕಳಲ್ಲಿ ಅನೇಕ ನ್ಯೂನ್ಯತೆಗಳಿರುತ್ತವೆ, ಅವುಗಳನ್ನು ತಿದ್ದಿ-ತೀಡಿ ಉತ್ತಮ ರೀತಿಯಲ್ಲಿ ಒಬ್ಬ ಪ್ರಜ್ಞಾವಂತರನ್ನಾಗಿ ಸಜ್ಜುಗೊಳಿಸುವುದರಲ್ಲಿ ತಮ್ಮಗಳ ಪಾತ್ರ ದೊಡ್ಡದು ಎಂದರು.

ಈ ಕಾರ್ಯಗಾರದಲ್ಲಿ ಸಂಸ್ಥೆಯ ವಿವಿಧ ಶಾಲೆಗಳ ಸುಮಾರು 150 ಕ್ಕೂ ಹೆಚ್ಚು ವಿವಿಧ ವಿಷಯಗಳ ಶಿಕ್ಷಕರು, ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ಪಡೆಯುತ್ತಿರುವುದು ಮತ್ತೊಂದು ವಿಶೇಷ.

ಈ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಡಯಟ್ ಉಪನ್ಯಾಸಕ ಶಿವಕುಮಾರ್, ಮಾನಸ ಟ್ರಸ್ಟ್ ಸಲಹೆಗಾರರ ತಂಡದಿಂದ ಕಲಿಕೆಯಲ್ಲಿ ಅಸಮರ್ಥತೆ, ವರ್ತನೆ ಅಸ್ವಸ್ಥತೆಗಳು ಕುರಿತು.

ಸ್ತ್ರೀರೋಗ ತಜ್ಞರಾದ ಡಾ. ಸ್ವಾತಿ ಕಿಶೋರ್, ಇಂಗ್ಲಿಷ್ ಶಿಕ್ಷಕರಾದ ದಿವಾಕರ್ ಎಂ.,ಮನೋಶಾಸ್ತ್ರಜ್ಞರಾದ ಡಾ.ಐಶ್ವರ್ಯ ಅರವಿಂದ್, ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿಗಳಾದ ಎ. ಎನ್. ರಾಮಚಂದ್ರ, ಮನೋ ಶಾಸ್ತ್ರಜ್ಞರಾದ ಡಾ. ಅರವಿಂದ್, ಚನ್ನಬಸಯ್ಯ ಚಿಕ್ ಮಠ್,ಸಂಸ್ಥೆಯ ನಿರ್ದೇಶಕರುಗಳಾದ ಹಿರಿಯಣ್ಣ ಹೆಗಡೆ, ಕೊಳಿಗೆ ವಾಸಪ್ಪ ಗೌಡ,ಬಿಜಿಎಸ್ ಶಾಲಾ ಕಾಲೇಜಿನ ಪ್ರಾಂಶುಪಾಲರಾದ ಸುರೇಶ್ ಎಸ್. ಎಚ್., ಬಿಜಿಎಸ್ ವಸತಿ ಶಾಲೆಯ ಮುಖ್ಯ ಶಿಕ್ಷಕ ಗಿರೀಶ್,ಶ್ರೀ ಆದಿಚುಂಚನಗಿರಿ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಪ್ರಾಂಶುಪಾಲರಾದ ದಿವ್ಯ ಕರಣಂ,ಶ್ರೀ ಮತಿ ವೀಣಾ, ಶ್ರೀಮತಿ ಸುಜಾತಾ, ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ನ ಎಲ್ಲಾ ಶಿಕ್ಷಕರು ಮತ್ತು ಶಿಕ್ಷಕಿಯರು ಉಪಸ್ಥಿತರಿದ್ದರು.

# ಚಿತ್ರಕಲೆಯ ಮೂಲಕ ಅದ್ಭುತಗಳನ್ನು ಸೃಷ್ಟಿಸಬಹುದು : ಕೆ.ಎಂ.ವಿರೇಶ್

**ಚಿತ್ರದುರ್ಗ ಮೇ.02:** ನೀವು ನೋಡುವುದನ್ನು ಚಿತ್ರಿಸುವುದು ಸುಲಭವಾಗಿದ್ದರೂ, ಚಿತ್ರಕಲೆಯ ಹಿಂದಿನ ಅರ್ಥವನ್ನು ಅರ್ಥಮಾಡಿ ಕೊಳ್ಳುವುದು ಕೆಲವೊಮ್ಮೆ ಕಷ್ಟಕರವಾಗಿರುತ್ತದೆ. ಚಿತ್ರಕಲೆಯ ಆಳ ಮತ್ತು ಮೌಲ್ಯವು ಅಂತಹದ್ದಾಗಿದೆ ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ನ ಅಧ್ಯಕ್ಷರಾದ ಕೆ.ಎಂ.ವಿರೇಶ್ ತಿಳಿಸಿದ್ದಾರೆ.



ಕಲಾ ಚೈತನ್ಯ ಸೇವಾ ಸಂಸ್ಥೆ (ರಿ) ಸಾಂಸ್ಕೃತಿಕ ಕಲಾ ಸಂಘ ಚಿತ್ರದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ ಕಲಾವಿದ ಲಿಯನಾರ್ಡೊ ಡಾವಿನ್ಸಿರವರ ಜನ್ಮ ದಿನದ ಸವಿನೆನಪಿಗಾಗಿ ವಿಶ್ವ ಕಲಾ ದಿನಾಚರಣೆ ಪ್ರಯುಕ್ತ ಧರ್ಮಶಾಲಾ ರಸ್ತೆಯಲ್ಲಿನ ಕೋಮಲ ನರ್ಸಿಂಗ್ ಹೊಂ ಹತ್ತಿರ ಸೀತಾರಾಮ ಮಂದಿರ ನಡೆಸಲಾದ ಮಕ್ಕಳಿಗೆ ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆಯ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಚಿತ್ರಕಲೆ ನಮ್ಮ ಮಕ್ಕಳು ತಮ್ಮನ್ನು ತಾವು ವ್ಯಕ್ತಪಡಿಸಿಕೊಳ್ಳುವ ಕಲೆ, ಮತ್ತು ಅವರ ಆಲೋಚನೆಗಳು ಎಷ್ಟರ ಮಟ್ಟಿಗೆ ಹೋಗುತ್ತವೆ ಎಂದು ನಾವು ಊಹಿಸಲೂ ಸಾಧ್ಯವಿಲ್ಲ. ಹಿರಿಯರಾದ ನಾವು ಪ್ರತಿಭಾನ್ವಿತ ಮಕ್ಕಳಿಗೆ ಚಿತ್ರಕಲೆಯಲ್ಲಿ ನೈಸರ್ಗಿಕ ಕೌಶಲ್ಯವಿಲ್ಲದಿದ್ದರೂ, ಚಿತ್ರಕಲೆಯನ್ನು ಅಭ್ಯಾಸ ಮಾಡಲು ಮತ್ತು ಅವರ ಕಲೆಯನ್ನು ಪರಿಷ್ಕರಿಸಲು ಪ್ರೋತ್ಸಾಹಿಸಬೇಕು. ಈ ಚಿತ್ರಕಲೆ ಪ್ರಬಂಧವು ಮಕ್ಕಳ ಕನಸುಗಳು ಮತ್ತು ಪ್ರತಿಭೆಗಳನ್ನು ನಾವು ಬೆಂಬಲಿಸಿದರೆ, ಅವರು ಖಂಡಿತವಾಗಿಯೂ ಬಹಳ ದೂರ ಹೋಗುತ್ತಾರೆ ಎಂದು ತೋರಿಸುತ್ತದೆ. ಹೀಗಾಗಿ, ಅವರು ತಮ್ಮನ್ನು ತಾವು ಅನುಮಾನಿಸುವುದನ್ನು ನಿಲ್ಲಿಸುತ್ತಾರೆ ಮತ್ತು ವಾಸ್ತವವಾಗಿ, ಚಿತ್ರಕಲೆಯ ಮೂಲಕ ಅದ್ಭುತಗಳನ್ನು ಸೃಷ್ಟಿಸಬಹುದು ಎಂದು ನಂಬುತ್ತಾರೆ ಎಂದರು.

ಪತ್ರಕರ್ತರಾದ ಉಜ್ಜನಪ್ಪ ಮಾತನಾಡಿ, ಕಲಾವಿದ ಲಿಯನಾರ್ಡೊ ಡಾವಿನ್ಸಿರವರ ಜನ್ಮ ದಿನದ ಸವಿನೆನಪಿಗಾಗಿ ಈ ರೀತಿಯ ಚಿಕತ್ರಕಲಾ ಸ್ಪರ್ದೆಯನ್ನು ನಡೆಸುತ್ತಿರುವುದು ಉತ್ತಮವಾದ ಕಾರ್ಯವಾಗಿದೆ. ಇವರು ರಚನೆ ಮಾಡಿದ ಮನೋಲಿಸ್ ಚಿತ್ರ ಒಂದೊಂದು ಕಡೆಯಿಂದ ಒಂದೂಂದು ರೀತಿಯಲ್ಲಿ ಕಾಣುತ್ತಿತ್ತು, ಇದನ್ನು ನೋಡಿದವರು ಆಶ್ಚರ್ಯ ಚಿಕಿತರಾಗುತ್ತಿದ್ದರು. ಹೊರಗಿನ ಸುಂದರ ಪ್ರಕೃತಿಯನ್ನು ನೋಡುವುದರಲ್ಲಿ ಶಾಂತಿಯನ್ನು ಕಂಡುಕೊಳ್ಳುವ ಜನರಿದ್ದಾರೆ, ಆದರೆ ಈ ಸೌಂದರ್ಯವನ್ನು ತಮ್ಮ ವರ್ಣಚಿತ್ರಗಳಲ್ಲಿ ಸೆರೆಹಿಡಿಯುವಲ್ಲಿ ತೃಪ್ತಿಯನ್ನು ಕಂಡುಕೊಳ್ಳುವ ಕೆಲವರು ಇದ್ದಾರೆ. ಈ ಚಿತ್ರಕಲೆ ಪ್ರಬಂಧವು ಸರಳ ಮತ್ತು ನಿರೂಪಣಾ ಸ್ವರೂಪವನ್ನು ಹೊಂದಿರುವುದರಿಂದ, ಮಕ್ಕಳು ಅದನ್ನು ಸುಲಭವಾಗಿ ಅರ್ಥಮಾಡಿಕೊಳ್ಳಬಹುದು.

ಮಕ್ಕಳಿಗೆ ವೈವಿಧ್ಯಮಯ ಆಸಕ್ತಿಗಳಿರುತ್ತವೆ, ಮತ್ತು ಅವರು ಕಲೆ ಮತ್ತು ಚಿತ್ರಕಲೆಯನ್ನು ಇಷ್ಟಪಡುತ್ತಾರೆ ಬಣ್ಣಗಳು, ಕುಂಚಗಳು ಮತ್ತು ಕಾಗದವನ್ನು ಖರೀದಿಸುವುದು ಒಳ್ಳೆಯದು. ಹವ್ಯಾಸವಾಗಿ ಚಿತ್ರಕಲೆ ಅವರಿಗೆ ವಿಶ್ರಾಂತಿ ಮತ್ತು ಆನಂದಿಸಲು ಸಹಾಯ ಮಾಡುತ್ತದೆ, ಇದು ಅವರ ಕಲ್ಪನಾಶಕ್ತಿ ಮತ್ತು ಸೃಜನಶೀಲ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವುದರ ಜೊತೆಗೆ ಅವರ ಕೈ-ಕಣ್ಣಿನ ಸಮನ್ವಯವನ್ನು ಸುಧಾರಿಸುತ್ತದೆ ಎಂದರು.

ಕಲಾವಿದರಾದ ನಾಗರಾಜ್ ಬೇದ್ರೆ ಮಾತನಾಡಿ, ಚಿಕ್ಕ ವಯಸ್ಸಿನಲ್ಲೇ ಅವರಿಗೆ ಚಿತ್ರಕಲೆಯನ್ನು ಪರಿಚಯಿಸುವುದು ಒಳ್ಳೆಯದೇ ಆದರೂ, ನಾವು ಅವರ ತಟ್ಟೆಗಳನ್ನು ಅತಿಯಾಗಿ ತುಂಬಿಸಬಾರದು. ಮೊದಲು, ಅವರಿಗೆ ಸಣ್ಣ ಕ್ಯಾನ್ವಾಸ್ಗಳನ್ನು ನೀಡಿ ಮತ್ತು ಹೊಸದನ್ನು ರೂಪಿಸಲು ಬಣ್ಣಗಳನ್ನು ಮಿಶ್ರಣ ಮಾಡುವುದು ಹೇಗೆ ಎಂದು ಕಲಿಯಲು ಬಿಡಿ. ಅವರು ಬಣ್ಣಗಳೊಂದಿಗೆ ಪರಿಚಿತರಾದ ನಂತರ, ಚಿತ್ರಿಸಲು ನಿರ್ದಿಷ್ಟ ವಿಷಯಗಳು ಅಥವಾ ಥೀಮ್ಗಳನ್ನು ನೀಡಿ. ಅಲ್ಲದೆ, ಜಲವರ್ಣ ಚಿತ್ರಕಲೆ, ಎಣ್ಣೆ ಚಿತ್ರಕಲೆ, ಅಕ್ರಿಲಿಕ್ ಚಿತ್ರಕಲೆ ಮುಂತಾದ ವಿವಿಧ ರೀತಿಯ ವರ್ಣಚಿತ್ರಗಳನ್ನು ಅವರಿಗೆ ಪ್ರಸ್ತುತಪಡಿಸಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಯೋಗು ಗುರು ಮುರಳಿ, ಟೈಕೋಂಡೋ ಶಿಕ್ಷಕರಾದ ಅನಿತಾ, ಕಂಪ್ಯೂಟರ್ ಶಿಕ್ಷಕರಾದ ಜಾವಿದ್, ಕಲಾವಿದರಾದ ಜವಳಿ ಶಾಂತಕುಮಾರ್, ನವೀನ್ ಬೇದ್ರೆ, ಶೃತಿ ಎಸ್ ಹೆಗಡೆ, ಮಾರುತಿ ಅಮೂಲ್ಯ ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಸ್ಪರ್ದೆಯಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಬಹುಮಾನವನ್ನು ವಿತರಣೆ ಮಾಡಲಾಯಿತು.

ಈ ಚಿತ್ರಕಲಾ ಸ್ಪರ್ಧೆಯಲ್ಲಿ ನಿಸರ್ಗ ಚಿತ್ರ,ಮನೆ, ಬೆಟ್ಟ, ಪರಿಸರ, ಹೂ, ಸರೋವರ ಡಿಸೈನ್ ಡ್ರಾಯಿಂಗ್ ಪೈಸಿಲ್ ಶೇಖ್ ಸೇರಿದಂತೆ ಇತರೆ ಚಿತ್ರಗಳನ್ನು ಮಕ್ಕಳು ರಚನೆ ಮಾಡಿದ್ದರು ಈ ಸ್ಪರ್ದೆಯಲ್ಲಿ ಸುಮಾರು 100 ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು.

# ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶ : ಆನ್‌ಲೈನ್ ಅರ್ಜಿ ಆಹ್ವಾನ

**ತುಮಕೂರು :** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಪಿಯುಸಿ ಹಾಗೂ ಡಿಪ್ಲೋಮಾ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ತುಮಕೂರು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಲ್ಲೂಕು ವ್ಯಾಪ್ತಿಯ ಸತ್ಯಮಂಗಲದ ಸಾರ್ವಜನಿಕ ಮಾದರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ; ಕುಣಿಗಲ್ ರಸ್ತೆ ಮೆಟ್ರಿಕ್ ನಂತರ ವೃತ್ತಿಪರ ಬಾಲಕರ ವಿದ್ಯಾರ್ಥಿನಿಲಯ; ಸೋಮೇಶ್ವರ ಬಡಾವಣೆ, ದಿಬ್ಬೂರು, ಗಾರ್ಡನ್‌ರಸ್ತೆ, ಕುಣಿಗಲ್ ರಸ್ತೆ ಹಾಗೂ ಕೋತಿತೋಪಿನಲ್ಲಿರುವ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ; ರೈಲ್ವೇಸ್ಟೇಷನ್ ರಸ್ತೆ, ಉಪ್ಪಾರಹಳ್ಳಿ, ಶಿರಾಗೇಟ್ ರಸ್ತೆಯ ಸಾಯಿ ಬಡಾವಣೆ, ಸರಸ್ವತಿಪುರಂ, ಶಿರಾಗೇಟ್ ಅರಳೀಮರದ ಪಾಳ್ಯದ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ; ರೈಲ್ವೇಸ್ಟೇಷನ್ ರಸ್ತೆ ಹಾಗೂ ಕುಣಿಗಲ್ ರಸ್ತೆಯ ಮೆಟ್ರಿಕ್ ನಂತರ ವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸುವ ಪ್ರವರ್ಗ-1, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ವರಮಾನ 2.50ಲಕ್ಷ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ವರಮಾನ 1 ಲಕ್ಷ ರೂ. ಮಿತಿಯೊಳಗಿರಬೇಕು. ಆಸಕ್ತ ವಿದ್ಯಾರ್ಥಿಗಳು ತಮ್ಮ ಅರ್ಜಿಯನ್ನು ಜೂನ್ 20ರೊಳಗಾಗಿ ಜಾಲತಾಣ: https://shp.karnataka.gov.in/bcwd ಮೂಲಕ ಸಲ್ಲಿಸಬಹುದಾಗಿದೆ. ತಾಲ್ಲೂಕುವಾರು ವಿದ್ಯಾರ್ಥಿ ನಿಲಯಗಳ ವಿವರ, ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ, ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಜಾಲತಾಣ: https://bcwd.karnataka.gov.in/ ಅನ್ನು ಸಂಪರ್ಕಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ವಿ-ಅಂಚೆ: bcwd-helpline@gmail.com ಮೂಲಕ ಅಥವಾ ಜಿಲ್ಲಾ/ ತಾಲ್ಲೂಕು ಮಟ್ಟದ ಇಲಾಖಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

# ಪಾಲಿಕೆ ವ್ಯಾಪ್ತಿ ಪ್ರದೇಶ ವಿಸ್ತರಣೆಗೆ ಸ್ಥಳೀಯರಿಂದ ಅಭಿಪ್ರಾಯ ಸಂಗ್ರಹಿಸಲು ಸೂಚನೆ : ಗುರುದತ್ತ ಹೆಗಡೆ

**ಶಿವಮೊಗ್ಗ :** ಶಿವಮೊಗ್ಗ ಮಹಾನಗರಪಾಲಿಕೆ ವ್ಯಾಪ್ತಿಯನ್ನು ಇನ್ನಷ್ಟು ವಿಸ್ತರಿಸುವ ಸಂಬಂಧ ಶಿವಮೊಗ್ಗ ನಗರ ಮತ್ತು ಗ್ರಾಮಾಂತರ ಪ್ರದೇಶ ಹಾಗೂ ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಗೊಳಪಡುವ 09ಗ್ರಾಮ ಪಂಚಾಯಿತಿಗಳ 19ಹಳ್ಳಿಗಳನ್ನು ಗುರುತಿಸಲಾಗಿದ್ದು, ಅವುಗಳನ್ನು ಸೇರ್ಪಡೆಗೊಳಿಸುವ ಪೂರ್ವದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ಆಯಾ ಕ್ಷೇತ್ರಗಳ ಶಾಸಕರು ಹಾಗೂ ಆಯಾ ಗ್ರಾಮ ಪಂಚಾಯಿತಿಗಳ ಚುನಾಯಿತ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರಿಂದ ಅಭಿಪ್ರಾಯವನ್ನು ಸಂಗ್ರಹಿಸಿ, ಮುಂದಿನ 15ದಿನಗಳೊಳಗಾಗಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಗುರುದತ್ತಹೆಗಡೆ ಅವರು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಶಿವಮೊಗ್ಗ ಮಹಾನಗರಪಾಲಿಕೆ ವ್ಯಾಪ್ತಿಯನ್ನು ಇನ್ನಷ್ಟು ವಿಸ್ತರಿಸುವ ಸಂಬಂಧ ಏರ್ಪಡಿಸಲಾಗಿದ್ದ ಅಧಿಕಾರಿಗಳ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಈ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯ ಆಡಳಿತ ಸುಧಾರಣಾ ಆಯೋಗವು ಬೆಳೆಯುತ್ತಿರುವ ನಗರ, ಪಟ್ಟಣ ಪ್ರದೇಶಗಳನ್ನು ಪಾಲಿಕೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಗೆ ಸೇರ್ಪಡೆಗೊಳಿಸುವ ಬಗ್ಗೆ ಪರಿಶೀಲಿಸಿ ವರದಿ ನೀಡುವಂತೆ ಸೂಚನೆ ನೀಡಿದ್ದರ ಮೇರೆಗೆ ಸಭೆಯನ್ನು ಆಯೋಜಿಸಲಾಗಿತ್ತು ಎಂದರು.

1993ರಲ್ಲಿ ಪಾಲಿಕೆಯ ವ್ಯಾಪ್ತಿಯನ್ನು ಗುರುತಿಸುವ ಕಾರ್ಯ ನಡೆದಿತ್ತು. ಆದರೆ, ಇತ್ತೀಚಿನ ಒಂದು ದಶಕದಿಂದೀಚೆಗೆ ಕೃಷಿ ಪ್ರದೇಶದ ವ್ಯಾಪ್ತಿ ಕಡಿಮೆಯಾಗಿರುವ ಹಾಗೂ ಪಾಲಿಕೆ ವ್ಯಾಪ್ತಿಯಲ್ಲಿ ಅಭಿವೃದ್ಧಿಯಾಗಿರುವ ಪ್ರದೇಶಗಳನ್ನು ಪಾಲಿಕೆ ವ್ಯಾಪ್ತಿಗೆ ಸೇರ್ಪಡೆಗೊಳಿಸುವ ಬಗ್ಗೆ ಸರ್ಕಾರವು ಮಾರ್ಗದರ್ಶನ ನೀಡಿತ್ತು.

ಆ ನಿರ್ದೇಶನದ ಹಿನ್ನೆಲೆಯಲ್ಲಿ ಮಹಾನಗರಪಾಲಿಕೆ ವತಿಯಿಂದ 09ಸಮಿತಿಗಳನ್ನು ರಚಿಸಿ, ಸಮೀಕ್ಷೆ ನಡೆಸಿ, ಈ ಸಮಿತಿಗಳು ನೀಡಿದ ವರದಿಯ ಆಧಾರದ ಮೇಲೆ ಪಾಲಿಕೆಯ ವಿಸ್ತರಿಸಬಹುದಾದ ವ್ಯಾಪ್ತಿಯನ್ನು ತಾತ್ಕಾಲಿಕವಾಗಿ ಗುರುತಿಸಿ, ಪ್ರಾದೇಶಿಕ ಆಯುಕ್ತರಿಗೆ ಸಲ್ಲಿಸಲಾಗಿತ್ತು. ಅವರ ಮಾರ್ಗದರ್ಶನದಂತೆ ಇಂದು ಸಮಿತಿ ಸಭೆ ಸೇರಿ ಸಂಬಂಧಿತ ಇಲಾಖೆಯ ಅಧಿಕಾರಿಗಳೊಂದಿಗೆ ವ್ಯಾಪ್ತಿ ವಿಸ್ತರಣೆಯ ಸಾಧಕ–ಬಾಧಕಗಳ ಕುರಿತು ವಿಸ್ತೃತ ಚರ್ಚೆ ನಡೆಸಲಾಗಿದೆ ಎಂದವರು ತಿಳಿಸಿದರು.

ಸಭೆಯಲ್ಲಿ ಮಹಾನಗರಪಾಲಿಕೆ ಆಯುಕ್ತೆ ಶ್ರೀಮತಿ ಕವಿತಾ ಯೋಗಪ್ಪನವರ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರಂಗಸ್ವಾಮಿ, ಆರ್.ಮೋಹನ್‌ಕುಮಾರ್ ಸೇರಿದಂತೆ ಎಲ್ಲಾ ಸಂಬಂಧಿತ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಪಾಲಿಕೆಯ ಅಧಿಕಾರಿ–ಸಿಬ್ಬಂದಿಗಳು ಮತ್ತಿತರರು ಉಪಸ್ಥಿತರಿದ್ದರು.

ಈ ಪಾಲಿಕೆಯ ವ್ಯಾಪ್ತಿ ವಿಸ್ತರಣೆಯಿಂದ ನಗರ ನೀರು ಸರಬರಾಜು ಮತ್ತು ಒಳಚರಂಡಿಗಳ ವ್ಯವಸ್ಥಿತ ನಿರ್ವಹಣೆ, ಆರೋಗ್ಯ ಮತ್ತು ನೈರ್ಮಲ್ಯ, ಬೀದಿದೀಪ ಅಳವಡಿಕೆ, ಆಸ್ತಿ ತೆರಿಗೆ ವಸೂಲಾತಿ, ನೀರಿನ ತೆರಿಗೆ ವಸೂಲಾತಿ, ಮಾರುಕಟ್ಟೆ ಸ್ಥಳಗಳು, ಅಗ್ನಿಶಾಮಕ ದಳಗಳು,

ಪ್ರಸ್ತುತ ಮಹಾನಗರಪಾಲಿಕೆ ಆಯುಕ್ತರ ಮೂಲಕ ಸ್ಥಳೀಯ 35ವಾರ್ಡುಗಳ ಆಡಳಿತವನ್ನು ನಿರ್ವಹಿಸಲಾಗುತ್ತಿದೆ. ಪ್ರಸ್ತುತ ಅಬ್ಬಲಗೆರೆ, ಕೋಟೆಗಂಗೂರು, ಮುದ್ದಿನಕೊಪ್ಪ, ಮೇಲಿನಹನಸವಾಡಿ, ಮಾಚೇನಹಳ್ಳಿ,

ಅಗಸವಳ್ಳಿ ಮುಂತಾದ ಗ್ರಾಮ ಪಂಚಾಯಿತಿಗಳ ಭಾಗಶಃ ಮತ್ತು ಪೂರ್ಣ ಪ್ರಮಾಣದಲ್ಲಿ ಗ್ರಾಮಗಳು ಸೇರ್ಪಡೆಗೊಳ್ಳುವ ಸಂಭವವಿದೆ. ಅಂತಿಮ ಸಮಾಲೋಚನಾ ಸಭೆಯ ನಂತರ ವ್ಯಾಪ್ತಿಯ ಅಂತಿಮ ನಕ್ಷೆ ಸಿದ್ಧಗೊಳ್ಳಲಿದೆ.

# ತ್ಯಾಜ್ಯ ಸಾಗಾಟದ ಟ್ರ್ಯಾಕ್ಟರ್, ಮಿನಿ ಟಿಪ್ಪರ್ ಲೋಕಾರ್ಪಣೆ ಮಾಡಿದ ಸಚಿವ ಎಚ್ ಕೆ ಪಾಟೀಲ

**ಗದಗ :** ಗದಗ ಬೇಟಗೇರಿ ನಗರಸಭೆಯಿಂದ ನಹರದ ಸ್ವಚ್ಚತೆಗಾಗಿ ತ್ಯಾಜ್ಯ ಸಾಗಾಟದ ಟ್ರ್ಯಾಕ್ಟರ್ ಟ್ರೇಲರ್, ಮನೆ ಮನೆ ತ್ಯಾಜ್ಯ ಸಂಗ್ರಹಣೆಗೆ ಮಿನಿ ಟಿಪ್ಪರ್ ವಾಹನಗಳನ್ನು. ಸಾರ್ವಜನಿಕ ಉಪಯೋಗಕ್ಕೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಲೋಕಾರ್ಪಣೆ ಮಾಡಿದರು.

ನಗರಸಭೆ ಆವರಣದಲ್ಲಿ ಮಂಗಳವಾರ ಸಚಿವರು ನಗರಸಭೆ ಕಾರ್ಯಾಲಯ ಸನ್ 2024/25 ನೇ ಸಾಲೀನ 15 ನೇ ಹಣಕಾಸು ನಿರ್ಬಂಧಿತ ಯೋಜನೆಯ ಅವನುದಾನದಲ್ಲಿ ತ್ಯಾಜ್ಯ ಸಾಗಾಟದ 4 ಟ್ರ್ಯಾಕ್ಟರ್ ಟ್ರೇಲರ್, ಮನೆ ಮನೆ ತ್ಯಾಜ್ಯ ಸಂಗ್ರಹಣೆಗೆ 6 ಮಿನಿ ಟಿಪ್ಪರ್ ವಾಹನಗಳನ್ನು ಸಾರ್ವಜನಿಕ ಉಪಯೋಗಕ್ಕೆ ಒಟ್ಟು ಅಂದಾಜು 1 ಕೋಟಿ ವೆಚ್ಚದಲ್ಲಿ ಖರೀದಿಸಲಾದ ವಾಹನಗಳನ್ನು ಲೋಕಾರ್ಪಣೆ ಮಾಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅವರು ನಗರಸಭೆಯಿಂದ ಬಿ ಖಾತಾ ಉತಾರಗಳನ್ನು ಸಾಂಕೇತಿಕವಾಗಿ ಫಲಾನುಭವಿಗಳಿಗೆ ವಿತರಣೆ ಮಾಡಿದರು.



ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ ಬಿ ಅಸೂಟಿ, ತಾಲ್ಲೂಕು ಅಧ್ಯಕ್ಷ ಅಶೋಕ ಮಂದಾಲಿ, ಎಸ್ ಎನ್ ಬಳ್ಳಾರಿ, ಸಿದ್ದು ಪಾಟೀಲ, ಪ್ರಭು ಬುರಬುರೆ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ ಸೇರಿದಂತೆ ನಗರಸಭೆ ಸದಸ್ಯರು ಹಾಜರಿದ್ದರು.

## ಉಚಿತ ವೃತ್ತಿ ತರಬೇತಿಗಳು ಆರಂಭ

**ಗದಗ :** SBI-ASF ಈ ಆರ್‌ಸೆಟಿ (ಗಿಟ್‌ಸರ್ಡ್) (ಗ್ರಾಮೀಣ ಸ್ವಯಂಉದ್ಯೋಗ ತರಬೇತಿ ಸಂಸ್ಥೆ ಹುಲಕೋಟಿ ಗದಗ) ಮತು ಅಗ್ರಿಕಲ್ಚರಲ್ ಸೈನ್ಸ್ ಫೌಂಡೇಶನ್ ಹುಲಕೋಟಿ, ಇವುಗಳ ಸಂಯುಕ್ತ ಆಶ್ರಯದಲ್ಲಿ ಉಚಿತ ಊಟ–ವಸತಿಯೊದಿಗೆ 1. ಹೈನುಗಾರಿಕೆ ಮತ್ತು ಎರೆಹುಳ ಗೊಬ್ಬರ ತಯಾರಿಕೆ ತರಬೇತಿ 2. ಅಣಬೆ ತಯಾರಿಕೆ ತರಬೇತಿ 3. ಕುರಿ ಸಾಕಾಣಿಕೆ ತರಬೇತಿ 4.ಉದ್ಯಮಶೀಲತಾ ಅಭಿವೃದ್ದಿ ತರಬೇತಿ ಈ ಉಚಿತ ತರಬೇತಿಗಳನ್ನು ಜೂನ್ ಮತ್ತು ಜುಲೈ ತಿಂಗಳು 2025ರ ಆರಂಭಿಸಲಾಗುವುದು,

ಆದ್ದರಿಂದ ಆಸಕ್ತರು, ನಿರುದ್ಯೋಗಿಗಳು, ಯುವಕ/ಯುವತಿಯರು, ಪುರುಷರು, ಮಹಿಳೆಯರು, ಸ್ವ ಸಹಾಯ ಗುಂಪಿನವರು ಮತ್ತು ಯಾವುದೇ ಸಾಮಾನ್ಯ ಜನರು 19 ರಿಂದ 44 ವಯಸ್ಸಿನೊಳಗಿನ ಗ್ರಾಮೀಣ ಭಾಗದವರಿಗೆ ಅರ್ಜಿ ಆಹ್ವಾನಿಸಿದೆ. ಈ ತರಬೇತಿಗಳು ಊಟ, ವಸತಿಯೊಂದಿಗೆ ಉಚಿತವಾಗಿರುತ್ತದೆ, ಕೇಂದ್ರ ಸರಕಾರದಿಂದ ತರಬೇತಿಯ ಪ್ರಮಾಣ ಪತ್ರಕೊಡಲಾಗುವುದು, ತರಬೇತಿ ಪಡೆದವರಿಗೆ ಬ್ಯಾಂಕ್ ಸಾಲ ಮಾಡಿಸಿಕೊಡಲಾಗುವುದು. ಆಸಕ್ತರು ಎಸ್.ಬಿ.ಆಯ್ ಆರ್‌ಸೆಟಿ ಹುಲಕೋಟಿ ಗದಗ ಸಂಸ್ಥೆಯಲ್ಲಿ ದೊರೆಯುವ ಅರ್ಜಿ ಫಾರಂನಲ್ಲಿ ತುಂಬಿ ನಿರ್ದೇಶಕರುಖಃಖ–೦ಖಈಆ ಈ ಆರ್,ಸೆಟಿ ಸಂಸ್ಥೆ ಹುಲಕೋಟಿ ಗದಗ, ಕೃಷಿ ವಿಜ್ಞಾನ ಕೇಂದ್ರ ಆವರಣ, ಹುಲಕೋಟಿ ಗದಗ. ಇವರಿಗೆ ಅರ್ಜಿ ಸಲ್ಲಿಸಬೇಕು, ಅಥವಾ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ–8880169996/9632287949 ಸಂಪರ್ಕಿಸಲು ಕೋರಲಾಗಿದೆ.

## ಅರ್ಜಿ ಆಹ್ವಾನ

**ಶಿವಮೊಗ್ಗ:** ಸಾಗರ ಸಮಾಜ ಕಲ್ಯಾಣ ಇಲಾಖೆಯು 2025–26ನೇ ಶೈಕ್ಷಣಿಕ ಸಾಲಿಗೆ ಮೆಟ್ರಿಕ್ ಪೂರ್ವ/ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಅರ್ಹ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಆನ್‌ಲೈನ್ ತಿತಿತಿ.ತಿ.ಇಚಡಿ.ಟಿಛಿ.ಟಿ ಮುಖಾಂತರ ಅರ್ಜಿ ಆಹ್ವಾನಿಸಿದೆ.

ಆಸಕ್ತರು ನಿಗದಿತ ನಮೂನೆ ಅರ್ಜಿಗಳನ್ನು ಆಯಾ ವಿದ್ಯಾರ್ಥಿ ನಿಲಯಗಳಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಕಳೆದ ಸಾಲಿನ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ದೂರವಾಣಿ ಸಂಖ್ಯೆ, ಎಸ್‌ಎಟಿಎಸ್ ಐಡಿ (ಮೆ.ಪೂ.ವಿದ್ಯಾರ್ಥಿಯಾಗಿದ್ದಲ್ಲಿ), ಎಸ್‌ಎಸ್‌ಪಿ ಐಡಿ, ಯುನಿರ್ವಸಿಟಿ ಐಡಿ ನಂ. ಮತ್ತು ಯುನಿರ್ವಸಿಟಿ ರಿಜಿಸ್ಟ್ರೇಷನ್ ನಂ. (ಮೆ. ನಂ. ವಿದ್ಯಾರ್ಥಿಯಾಗಿದ್ದಲ್ಲಿ) ದಾಖಲೆಗಳೊಂದಿಗೆ ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿ ಅರ್ಜಿ ಸಲ್ಲಿಸುವಂತೆ ಸಸಾಗರ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 9480843192 ಅಥವಾ ಸಹಾಯಕ ನಿರ್ದೇಶಕರು, ಸಾಗರ ಸಮಾಜ ಕಲ್ಯಾಣ ಇಲಾಖೆ ಇವರನ್ನು ಸಂಪರ್ಕಿಸುವುದು.

## ಅರಿವು ಸಾಲಯೋಜನೆಗೆ ಅವಧಿ ವಿಸ್ತರಣೆ

**ಹಾಸನ :** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸುತ್ತಿರುವ "ಅರಿವು ವಿದ್ಯಾಭ್ಯಾಸ ಯೋಜನೆಯಡಿ" ಪ್ರವೇಶ ಪಡೆಯಬಯಸುವ ವಿದ್ಯಾರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ 2025–26 ನೇ ಸಾಲಿಗೆ ಅಇಖಿ/ಓಇಇಖಿ ಮುಖೇನ ಆಯ್ಕೆಯಾಗುವ, ವೈದ್ಯಕೀಯ (ಎಂ.ಬಿ.ಬಿ.ಎಸ್) ಬಿಡಿಎಸ್, ಬಿ.ಇ/ಬಿ.ಟೆಕ್ ಬ್ಯಾಚುರಲ್ ಆಫ್ ಆರ್ಕಿಟೆಕ್ಚರ್, ಬಿ.ಆಯುಷ್, ಫಾರ್ಮಸಿ, ಕೃಷಿ ವಿಜ್ಞಾನ ಮತ್ತು ಪಶುವೈದ್ಯಕೀಯ ಇಂತಹ ಕೋರ್ಸ್‌ಗಳಿಗೆ ಸಾಲವನ್ನು ಪಡೆಯಲು ವೆಬ್‌ಸೈಟ್ kmdconline.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ದಿನಾಂಕ 31–05–2025 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಮೌಲಾನಾ ಆಜಾದ್ ಭವನ, 1 ನೇ ಮಹಡಿ, ಸಾಲಗಾಮೆ ಮುಖ್ಯ ರಸ್ತೆ, ಆಕಾಶವಾಣಿ ಕ್ವಾಟ್ರಸ್ ಹಿಂಭಾಗ, ಶ್ರೀ ವಿದ್ಯಾ ಗಣಪತಿ ದೇವಸ್ಥಾನ ಅಡ್ಡ ರಸ್ತೆ, ಮಲ್ನಾಡ್ ಇಂಜಿನಿಯರಿಂಗ್ ಕಾಲೇಜ್ ಹತ್ತಿರ, ಹಾಸನ. ದೂರವಾಣಿ ಸಂಖ್ಯೆ–08172–246333 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ಜನ, ಜಾನುವಾರು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರ ಮಾಡಿ

**ಹಾಸನ :** ಯಗಚಿ ಜಲಾನಯನ ಪ್ರದೇಶದಲ್ಲಿ (ಮೂಡಿಗೆರೆ, ಬೇಲೂರು ಮತ್ತು ಚಿಕ್ಕಮಗಳೂರು ತಾಲ್ಲೂಕು) ವ್ಯಾಪಕವಾಗಿ ಮಳೆ ಸುರಿಯುತ್ತಿದ್ದು, ಮೇ.25 ರಂದು ಬೆಳಿಗ್ಗೆ 6 ಗಂಟೆಗೆ 500.00 ಕ್ಯೂಸೆಕ್ಸ್ ನೀರು ಜಲಾಶಯಕ್ಕೆ ಹರಿದು ಬರುತ್ತಿದ್ದು, ಜಲಾಶಯದ ಗರಿಷ್ಟ ನೀರಿನ ಮಟ್ಟವು 964,60 ಮೀ. (3164.85 ಅಡಿ) ಗಳಾಗಿದ್ದು, ಸದರಿ ದಿನಾಂಕದಂದು ಬೆಳಗ್ಗೆ 6 ಗಂಟೆಗೆ ನೀರಿನ ಮಟ್ಟವು 964.23 ಮೀ. (9163.639 ಅಡಿ) ಗಳಾಗಿರುತ್ತದೆ. ಪ್ರಸ್ತುತವಾಗಿ ಯಗಚಿ ಜಲಾನಯನ ಪ್ರದೇಶದಲ್ಲಿ ವ್ಯಾಪಕವಾಗಿ ಹೆಚ್ಚು ಮಳೆಯಾಗುತ್ತಿದ್ದು, ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಜಲಾಶಯಕ್ಕೆ ನೀರು ಹರಿದುಬರುವ ಸಾಧ್ಯತೆ ಇರುವುದರಿಂದ ಜಲಾಶಯದಿಂದ ಯಾವುದೇ ಸಮಯದಲ್ಲಾದರೂ ಯಗಚಿ ನದಿಗೆ ಹೆಚ್ಚಿನ ಪ್ರಮಾಣದ ನೀರನ್ನು ಹೊರಬಿಡುವ ಸಾಧ್ಯತೆ ಇರುತ್ತದೆ.

ಈ ಹಿನ್ನೆಲೆಯಲ್ಲಿ ಯಗಚಿ ನದಿ ಪಾತ್ರ, ನದಿ ದಂಡೆ ಮತ್ತು ನದಿಯ ಆಸು ಪಾಸಿನಲ್ಲಿ ವಾಸಿಸುವ ಎಲ್ಲಾ ಗ್ರಾಮಸ್ಥರು/ಸ್ಥಳೀಯ ವಾಸಿಗಳು ಮುನ್ನೆಚ್ಚರಿಕೆ ಕ್ರಮವಾಗಿ ಜನ, ಜಾನುವಾರು ಹಾಗೂ ಆಸ್ತಿ ಪಾಸ್ತಿ ವಗೈರೆಗಳನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರ ಮಾಡಿಕೊಳ್ಳುವ ಬಗ್ಗೆ ಮಾಹಿತಿ ಮತ್ತು ಜಾಗೃತಿ ಮೂಡಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲು ಈ ಮೂಲಕ ಸಂಬಂಧಿಸಿದವರಲ್ಲಿ ಕೋರಲಾಗಿದೆ.


ಮುಂದುವರೆದು ಸಾರ್ವಜನಿಕರಿಗೆ ಮಾಹಿತಿ ಮತ್ತು ಜಾಗೃತಿ ಮೂಡಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲು ಸಂಬಂಧಿಸಿದ ಸರ್ಕಾರದ ಸ್ಥಳೀಯ ಇಲಾಖಾ ಅಧಿಕಾರಿಗಳಿಗೆ ಈ ಮೂಲಕ ಕಾರ್ನೀನಿನಿ, ಬೇಲೂರಿನ ಯಗಚಿ ಯೋಜನಾ ವಿಭಾಗದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

# ಮೂಲಭೂತ ಸೌಕರ್ಯಗಳ ವಂಚನೆ, ಹುಸಿ ಭರವಸೆ ವಿದ್ಯಾರ್ಥಿಗಳ ಪ್ರತಿಭಟನೆ

**ಹಾವೇರಿ:** ತಾಲ್ಲೂಕಿನ ಗಾಂಧಿಪುರ ಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ಆವರಣದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳಿಂದ ವಂಚನೆ,ಹುಸಿ ಭರವಸೆ,ಹಾಸ್ಟೆಲ್ ಸ್ಥಳಾಂತರ ವಿರೋಧಿಸಿ ಭಾರತ ವಿದ್ಯಾರ್ಥಿ ಫೆಡರೇಶನ್ (ಎಸ್‌ಎಫ್‌ಐ)ಜಿಲ್ಲಾ ಸಮಿತಿ ನೇತೃತ್ವದಲ್ಲಿ ವಸತಿ ನಿಲಯದ ಮುಂದೆ ಪ್ರತಿಭಟನಾ ಧರಣಿ ನಿರತ ವಿದ್ಯಾರ್ಥಿಗಳು ಸ್ವಯಂ ಅಡುಗೆ ತಯಾರಿಸಿ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಎಸ್‌ಎಫ್‌ಐ ಹಾಸ್ಟೆಲ್ ಘಟಕ ಅಧ್ಯಕ್ಷ ಪರಶುರಾಮ ಕೊಪ್ಪಳದ ಮಾತನಾಡಿ ಹೊಸ ಕಟ್ಟಡದ ಸ್ಥಳಾಂತರ ನೆಪ ಹೇಳಿ ಆರು ತಿಂಗಳಿಂದ ಸೌಲಭ್ಯಗಳಿಂದ ವಂಚಿಸುತ್ತಿದ್ದಾರೆ. ಹೋರಾಟ ಮಾಡುತ್ತೇವೆ ಎಂದಾಗ ಮಾತ್ರ ರಿಪೇರಿ ಮಾಡಿಸಲು ಮುಂದಾಗುತ್ತಾರೆ ವಿನಹ ಪೂರ್ಣ ಪ್ರಮಾಣದಲ್ಲಿ ಕಾರ್ಯ ನಿರ್ವಹಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಧರಣಿಯನ್ನು ಬೆಂಬಲಿಸಿ ಎಸ್‌ಎಫ್‌ಐ ಜಿಲ್ಲಾಧ್ಯಕ್ಷ ಬಸವರಾಜ ಎಸ್ ಮಾತನಾಡಿ ನಗರ,ಊರಿಂದ ದೂರವಿರುವ ವಸತಿ ನಿಲಯಕ್ಕೆ ಮೂಲಭೂತ ಸೌಕರ್ಯಗಳ ಅಗತ್ಯ ಇದೆ. ಅನೇಕ ಬಾರಿ ಹೋರಾಟ, ಮನವಿ ನೀಡಿದರು ಅಧಿಕಾರಿಗಳ ಸರಿಯಾಗಿ ಸ್ಪಂದಿಸದಿರುವುದು ಸರಿಯಲ್ಲ ಕೂಡಲೇ ಮೂಲಭೂತ




ಸೌಕರ್ಯಗಳನ್ನು ಒದಗಿಸಬೇಕು.ವಿದ್ಯಾರ್ಥಿಗಳ ಬೇಡಿಕೆಗಳಿಗೆ ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಸ್ಪಂದಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆ ಸ್ಥಳಕ್ಕೆ ಧಾವಿಸಿದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ ಹಾಗೂ ತಾಲ್ಲೂಕು ಅಧಿಕಾರಿ ಆಂಜನೇಯ ಹುಲ್ಲಾಳ ಅವರು ವಸತಿ ನಿಲಯ ವಾರ್ಡನ್ ಬಸವರಾಜ ದಲ್ಲಣ್ಣನವರ ಜೊತೆಗೆ ಪರಿಶೀಲನೆ ನಡೆಸಿ.ಪೋಲಿಸ್ ಅಧಿಕಾರಿಗಳ ಮಧ್ಯೆ ಪ್ರವೇಶದಿಂದ ವಿದ್ಯಾರ್ಥಿಗಳು ಎಸ್‌ಎಫ್‌ಐ ಮುಖಂಡರೊಂದಿಗೆ ಸಭೆ ನಡೆಸಿ ಹಾಸ್ಟೆಲ್ ಸ್ಥಳಾಂತರ ಪ್ರಕ್ರಿಯೆಯನ್ನು ಸಧ್ಯಕ್ಕೆ ಕೂಡಲೇ ಕೈ ಬಿಡುತ್ತೇವೆ ಎಂದರು.

ಮುಖಂಡರಾದ ನವೀನ್ ಬಡ್ಡಪ್ಪನವರ, ವಸಂತ ವಡ್ಡರ ಮಾತನಾಡಿದರು.ಈ ಸಂದರ್ಭದಲ್ಲಿ ಪೋಲಿಸ್ ಠಾಣೆಯ ಎಮ್ ಜಿ ದೊಡ್ಡಕಾರಿಗಿ,ದೇವರಾಜ,ವಿದ್ಯಾರ್ಥಿ ಮುಖಂಡರಾದ ಕೃಷ್ಣ ನಾಯಕ,ಅಭಿಶೇಕ ತಿಳುವಳ್ಳಿ. ರಘು ಕರಿಯಮ್ಮನವರ, ಈರಪ್ಪ ಹರಿಜನ್, ಕುಶಾಲ ಲಮಾಣಿ, ಮಾಂತೇಶ ಮಾಯಕೊಂಡ,ಮಂಜುನಾಥ ಹುಲಮನಿ,ಸುನಿಲ್ ಲಮಾಣಿ,ನಾಗೇಂದ್ರ ಎಮ್,ಕಿರಣ ಲಮಾಣಿ,ಅರುಣ ಕುಮಾರ ಸೇರಿದಂತೆ ಅನೇಕ ವಿದ್ಯಾರ್ಥಿಗಳು ಇದ್ದರು.

# ಮಾನವ ಸಂಪನ್ಮೂಲ ರಾಷ್ಟ್ರೀಯ ಆಸ್ತಿ : ಯು.ನಿಸಾರ್ ಅಹಮದ್

**ಹಾಸನ :** ಮಾನವ ಸಂಪನ್ಮೂಲ ರಾಷ್ಟ್ರೀಯ ಆಸ್ತಿಯಾಗಿಬೇಕು ಈ ನಿಟ್ಟಿನಲ್ಲಿ ಯಾವುದೇ ಮಗುವೂ ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಿ ಎಂದು ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು ಪ್ರಾಥಮಿಕ ಹಂತದಿಂದಲೆ ಮಕ್ಕಳ ಶೈಕ್ಷಣಿಕ ಚಟುವಟಿಕೆಗೆ ಆದ್ಯತೆ ನೀಡಬೇಕು ಆಗ ಮಾತ್ರ ಮುಂದಿನ ತರಗತಿಗಳಲ್ಲಿ ಉತ್ತಮ ಫಲಿತಾಂಶ ನಿರೀಕ್ಷಿಸಬಹುದು ಎಂದ ಅವರು ಒಂದನೇ ತರಗತಿಯಿಂದ ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡಿದರೆ 10 ನೇ ತರಗತಿಯ ಫಲಿತಾಂಶ ಸುಧಾರಣೆ ಆಗುತ್ತದೆ ಎಂದರು.

ಎಸ್ ಎಸ್ ಎಲ್ ಸಿ. ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಮಕ್ಕಳು ಪುನಃ ಪರೀಕ್ಷೆಗೆ ಹಾಜರಾಗಿದ್ದಾರಾ ಎಂಬುದರ ಬಗ್ಗೆ ಗಮನಹರಿಸಿ ಪರಿಶೀಲನೆ ಮಾಡಿ, ಎಷ್ಟು ಮಕ್ಕಳು ಪರೀಕ್ಷೆಗೆ ಹಾಜರಾಗಿರುವುದಿಲ್ಲ ಇಂತಹ ಮಕ್ಕಳ ಮುಂದಿನ ಭವಿಷ್ಯದ ಬಗ್ಗೆ ಚಿಂತನೆ ನಡೆಸಬೇಕು ಎಂದು ತಿಳಿಸಿದರು.

ಮಕ್ಕಳ ಶೈಕ್ಷಣಿಕ ಕಲಿಕೆಗೆ ಏನು ತೊಂದರೆ ಇದೆ ಎಂಬುದನ್ನು ಮನಗಾಣಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ಪತ್ತೆ ಹಚ್ಚುವಂತೆ ತಿಳಿಸಿದರು. 2011 ರ ಜನಗಣತಿಯ ಪ್ರಕಾರ ಭಾರತದಲ್ಲಿ ಶೇ.43.76ರಷ್ಟು ಮುಸ್ಲಿಂ ಸಮುದಾಯದವರು ಅನಕ್ಷರಸ್ಥರಿದ್ದಾರೆ ಎಂದು ತಿಳಿಸಿದರು.

ಜಿಲ್ಲಾ ಸಮಿತಿ ನೂತನ ಸದಸ್ಯರುಗಳು ಅಧಿಕಾರಿಗಳೊಂದಿಗೆ ಕೈಜೋಡಿಸಿ ಶಾಲೆಯಿಂದ ಹೊರಗುಳಿದ ಮಕ್ಕಳ ಪೋಷಕರ ಮನವೊಲಿಸಿ ಮಕ್ಕಳನ್ನು ಶಾಲೆಗೆ ಕಳುಹಿಸಲು ತಿಳುವಳಿಕೆ ನೀಡಿ ಎಂದು ಸೂಚಿಸಿದರಲ್ಲದೆ, ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡುವಂತೆ ತಿಳಿಸಿದರು.

ಜಿಲ್ಲೆಯಲ್ಲಿರುವ ಒಟ್ಟು 2691 ಅಂಗನವಾಡಿ ಕೇಂದ್ರಗಳಲ್ಲಿ ನಗರ ಪ್ರದೇಶಗಳಲ್ಲಿರುವ 136 ಅಲ್ಪಸಂಖ್ಯಾತರ ಅಂಗನವಾಡಿ ಕೇಂದ್ರಗಳ




ನಕ್ಷೆಯೊಂದಿಗೆ ಮಾಹಿತಿ ನೀಡಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ನಗರ ಪ್ರದೇಶಗಳಲ್ಲಿ ಸ್ವಂತ ಅಥವಾ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ ಏನಾದರೂ ಸಮಸ್ಯೆಗಳಿದ್ದಲ್ಲಿ ಪಟ್ಟಿ ಮಾಡಿ ನೀಡುವಂತೆ ತಿಳಿಸಿದರು.

ಬೀದಿ ಬದಿ ವ್ಯಾಪಾರಿಗಳಿಗೆ ಸಾಲ ಸೌಲಭ್ಯ ಒದಗಿಸಲಾಗುತ್ತದೆ. ಮೊದಲ ಬಾರಿಗೆ 10 ಸಾವಿರ ರೂ ನೀಡಲಾಗುತ್ತದೆ ಅದನ್ನು ತಿರುವಳಿ ಮಾಡಿದ ನಂತರ 20 ಸಾವಿರ ನೀಡಲಾಗುತ್ತದೆ ಅದನ್ನು ತಿರುವಳಿ ಮಾಡಿದರೆ 50 ಸಾವಿರ ಸಾಲ ಸೌಲಭ್ಯ ದೊರೆಯುತ್ತದೆ. ಇದನ್ನು ಬಳಸಿಕೊಂಡು ಬೀದಿ ಬದಿ ವ್ಯಾಪಾರಿಗಳು ತಮ್ಮ ವ್ಯಾಪಾರವನ್ನು ವೃದ್ಧಿಸಿಕೊಳ್ಳಬೇಕು ಎಂದು ತಿಳಿಸಿದರು.

ಕನಿಷ್ಠ 90 ದಿನ ಕೆಲಸ ಮಾಡಿದ್ದರೆ ಕಾರ್ಮಿಕ ಇಲಾಖೆಯಿಂದ ಕಾರ್ಡ್ ವಿತರಣೆ ಮಾಡಲಾಗುತ್ತದೆ ಕಾರ್ಮಿಕರಿಗೆ ವಿವಿಧ ರೀತಿಯ ಸೌಲಭ್ಯಗಳು ದೊರೆಯಲಿದೆ. ಇದರ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಅಲ್ಪ ಸಂಖ್ಯಾತರ ಮಾಹಿತಿ ಕೇಂದ್ರದ ಮೂಲಕ ಜನರಿಗೆ ಮಾಹಿತಿ ತಲುಪಿಸುವ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಹಕಾರ ಸಂಘಗಳಲ್ಲಿ ಸದಸ್ಯತ್ವ ಹೊಂದಿರುವವರಿಗೆ ಯಶಸ್ವಿನಿ ಯೋಜನೆಯಡಿ ಆರೋಗ್ಯ ಸೌಲಭ್ಯಗಳು ದೊರೆಯುತ್ತದೆ ಇದರ ಬಗ್ಗೆ ಜನರಿಗೆ ಅರಿವು ಮೂಡಿಸಲು ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್. ಪೂರ್ಣಿಮಾ ಅವರು ಮಾತನಾಡಿ ಉರ್ದು ಶಾಲೆಗಳಲ್ಲಿರುವ ಶಿಕ್ಷಕರ ಕೌಶಲ್ಯ ಅಭಿವೃದ್ಧಿಗಾಗಿ ಡಯಟ್ ನಲ್ಲಿ ತರಬೇತಿ ನೀಡಲು ಕ್ರಮವಹಿಸುವಂತೆ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಿಗೆ ತಿಳಿಸಿದರು.

ಆಯೋಗದ ಕಾರ್ಯದರ್ಶಿಯಾದ ಮಾಜುದ್ದೀನ್ ಖಾನ್ ಮಾತನಾಡಿ ಅಲ್ಪಸಂಖ್ಯಾತರ ಹಕ್ಕುಗಳ ಸಂರಕ್ಷಣೆ ಮಾಡುವುದು ಆಯೋಗದ ಮುಖ್ಯ ಉದ್ದೇಶ ಎಂದು ತಿಳಿಸಿದರು. ಭಾರತ ದೇಶ ಅಭಿವೃದ್ಧಿ ಹೊಂದುತ್ತಿರುವ ದೇಶಗಳ ಪಟ್ಟಿಯಲ್ಲಿದೆ ಇದನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಪರಿವರ್ತನೆ ಮಾಡಬೇಕಾಗಿದೆ ಈ ನಿಟ್ಟಿನಲ್ಲಿ ಸರ್ಕಾರಿ ನೌಕರರು ಜನರ ಬಳಿ ಹೋಗಿ ಸರ್ಕಾರಿ ಸೌಲಭ್ಯಗಳನ್ನು ಒದಗಿಸಲು ಮುತುವರ್ಜಿ ವಹಿಸಿಬೇಕಿದೆ ಎಂದು ತಿಳಿಸಿದರು.

ಆಯೋಗದ ಸದಸ್ಯರಾದ ಅಬ್ದುಲ್ ಖಾದೀರ್, ಆಪ್ತ ಕಾರ್ಯದರ್ಶಿ ಮುಜಿಬುಲ್ಲಾ ಜಫಾರಿ ಉಪಸ್ಥಿತರಿದ್ದರು. ಜಿಲ್ಲಾ ಮಟ್ಟದ ಸಮಿತಿಯ ನೂತನ ಸದಸ್ಯರುಗಳಾದ ಮೊಹಮ್ಮದ್ ಜಾಫರ್, ರೇಮಂಡ್, ಎನ್. ನಾಗಸೇನ್, ಯಶೋದ, ಜಮೀಲ್ ಅಹಮದ್ ಷರೀಫ್, ಮೊಹಮ್ಮದ್ ಗೌಸ್, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಕೆಸೆಟ್‌ನಲ್ಲಿ ವಸುನಂದನ್‌ಗೆ 953ನೇ ರ್‍ಯಾಂಕ್



**ಹಾಸನ:** ಕೆಸೆಟ್ ಪರೀಕ್ಷೆಯಲ್ಲಿ ನಗರದ ಸಾಧನಾ ಪಿಯು ಕಾಲೇಜಿನ ವಿದ್ಯಾರ್ಥಿ ಎಚ್.ಎಚ್. ವಸುನಂದನ್ 953 ನೇ ರ್‍ಯಾಂಕ್ ಪಡೆದಿದ್ದಾರೆ.

ಸಾವಿರದೊಳಗಿನ ರ್‍ಯಾಂಕ್ ಪಡೆಯುವಲ್ಲಿ ಈ ಕಾಲೇಜು 2ನೇ ವರ್ಷಕ್ಕೆ ಕಾಲಿಟ್ಟಿದ್ದು, ಉಳಿದಂತೆ ಈ ಬಾರಿ ಪರೀಕ್ಷೆಗೆ ಹಾಜರಾಗಿದ್ದ ಎ.ಶ್ರೀರಕ್ಷಾ 3668 ಮತ್ತು ಎನ್.ಮೇಘನಾ 9363 ನೇ ರ್‍ಯಾಂಕ್ ಪಡೆದಿದ್ದರೆ. ಕೇವಲ 13 ವಿದ್ಯಾರ್ಥಿಗಳಿಂದ ಆರಂಭವಾದ ಈ ಸಂಸ್ಥೆಯಲ್ಲಿ ಸಧ್ಯ 150 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ.

## ಅರ್ಜಿ ಆಹ್ವಾನ

**ಹಾಸನ :** ತೋಟಗಾರಿಕೆ ಇಲಾಖೆಯ ವತಿಯಿಂದ ಅರಸೀಕೆರೆ ತಾಲ್ಲೂಕಿನಲ್ಲಿ ತೋಟಗಾರಿಕೆ ಬೆಳೆ ಬೆಳೆಯುವಂತಹ ರೈತಬಾಂಧವರಿಂದ 2025–26ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ರೈತರು ಮೇ.29 ರಿಂದ ಜೂ.10 ರೊಳಗಾಗಿ ಈ ಕಚೇರಿಯಿಂದ ಅರ್ಜಿಯನ್ನು ಪಡೆದು ಸಲ್ಲಿಸಬಹುದಾಗಿರುತ್ತದೆ.ಪ್ರದೇಶ ವಿಸ್ತರಣೆ ( ಬಾಳೆ, ದಾಳಿಂಬೆ, ಪಪ್ಪಾಯ, ಡ್ರಾಗನ್ ಫ್ರೂಟ್ ಹಾಗೂ ಇತರೆ) ಬೆಳೆಗಳಿಗೆ ಸಹಾಯಧನ, ಕೃಷಿ ಹೊಂಡ ನಿರ್ಮಾಣ, ಪಾಲಿಮನೆ ನೆರಳು ಪರದೆ ಘಟಕಗಳಿಗೆ, ಪ್ಲಾಸ್ಟಿಕ್ ಹೊದಿಕೆಗಳಿಗೆ, ಪಕ್ಷಿ ನಿರೋಧಕ ಬಲೆ, ಸಮಗ್ರ ಕೀಟ/ಪೋಷಕಾಂಶಗಳ ನಿರ್ವಹಣೆ, ಸೆನ್ಸಾರ್ ಆಧಾರಿತ ಗೊಬ್ಬರಗಳನ್ನು ನೀಡುವುದು, ತರಕಾರಿ ಬೆಳೆಗಳಲ್ಲಿ ಆಧಾರಗಳ ಬಳಕೆ, ವರ್ಮಿ ಕಾಂಪೋಸ್ಟ್ ಘಟಕ ನಿರ್ಮಾಣ ಸಹಾಯ ಧನ, ಟ್ರಾಕ್ಟರ್ 20 ಠಿಣಂ ್ಞಠಿ ಗಳಿಗಿಂತ ಕಡಿಮೆ, ಈಚಿಡಿಟ ಉಚಿಣಜ ಕಚಿಛಿಞಛಿಂಣಜ, ಈಡಿಣುಣ/ಃಣಟಿಛಿ ಛಿಂತಜಡಿ ಗಳಿಗೆ ಸಹಾಯಧನ, ತೆಂಗು ಶೇಖರಣಾ ಘಟಕಗಳಿಗೆ ಸಹಾಯಧನ, ತೋಟಗಾರಿಕೆಯಲ್ಲಿ ಯಂತ್ರೋಪಕರಣಗಳಿಗೆ ಸಹಾಯಧನ, ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಘಟಕ ಅಳವಡಿಸಿದ ರೈತರಿಗೆ ಸಹಾಯಧನ ನೀಡುವ ಯೋಜನೆಯಿರುತ್ತದೆ. ಆಸಕ್ತ ರೈತರು ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ತೋಟಗಾರಿಕೆ ಕಚೇರಿಯನ್ನು ಸಂಪರ್ಕಿಸಬಹುದು.

## ವಿಕಸಿತ ಕೃಷಿ ಸಂಕಲ್ಪ ಅಭಿಯಾನ ವಿಜ್ಞಾನಿಗಳ ನಡೆ ರೈತರ ಕಡೆ

**ಶಿವಮೊಗ್ಗ:** ಕೃಷಿ ಸಂಶೋಧನೆ ಮತ್ತು ಶಿಕ್ಷಣ ಇಲಾಖೆ, ಭಾರತೀಯ ಕೃಷಿ ಸಂಶೋಧನಾ ಮಂಡಳಿ, ಭಾರತ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದ ಕೃಷಿ ಮತ್ತು ರೈತರ ಕಲ್ಯಾಣ ಇಲಾಖೆ ಇವರ ಸಹಯೋಗದೊಂದಿಗೆ ಮೇ 29 ರಿಂದ ಜೂನ್ 12 ರವರೆಗೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ವನ್ನು ರಾಷ್ಟ್ರವ್ಯಾಪಿ ಅಭಿಯಾನವನ್ನು ಪ್ರಾರಂಭಿಸಲಾಗುತ್ತಿದೆ.

ಈ ಅಭಿಯಾನದ ಉದ್ಘಾಟನೆಯನ್ನು ಮೇ 29 ರಂದು ಶಿವಮೊಗ್ಗ ತಾಲ್ಲೂಕಿನ ಹೊಳಲೂರು ಗ್ರಾಮದ ಅಂಬೇಡ್ಕರ್ ಭವನದಲ್ಲಿ ಬೆಳಿಗ್ಗೆ 10.30 ಕ್ಕೆ ಆಯೋಜಿಸಲಾಗಿದೆ.

ಈ ಅಭಿಯಾನದ ಅಡಿಯಲ್ಲಿ ಕೃಷಿ ವಿಜ್ಞಾನ ಕೇಂದ್ರ, ಶಿವಮೊಗ್ಗವು ಮೇ 29 ರಿಂದ ಜೂನ್ 12 ರವರೆಗೆ ಜಿಲ್ಲೆಯಾದ್ಯಂತ 15 ದಿನಗಳವರೆಗೆ ವಿವಿಧ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಕಾರ್ಯಕ್ರಮವನ್ನು ಕೃಷಿ ಮುಂಗಾರು ಹಂಗಾಮಿನಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ನಮ್ಮ ದೇಶದ ಶ್ರಮಜೀವಿ

ರೈತ ಬಾಂಧವರಿಗಾಗಿ ಈ ಮುಂಗಾರು ಹಂಗಾಮಿನಲ್ಲಿ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ, ಕೃಷಿ ಇಲಾಖೆ ಮತ್ತು ಕೃಷಿ ಸಂಬಂಧಿತ ಅಭಿವೃದ್ದಿ ಇಲಾಖೆಗಳ ಸಹಯೋಗದೊಂದಿಗೆ ಮುಂಗಾರು ಪೂರ್ವ ಕೃಷಿ ಚಟುವಟಿಕೆಗಳ ಕುರಿತು ಮಾಹಿತಿ, ಸಮಗ್ರ ಕೃಷಿ ಪದ್ಧತಿ, ಜಾನುವಾರು ಸಾಕಾಣಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ಜೇನು ಸಾಕಾಣಿಕೆ ಇತ್ಯಾದಿಗಳನ್ನು ಒಳಗೊಂಡಂತೆ ರೈತರಿಗೆ ಅರಿವು ಮೂಡಿಸುವುದು, ಮಣ್ಣಿನ ಆರೋಗ್ಯ ಕಾರ್ಡ್ ಆಧಾರಿತ ಸಮತೋಲಿತ ರಸಗೊಬ್ಬರಗಳ ಬಳಕೆ, ಬೆಳೆಗಳ ಆಯ್ಕೆ, ಸುಧಾರಿತ ತಳಿಗಳು, ಬೀಜೋಪಚಾರ ಮತ್ತು ಕೀಟ ಹಾಗೂ ರೋಗಗಳ ನಿರ್ವಹಣೆ ಕುರಿತು ಮಾಹಿತಿ ಕಾರ್ಯಾಗಾರ ಅಯೋಜಿಸಲಾಗುವುದು.

ಈ ಅಭಿಯಾನದಲ್ಲಿ ಕೃಷಿ ಬೆಳೆಗಳ ಸಮಸ್ಯೆಗಳಿಗೆ ಸಂಬಂಧಪಟ್ಟಂತೆ ರೈತ–ವಿಜ್ಞಾನಿಗಳ ನೇರ ಸಂವಾದವನ್ನು ಕೂಡ ಆಯೋಜಿಸಲಾಗುತ್ತಿದ್ದು, ಶಿವಮೊಗ್ಗದ ಕೃಷಿ ವಿಜ್ಞಾನ ಕೇಂದ್ರ, ಸಂಶೋಧನಾ ಕೇಂದ್ರಗಳು, ಐಸಿಎಆರ್ ಕೇಂದ್ರೀಯ ಸಂಸ್ಥೆಗಳ ವಿಜ್ಞಾನಿಗಳು ನೇರವಾಗಿ ಭಾಗವಹಿಸುವರು. ಜಿಲ್ಲೆಯ ಎಲ್ಲಾ ಹೋಬಳಿಗಳ ರೈತ ಸಂಪರ್ಕ ಕೇಂದ್ರದ ಮೂಲಕ ಈ ಅಭಿಯಾನದ ತಂಡ ಭೇಟಿ ನೀಡುವುದನ್ನು ಆಯಾ ಗ್ರಾಮ ವ್ಯಾಪ್ತಿಯ ರೈತರಿಗೆ ಮುಂಚಿತವಾಗಿ ಮಾಹಿತಿ ನೀಡಲಾಗುವುದು. ತಂಡ ಗ್ರಾಮಕ್ಕೆ ಬಂದಾಗ ಕಾರ್ಯಕ್ರಮದಲ್ಲಿ ಹೆಚ್ಚಿನ ರೈತರು ಭಾಗವಹಿಸಿ ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಮುಂದಾಗಬೇಕೆಂದು ಐಸಿಎಆರ್–ಕೆವಿಕೆ ಹಿರಿಯ ವಿಜ್ಞಾನಿ ಮತ್ತು ಕೆವಿಕೆ ಮುಖ್ಯಸ್ಥರಾದ ಡಾ.ಸುನಿಲ್ ಸಿ ತಿಳಿಸಿದ್ದಾರೆ.

## ಕೋಣಂದೂರು ಸಮುದಾಯ ಆರೋಗ್ಯ ಕೇಂದ್ರ ಉದ್ಘಾಟನೆ

**ಶಿವಮೊಗ್ಗ:** ಜಿಲ್ಲಾಡಳಿತ, ಶಿವಮೊಗ್ಗ ಜಿಲ್ಲಾ ಪಂಚಾಯತ್, ತೀರ್ಥಹಳ್ಳಿ ತಾಲೂಕು ಪಂಚಾಯತ್, ಕೋಣಂದೂರು ಗ್ರಾಮ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಶಿವಮೊಗ್ಗ ಇವರುಗಳ ಸಂಯುಕ್ತಾಶ್ರಯದಲ್ಲಿ ಮೇ 28 ರಂದು ಬೆಳಗ್ಗೆ 11.00ಕ್ಕೆ ಕೋಣಂದೂರಿನಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರದ ಉದ್ಘಾಟನಾ ಸಮಾರಂಭವನ್ನು ಏರ್ಪಡಿಸಲಾಗಿದೆ.

ಸಮುದಾಯ ಆರೋಗ್ಯ ಕೇಂದ್ರದ ಉದ್ಘಾಟನೆಯನ್ನು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪರ ಘನ ಉಪಸ್ಥಿತಿಯಲ್ಲಿ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವ ದಿನೇಶ್ ಗುಂಡೂರಾವ್‌ರವರು ನೇರವೇರಿಸಲಿರುವರು. ತೀರ್ಥಹಳ್ಳಿ ಕ್ಷೇತ್ರ ವಿಧಾನಸಭೆ ಶಾಸಕ ಆರಗ ಜ್ಞಾನೇಂದ್ರರವರು ಅಧ್ಯಕ್ಷತೆ ವಹಿಸಲಿದ್ದಾರೆ. ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಭದ್ರಾವತಿ ಕ್ಷೇತ್ರ ಶಾಸಕ ಬಿ.ಕೆ. ಸಂಗಮೇಶ್ವರ್ ಮತ್ತು ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕೆ ನಿಗಮದ ಅಧ್ಯಕ್ಷ ಹಾಗೂ ಸಾಗರ ಕ್ಷೇತ್ರ ಶಾಸಕ ಬಿ.ಕೆ. ಗೋಪಾಲಕೃಷ್ಣ ಬೇಳೂರು ಇವರುಗಳು ವಿಶೇಷ ಆಹ್ವಾನಿತರು.

ಕಾರ್ಯಕ್ರಮದಲ್ಲಿ ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ ಶಾಸಕರು, ಪಾಲಿಕೆ ಮಹಾಪೌರರು, ಜನಪ್ರತಿನಿಧಿಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರು, ಜಿಲ್ಲೆಯ ಎಲ್ಲಾ ಗೌರವಾನ್ವಿತ ಜನಪ್ರತಿನಿಧಿಗಳು, ಸರ್ಕಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗ ಮತ್ತು ವಿವಿಧ ಸಂಘಟನೆಗಳ ಮುಖಂಡರು, ಪದಾಧಿಕಾರಿಗಳು ಹಾಗೂ ಸದಸ್ಯರು, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿ.ಪಂ ಸಿಇಓ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ವರ್ಗ ಮತ್ತು ಇನ್ನಿತರ ಗಣ್ಯರು ಹಾಗೂ ಸ್ಥಳೀಯ ಆಡಳಿತ ಅಧಿಕಾರಿ/ ಸಿಬ್ಬಂದಿಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

## ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಹಾಸನ :** ಹಾಸನದ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2025–26ನೇ ಸಾಲಿನ ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಕ್ಕಾಗಿ ಮೆರಿಟ್ ಹಾಗೂ ರೋಸ್ಟರ್ ಮುಖಾಂತರ ಮೊದಲು ಬಂದವರಿಗೆ ಮೊದಲ ಆದ್ಯತೆ ಮೂಲಕ ಎಸ್.ಎಸ್.ಎಲ್.ಸಿ. / ತತ್ಸಮಾನ ವಿದ್ಯಾರ್ಹತೆ ಪಡೆದ ಮಹಿಳಾ ಅಭ್ಯರ್ಥಿಗಳಿಗಾಗಿ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್, ಎ.ಡಿ.ಎಫ್.ಟಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ಸ್ ಇಂಜಿನಿಯರಿಂಗ್, ಲೈಬ್ರರಿ ಅಂಡ್ ಇನ್ ಫರ್ಮೇಷನ್ ಕೋರ್ಸುಗಳ ಪ್ರವೇಶಾತಿಯು ಪ್ರಾರಂಭಗೊಂಡಿದ್ದು, ಮೇ.5 ರಿಂದ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಲು ಸೂಚಿಸಲಾಗಿದೆ. ಎಲ್ಲಾ ಸೀಟುಗಳು ಭರ್ತಿಯಾಗುವವರೆಗೂ ಅರ್ಜಿಗಳನ್ನು ಸ್ವೀಕರಿಸಲಾಗುವುದು.ಸೀಟುಗಳ ಲಭ್ಯತೆ ಹಾಗೂ ಪ್ರವೇಶ ಸಂಬಂಧಿ ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಚಾರ್ಯರನ್ನು ಕಚೇರಿಯ ಸಮಯದಲ್ಲಿ ಸಂಪರ್ಕಿಸಲು ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರು ತಿಳಿಸಿದ್ದಾರೆ.

## ಇಂದು ಶಾಲಾ ಪ್ರಾರಂಭೋತ್ಸವ

# ಶಾಲೆಗಳಲ್ಲಿನ್ನು ಮಕ್ಕಳ ಕಲರವ: ಸಂಭ್ರಮದ ಸ್ವಾಗತಕ್ಕೆ ಸಕಲ ಸಿದ್ಧತೆ







**ಚಿತ್ರದುರ್ಗ:** ಬೇಸಿಗೆ ರಜೆ ಮುಗಿದು ಶಾಲೆಗಳಿಗೆ ಚಿಣ್ಣರು ಆಗಮಿಸಲು ಕ್ಷಣಗಣನೆ ಆರಂಭವಾಗಿದ್ದು, ಮೇ 29 ರಂದು ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳನ್ನು ಸ್ವಾಗತಿಸಲು ಶಿಕ್ಷಣ ಇಲಾಖೆ ಸಕಲ ಸಿದ್ಧತೆ ಕೈಗೊಂಡಿದೆ.

ಪ್ರತಿ ವರ್ಷದಂತೆ ಶೈಕ್ಷಣಿಕ ವರ್ಷದ ಆರಂಭದಲ್ಲಿ ವಿದ್ಯಾರ್ಥಿಗಳನ್ನು ವಿನೂತನವಾಗಿ ಸ್ವಾಗತಿಸುವ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮಕ್ಕೆ ಜಿಲ್ಲೆಯ ಶಾಲೆಗಳು, ಶಿಕ್ಷಕರು ಸಿದ್ಧಗೊಂಡಿದ್ದಾರೆ.

ಶಾಲಾ ಶಿಕ್ಷಣ ಇಲಾಖೆಯ ಸೂಚನೆಯಂತೆ ಗುರುವಾರದಿಂದ ಶಾಲೆಗಳು ಬಾಗಿಲು ತೆರೆಯುವುದರಿಂದ ಬುಧವಾರ ಶಾಲೆಗಳಲ್ಲಿ ಸ್ವಚ್ಛತಾ ಕಾರ್ಯಗಳು ಭರದಿಂದ ಸಾಗಿದವು. ಸಿಬ್ಬಂದಿ ಜತೆ ಕೈ ಜೋಡಿಸಿದ ಶಿಕ್ಷಕರು ಶಾಲಾ ಆವರಣ, ತರಗತಿ ಕೋಣೆ, ಅಡುಗೆ ಕೋಣೆ, ಶೌಚಾಲಯ ಹಾಗೂ ನೀರಿನ ಸಿಂಟೆಕ್ಸ್, ಅಡುಗೆ ಪರಿಕರ ಸ್ವಚ್ಛತೆ ಹಾಗೂ ಶಾಲೆಗಳ ಮೇಲ್ಛಾವಣೆ ಮೇಲಿರುವ ಕಸ ತೆಗೆದು ಸ್ವಚ್ಛತೆ ಕಾರ್ಯ ನಡೆಸಿದರು.

ಜಿಲ್ಲೆಯ ವಿವಿಧೆಡೆಯ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ಶಾಲಾ ಪ್ರಾರಂಭಕ್ಕೆ ಸಕಲ ಸಿದ್ಧತೆಗಳು ನಡೆದುವು. ಗ್ರಾಮೀಣ ಭಾಗದಲ್ಲಿ ಮಕ್ಕಳ ಜತೆ ಗ್ರಾಮಗಳ ಓಣಿ ಓಣಿಗಳಲ್ಲಿ ಸಂಚರಿಸಿದ ಶಿಕ್ಷಕರು ಶಾಲಾ ಪ್ರಾರಂಭ ಹಾಗೂ ವಿಶೇಷ ದಾಖಲಾತಿ ಆಂದೋಲನ ನಡೆಸಿದರು. ಶಾಲಾ ಕಟ್ಟಡಗಳಿಗೆ ತಳಿರು ತೋರಣ, ರಂಗೋಲಿ ಬಿಡಿಸಿ ಮಕ್ಕಳಿಗೆ ಸಂಭ್ರಮದ ಸ್ವಾಗತದ ಮೂಲಕ ಶಾಲಾ ಪ್ರಾರಂಭೋತ್ಸವದ ಮೊದಲ ದಿನದಿಂದಲೇ ಬಿಸಿ ಊಟ ಹಾಗೂ ಮೊಟ್ಟೆ, ಬಾಳೆಹಣ್ಣು, ರಾಗಿ ಮಾಲ್ಟ್ ವಿತರಿಸಲು ಕ್ರಮವಹಿಸಲಾಗಿದ್ದು, 2025–26ನೇ ಸಾಲಿನಿಂದ ರಾಗಿ ಮಾಲ್ಟ್ ಅನ್ನು ವಾರದ ಐದು ದಿನಗಳ ಕಾಲ ಮಕ್ಕಳಿಗೆ ನೀಡಲು ಶಾಲಾ ಶಿಕ್ಷಣ ಇಲಾಖೆ ಕ್ರಮ ಕೈಗೊಂಡಿದೆ. ಅಲ್ಲದೆ ಈಗಾಗಲೆ ಅಗತ್ಯ ಪಠ್ಯಪುಸ್ತಕಗಳನ್ನು ಶಾಲೆಗಳಿಗೆ ಸರಬರಾಜು ಮಾಡಲು ಸರ್ಕಾರ ಸಾಕಷ್ಟು ಮುಂಚಿತವಾಗಿಯೇ ಕ್ರಮ ಕೈಗೊಂಡಿದೆ.

ಕಿರಿಯ ಪ್ರಾಥಮಿಕ ಶಾಲೆ, ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಗಳು ಸೇರಿ ಜಿಲ್ಲೆಯಲ್ಲಿ 1,751 ಸರ್ಕಾರಿ ಶಾಲೆಗಳು, 275 ಅನುದಾನಿತ ಶಾಲೆಗಳು ಹಾಗೂ 390 ಅನುದಾನ ರಹಿತ ಶಾಲೆಗಳು ಇವೆ. 2024–25ನೇ ಸಾಲಿನಲ್ಲಿ ಚಳ್ಳಕೆರೆ ತಾಲ್ಲೂಕಿನಲ್ಲಿ 27,920 ವಿದ್ಯಾರ್ಥಿಗಳು, ಚಿತ್ರದುರ್ಗ ತಾಲ್ಲೂಕು 24,267 ವಿದ್ಯಾರ್ಥಿಗಳು, ಹಿರಿಯೂರು ತಾಲ್ಲೂಕಿನಲ್ಲಿ 18,877 ವಿದ್ಯಾರ್ಥಿಗಳು, ಹೊಳಲ್ಕೆರೆ ತಾಲ್ಲೂಕಿನಲ್ಲಿ 11,750 ವಿದ್ಯಾರ್ಥಿಗಳು, ಹೊಸದುರ್ಗ ತಾಲ್ಲೂಕಿನಲ್ಲಿ 13,354 ವಿದ್ಯಾರ್ಥಿಗಳು ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 17,663 ವಿದ್ಯಾರ್ಥಿಗಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 1,13,831 ವಿದ್ಯಾರ್ಥಿಗಳು ನೋಂದಣಿಯಾಗಿದ್ದರು.

ಪ್ರಸಕ್ತ ಶೈಕ್ಷಣಿಕ ಸಾಲಿನ ಶಾಲಾ ಪ್ರಾರಂಭೋತ್ಸವಕ್ಕೆ ಸಕಲ ಸಿದ್ಧತೆ ಕೈಗೊಳ್ಳಲಾಗಿದ್ದು, ಗುರುವಾರದಿಂದ ಶಾಲೆಗಳು ವಿದ್ಯುಕ್ತವಾಗಿ ಪ್ರಾರಂಭವಾಗುತ್ತಿವೆ. ಈಗಾಗಲೇ ಶೇ.100ರಷ್ಟು ಪಠ್ಯಪುಸ್ತಕಗಳನ್ನು ಶಾಲೆಗಳಿಗೆ ತಲುಪಿಸಲಾಗಿದೆ. ಮೇ 27 ರಿಂದ ವಿಶೇಷ ದಾಖಲಾತಿ ಆಂದೋಲನ ಪ್ರಾರಂಭವಾಗಿದ್ದು, ಮೇ31 ರವರೆಗೆ ವಿಶೇಷವಾಗಿ ಎಲ್ಲ ಗ್ರಾಮಗಳಲ್ಲಿಯೂ ದಾಖಲಾತಿ ಆಂದೋಲನ ನಡೆಸಲಾಗುವುದು. ಜೂನ್ 02 ರಿಂದ 30 ರವರೆಗೆ ಸಾಮಾನ್ಯ ದಾಖಲಾತಿ ಆಂದೋಲನ ಅನುಷ್ಠಾನ ಮಾಡಲಾಗುವುದು. ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಮಿಂಚಿನ ಸಂಚಾರದ ಆಂದೋಲನ ಹಮ್ಮಿಕೊಳ್ಳಲಿದ್ದಾರೆ. ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಿಸಲು ಶಾಲಾ ಪ್ರಾರಂಭದ ದಿನದಿಂದಲೇ ವಿಶೇಷ ಕ್ರಿಯಾ ಯೋಜನೆ ರೂಪಿಸಿಕೊಂಡು ವಿಶೇಷ ತರಗತಿಗಳನ್ನು ನಡೆಸಲಾಗುವುದು ಎನ್ನುತ್ತಾರೆ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್ ಅವರು.ಮೆದೇಹಳ್ಳಿ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವ ಉದ್ಘಾಟನಾ ಕಾರ್ಯಕ್ರಮ: ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ 2025–26ನೇ ಸಾಲಿನ ಚಿತ್ರದುರ್ಗ ತಾಲ್ಲೂಕು ಮಟ್ಟದ ಶಾಲಾ ಪ್ರಾರಂಭೋತ್ಸವ ಉದ್ಘಾಟನಾ ಕಾರ್ಯಕ್ರಮ ಇದೇ ಮೇ 29 ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ತಾಲ್ಲೂಕು ಮೆದೇಹಳ್ಳಿ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಶಾಲಾ ಪ್ರಾರಂಭೋತ್ಸವ ಉದ್ಘಾಟಿಸುವರು. ಮೆದೇಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕೆ.ಎನ್.ಕಾವ್ಯ ವಿಜಯಕುಮಾರ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಎಂ.ಆರ್. ಮಂಜುನಾಥ್, ಎಂ.ನಾಸಿರುದ್ದೀನ್, ಬಿಇಒ ಎಸ್.ನಾಗಭೂಷಣ್, ಬಿಆರ್‌ಸಿ ಈ.ಸಂಪತ್ ಕುಮಾರ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಹೆಚ್. ಗುರುರಾಜ್ ಸೇರಿದಂತೆ ಮೆದೇಹಳ್ಳಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರು, ಸದಸ್ಯರು, ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಭಾಗವಹಿಸುವರು.

# ಹೊರಗುತ್ತಿಗೆ ನೌಕರರನ್ನು ಖಾಯಂಗೊಳಿಸಲು ಆಗ್ರಹಿಸಿ ಪೌರನೌಕರರ ಸಂಘ ಮುಷ್ಕರಕ್ಕೆ ಕರೆ




**ಚಿಕ್ಕಮಗಳೂರು:** ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರ ಬೇಡಿಕೆಗಳನ್ನು ಸರ್ಕಾರ ಈಡೇರಿಸದಿರುವುದರಿಂದ ಮೇ.27 ರಂದು ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಪೌರ ನೌಕರರ ಸಂಘದ ಜಿಲ್ಲಾಧ್ಯಕ್ಷ ಎನ್.ಅಣ್ಣಯ್ಯ ತಿಳಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಬೇಡಿಕೆ ಈಡೇರುವ ತನಕ ಹಂತಹಂತವಾಗಿ ಹೋರಾಟ ರೂಪಿಸಲಾಗುವುದು, ಬೇಡಿಕೆ ಈಡೇರಿಸುವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲು ದಿನಾಂಕ ನಿಗದಿಪಡಿಸಲಾಗುವುದು ಎಂದು ಭರವಸೆ ನೀಡಲಾಗಿತ್ತು. ಇದುವರೆಗೂ ರಾಜ್ಯಸಂಘದ ಪದಾಧಿಕಾರಿಗಳೊಂದಿಗೆ ಚರ್ಚಿಸಲು ಸಭೆಯನ್ನು ಕರೆದಿಲ್ಲವೆಂದು ಆರೋಪಿಸಿದರು.

ನೌಕರರ ನ್ಯಾಯಯುತ ಬೇಡಿಕೆ ಈಡೇರಿಸಲು ಒತ್ತಾಯಿಸಿ 45 ದಿನಗಳ ಅನಿರ್ದಿಷ್ಟಕಾಲ ಮುಷ್ಕರ ನಡೆಸುವ ಬಗ್ಗೆ ನೋಟಿಸ್ ನೀಡಿದ್ದು, ರಾಮನಗರದಲ್ಲಿ ರಾಜ್ಯ ಪರಿಷತ್ತಿನ ಸರ್ವಸದಸ್ಯರ ಸಭೆ ನಡೆಸಿದ್ದು, ಮೇ.27 ರಿಂದ ಮುಷ್ಕರ ನಡೆಸಲಾಗುತ್ತಿದೆ. ಇಂದು ಸಾಂಕೇತಿಕವಾಗಿ ರಾಜ್ಯಾದ್ಯಂತ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಲೇಖನಿ ಸ್ಥಗಿತಗೊಳಿಸಿ ಮುಷ್ಕರ ನಡೆಸಲಾಗುತ್ತಿದೆ ಎಂದು ಹೇಳಿದರು.

ಕರ್ನಾಟಕ ನಾಗರಿಕ ನಿಯಮ ಅಧಿನಿಯಮ 1978ರನ್ನು ಕರ್ನಾಟಕ ಪೌರಸೇವಾ ನೌಕರರಿಗೆ ಅನ್ವಯಿಸುವುದು ಹಾಗೂ ಪಂಚಾಯತ್ ರಾಜ್ ಇಲಾಖೆ ನೌಕರರನ್ನು ರಾಜ್ಯ ಸರ್ಕಾರಿ ನೌಕರ–ರೆಂದು ಪರಿಗಣಿಸಿರುವ ಮಾದರಿಯಲ್ಲಿಯೇ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ನೌಕರರನ್ನು ಸರ್ಕಾರಿ ನೌಕರೆಂದು ಪರಿಗಣಿಸಬೇಕು. ಸರ್ಕಾರಿ ನೌಕರರು ಪಡೆಯುವ ಸೌಲಭ್ಯಗಳನ್ನು ನಮಗೂ ವಿಸ್ತರಿಸಲು ಶಾಸನ ಸಭೆಯಲ್ಲಿ ಕಾಯ್ದೆ ರೂಪಿಸಬೇಕೆಂದು ಆಗ್ರಹಿಸಿದರು.

ಹೊರಗುತ್ತಿಗೆ ಆಧಾರದ ಮೇಲೆ ನೀರುಸರಬರಾಜು ಸಹಾಯಕರು, ವಾಹನ ಚಾಲಕರು, ಬೀದಿದೀಪ ಸಹಾಯಕರು ಲೋಡರ್ಸ್, ಪಾರ್ಕ್, ಗಾರ್ಡನರ್ ಕಾವಲುಗಾರ, ಸ್ಯಾನಿಟರಿ ಸೂಪರ್‌ವೈಸರ್ ( **5ನೇ ಪುಟಕ್ಕೆ**)

# ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ–ಅವಧಿ ವಿಸ್ತರಣೆ

**ಚಿಕ್ಕಮಗಳೂರು, ಮೇ 26:** ಸರ್ಕಾರದ ಆದೇಶ ಕಳೆದ ವರ್ಷದ ನವೆಂಬರ್ 12 ರಂದು ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪ ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು (ಎಂಪೆರಿಕಲ್ ಡಾಟಾ) ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬಗ್ಗೆ ಸೂಕ್ತ ಶಿಫಾರಸ್ಸಿನೊಂದಿಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ.ಹೆಚ್. ಎನ್.ನಾಗಮೋಹನ್‌ದಾಸ್ ಇವರ ಅಧ್ಯಕ್ಷತೆಯಲ್ಲಿ ಈಗಾಗಲೇ ಏಕ ಸದಸ್ಯ ಆಯೋಗವನ್ನು ರಚಿಸಲಾಗಿದೆ.

ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (ಎಂಪೆರಿಕಲ್ ಡಾಟಾ) ಸಂಗ್ರಹಿಸಲು ಹೊಸದಾದ ಸಮೀಕ್ಷೆಯನ್ನು ನಡೆಸಲು ಕಳೆದ ಮಾರ್ಚ್ 27ರ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾದ ಹಿನ್ನೆಲೆಯಲ್ಲಿ ಮೇ 5ರಿಂದ ಗಣ–ತಿದಾರರು ಮನೆ–ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವುದರ ಮೂಲಕ ರಾಜ್ಯಾದ್ಯಂತ ಈಗಾಗಲೇ ಸಮೀಕ್ಷೆ ನಡೆಯುತ್ತಿದೆ.

ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ಇನ್ನೂ ಪ್ರಗತಿಯಾಗಬೇಕಾಗಿರುವುದರಿಂದ, ಮಳೆ, ಹವಾಮಾನ ವೈಪರೀತ್ಯ ಕಾರಣಗಳಿಂದಾಗಿ ಅನೇಕ ಪರಿಶಿಷ್ಟ ಜಾತಿ ಸಂಘಗಳಿಂದ ಮತ್ತು ಬೆಂಗಳೂರು ಮಹಾನಗರ ಪಾಲಿಕೆಯ ಕೋರಿಕೆ ಮೇರೆಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲು ಅನುವಾಗುವಂತೆ ದಿನಾಂಕವನ್ನು ವಿಸ್ತರಿಸಲು ನಿರ್ಣಯಿಸಲಾಗಿದೆ.

ಮನೆ–ಮನೆ ಭೇಟಿ ನೀಡುವ ಸಮೀಕ್ಷೆಯನ್ನು ಮೇ 26 ರಿಂದ 29 ರವರೆಗೆ ವಿಸ್ತರಿಸಲಾಗಿದೆ. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ಮೂರು ದಿನಗಳ ಕಾಲ ಅಂದರೆ ಮೇ 30, 31 ಹಾಗೂ ಜೂನ್ 1ರವರೆಗೆ ಮರು ನಿಗದಿಪಡಿಸಲಾಗಿದೆ ಮತ್ತು ಆನ್‌ಲೈನ್ ಮೂಲಕ ಸ್ವಯಂಘೋಷಣೆ– ಜೂನ್ 1 ರವರೆಗೆ ಮುಂದುವರೆಯಲಿದೆ ಎಂದು ಏಕ ಸದಸ್ಯ ಆಯೋಗದ ಕಾರ್ಯದರ್ಶಿಗಳು ತಿಳಿಸಿರುವುದಾಗಿ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ದೇವರ ಪೂಜೆಗೆ ಬಡತನ ಇರಬಾರದು'



**ಚಿಕ್ಕಮಗಳೂರು:** ದೇವರು ನಮ್ಮ ನಂಬಿಕೆ. ಪೂಜೆ ನಮ್ಮ ಆಚರಣೆ. ಆಚರಣೆಗಳ ಮೂಲಕ ನಂಬಿಕೆಗಳನ್ನುಬಲಗೊಳಿಸಿಕೊಳ್ಳಬೇಕಾಗಿರುವುದರಿಂದ ನಮ್ಮಲ್ಲಿ ದೇವರ ಪೂಜೆಗೆ ಬಡತನವಿಲ್ಲ ಎಂದು ನಿವೃತ್ತ ಶಿಕ್ಷಕ ಕೆಂಪನಹಳ್ಳಿ ಮುಳ್ಳೇಗೌಡರು ಹೇಳಿದರು.

ಅವರು ನಗರದ ಕೆಂಪನಹಳ್ಳಿಯ ಗ್ರಾಮದೇವರಾದ ಶ್ರೀ ಬೀರಲಿಂಗೇಶ್ವರ ದೇವಸ್ಥಾನದಲ್ಲಿ ಕಲ್ಕಟ್ಟೆ ಪುಸ್ತಕದ ಮನೆ, ಅಖಿಲ ಭಾರತೀಯ ಸಾಹಿತ್ಯ ಪರಿಷತ್, ಶ್ರೀ ಗುರುಕೃಪ ಸಂಗೀತ ಸೇವಾ ಟ್ರಸ್ಟ್, ಸೂರಂಕಣ, ದೀವಿಗೆ ಬಳಗದ ಆಶ್ರಯದಲ್ಲಿ ಇತ್ತೀಚೆಗೆ ಜರುಗಿದ ಭಕ್ತಿಗೀತೆ ಸಮರ್ಪಣಾ ಸಮಾರಂಭದಲ್ಲಿ ಮಾತನಾಡಿದರು.

ನಮ್ಮ ಬೀರಲಿಂಗದೇವರು ಶಕ್ತಿಯನ್ನು ಮೆಚ್ಚುತ್ತಾನೆ. ಹಾಗಾಗಿ ಇಲ್ಲಿ ವೀರಗಾರರ ಸೇವೆ ಇರುತ್ತದೆ. ಭಕ್ತಿಯ ಪ್ರಧಾನ ಭಾವವೇ ನಾದ. ನಾದವೂ ವಿಶ್ವದ ಮಹಾಶಕ್ತಿ. ಇದು ಮನಸ್ಸನ್ನು ಪ್ರಶಾಂತಗೊಳಿಸುತ್ತದೆ. ಈ ದಿಸೆಯಲ್ಲಿ ಕಲ್ಕಟ್ಟೆ ಗಾನದೀವಿಗೆ ಸರಣಿ ನಿಜಕ್ಕೂ ಜನಸಾಮಾನ್ಯರಿಗೆ ನಾದೋಪಾಸನೆಯ ಪರಿಚಯ ಮಾಡಿಸುತ್ತಿದೆ, ವಿಶ್ವಶಾಂತಿಗೆ ಸಹಕರಿಸುತ್ತಿದೆ ಎಂದು ಅವರು ತಿಳಿಸಿದರು.

ಗೀತೆಯನ್ನು ಯುಟ್ಯೂಬ್‌ಗೆ ಇಂದೀಕರಿಸಿದ ಅಂಧ ಮಕ್ಕಳ ಆಶಾಕಿರಣ ಶಾಲೆಯ ಮುಖ್ಯಶಿಕ್ಷಕ ಲಕ್ಷ್ಮಣಗೌಡ ಮಾತನಾಡಿ, ಪ್ರತೀ ದೇವಸ್ಥಾನಗಳೂ ನಮ್ಮ ನಂಬಿಕೆಯ ಕೇಂದ್ರಗಳು. ನಂಬಿಕೆ ಇಲ್ಲದೇ ಜೀವನವಿಲ್ಲ. ನಮ್ಮ ದೇಹದಲ್ಲಿನ ರಕ್ತ ಸಂಚಾರವೂ ಸಹ ಲಯಬದ್ಧ ಸಂಗೀತದ ನಾದವನ್ನು ಹೊಂದಿದೆ. ನಾಗರಾಜರಾವ್ ಕಲ್ಕಟ್ಟೆ, ರೇಖಾನಾಗರಾಜರಾವ್ ಮತ್ತು ಕೆ.ಎನ್.ನಾಗಭೂಷಣ್ ಸಂಯೋಜನೆಯಲ್ಲಿ ಮೂಡಿಬರುತ್ತಿರುವ ಪ್ರತಿ ಹಾಡುಗಳೂ ನಮ್ಮೂರ ಧಾರ್ಮಿಕ ಶ್ರೀಮಂತಿಕೆಯನ್ನು ತೋರಿಸುತ್ತದೆ. ಧಾರ್ಮಿಕತೆ ಇಲ್ಲದೇ ಬಾಳಿನಲ್ಲಿ ಪರಿಶುದ್ಧತೆ ಸಾಧ್ಯವಿಲ್ಲ ಎಂದರು.

ದೇವಾಲಯ ಬುಡಕಟ್ಟು ಸಮಿತಿಯ ಕಾರ್ಯದರ್ಶಿ ಬಸಂತ್‌ರವರು ಮಾತನಾಡಿ, ಸ್ಥಳೀಯ ಕಲಾವಿದರು ನಡೆಸುತ್ತಿರುವ ಈ ಕಾರ್ಯಕ್ರಮ ನಿಜಕ್ಕೂ ಊರಿನವರು ಹೆಮ್ಮೆಪಡುವಂಥಾದ್ದು. ಮನೆ ಗೆದ್ದು ಮಾರುಗೆಲ್ಲು ಎನ್ನುವುದು ಸತ್ಯವಾದ ಮಾತು. ನಾಗರಾಜರಾವ್ ಕಲ್ಕಟ್ಟೆ ಅವರು ಮನೆ, ಮಾರು ಎರಡನ್ನೂ ಗೆಲ್ಲುತ್ತಿರುವುದು ನಮ್ಮ ಹೆಮ್ಮೆ ಎಂದರು.

ಅಧ್ಯಕ್ಷೀಯ ನುಡಿಯಾಡಿದ ನಿರ್ಮಾಪಕಿ, ಅಭಾಸಾಪದ ಸಾಹಿತ್ಯ ಕೂಟದ ಸಂಚಾಲಕಿ ರೇಖಾನಾಗರಾಜರಾವ್ ಅವರು, ಮೂವತ್ತೆರಡನೇ ಗೀತೆಯಾಗಿ ಬಂದ ಈ ಹಾಡು ಕಾನಡರಾಗದಲ್ಲಿದೆ. ಇಲ್ಲಿಯವರೆಗೆ ಇಪ್ಪತ್ತಾರು ರಾಗಗಳನ್ನು ತಂಡ ಬಳಸಿಕೊಂಡಿರುವುದಲ್ಲದೇ, ಪ್ರತಿ ಹಾಡಿನಲ್ಲೂ ಒಂದು ಚರಣದ ನಂತರ ಪಲ್ಲವಿಯ ಬಳಕೆಯಲ್ಲಿ ವಿಶಿಷ್ಟತೆ ತರಲಾಗಿದೆ ಎಂದರು.

ಸಮಾರಂಭದಲ್ಲಿ ಅರ್ಚಕರಾದ ನಿಂಗಪ್ಪ, ಜಯಮ್ಮ, ಶೀಲಾ ಲಕ್ಷ್ಮಣಗೌಡ, ಗಾಯಕ ನಾಗರಾಜರಾವ್ ಕಲ್ಕಟ್ಟೆ, ಧರ್ಮ ಕೆ.ಎಸ್, ಶೈಲ, ರುಕ್ಮಿಣಿ, ಪುನೀತ್, ರಾಜೇಶ್, ಮಧು ಕೆ.ಎಂ, ಚಂದನ್, ವೀರಗಾರರಾದ ಡಂಕೇಶ್, ಮಂಜುನಾಥ್, ಬಾಲಕಲಾವಿದೆ ಮೈತ್ರೇಯಿ ಎಲ್.ಆರ್, ರಘು ಕೆ.ಎಂ, ಗ್ರಾಮಸ್ಥರು ಉಪಸ್ಥಿತರಿದ್ದರು.

# ಕಂದಾಯ ಭೂಮಿ ಅರಣ್ಯಕ್ಕೆ ವರ್ಗಾಯಿಸದಿರಲು ಒತ್ತಾಯ



**ಚಿಕ್ಕಮಗಳೂರು:** ಸರ್ಕಾರ ವಿಧಿಸಿರುವ ಶುಲ್ಕಕ್ಕಿಂತ ಅಧಿಕ ಪಡೆಯುವ ಖಾಸಗೀ ಶಾಲೆಗಳ ವಿರುದ್ಧ ಶಿಸ್ತು ಕೈಗೊಳ್ಳಬೇಕು ಎಂದು ಕರವೇ ಮುಖಂಡರುಗಳು ಸೋಮವಾರ ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಸಿ. ರವೀಶ್ ಅವರಿಗೆ ಮನವಿ ಸಲ್ಲಿಸಿದರು.

ಬಳಿಕ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ಕೆಂಪನಹಳ್ಳಿ ಅಶೋಕ್ ವಿದ್ಯಾರ್ಥಿಗಳ ಸಮಗ್ರ ವಿದ್ಯಾಭ್ಯಾಸಕ್ಕಾಗಿ ಪಾಲಕರು ಅನೇಕ ಕಷ್ಟಗಳು ನಡುವೆ ಖಾಸಗಿ ಶಾಲೆಗಳನ್ನು ಸೇರಿಸುತ್ತಿದ್ದಾರೆ. ಆದರೆ ಕೆಲವು ಶಾಲೆಗಳು ಅಧಿಕ ಶುಲ್ಕ, ಸಮವಸ್ತ್ರವನ್ನು ಕಡ್ಡಾಯವಾಗಿ ಶಾಲೆಗಳಲ್ಲೇ ತೆಗೆದುಕೊಳ್ಳಬೇಕಿದೆ ಎಂದು ಒತ್ತಾಯಿಸುತ್ತಿವೆ ಎಂದರು.

ಭವಿಷ್ಯದ ಪ್ರಜೆಗಳಾಗಿ ರೂಪುಗೊಳ್ಳುವ ಮಕ್ಕಳಿಗೆ ಶಾಲೆಗಳಲ್ಲಿ ಪರಿಣಿತ ಶಿಕ್ಷಕರನ್ನು ನೇಮಿಸಿಕೊಳ್ಳುತ್ತಿಲ್ಲ. ಜೊತೆಗೆ ಬಡ ಮತ್ತು ಕೂಲಿ ಕಾರ್ಮಿಕರ ಮಕ್ಕಳಿಗೆ ಖಾಸಗಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಕೊಡಿಸಲು ಬಹುದೊಡ್ಡ ಕನಸಾಗಿದೆ ಎಂದು ಹೇಳಿದರು.

ಆದ್ದರಿಂದ ತಾಲ್ಲೂಕಿನ ಯಾವುದೇ ಖಾಸಗೀ ಶಾಲೆಗಳಲ್ಲಿ ಸರ್ಕಾರದ ನಿಯಮ ಮೀರಿ ಅಧಿಕ ಶುಲ್ಕ ವಿಧಿಸುವ ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಪರಿಣಿತ ಶಿಕ್ಷಕರನ್ನು ಕಡ್ಡಾಯವಾಗಿ ನೇಮಿಸುವಂತೆ ಸೂಚಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರವೇ ಜಿಲ್ಲಾ ಗೌರವಾಧ್ಯಕ್ಷ ಪಂಚಾಕ್ಷರಿ, ಪ್ರಧಾನ ಕಾರ್ಯದರ್ಶಿ ಕುಮಾರ್ ಆರ್. ಶೆಟ್ಟಿ, ಮಹಿಳಾ ಘಟಕದ ತಾಲ್ಲೂಕು ಅಧ್ಯಕ್ಷೆ ಪೂರ್ಣಿಮಾ, ನಗರಾಧ್ಯಕ್ಷೆ ಮಂಜುಳಾಬಾಯಿ, ಮುಖಂಡರು ಗಳಾದ ಮಂಜುನಾಥ್, ಇಮ್ರಾನ್, ರಾಧಾ, ರಂಜಿತ ಮತ್ತಿತರರಿದ್ದರು.

# ಭಯೋತ್ಪಾದಕರು ಎಲ್ಲಿಯೇ ಅಡಗಿ ಕುಳಿತಿರಲಿ ಬಗ್ಗು ಬಡಿಯುವಂತೆ ಕೇಂದ್ರಕ್ಕೆ ಯಾದವರೆಡ್ಡಿ ಆಗ್ರಹ

**ಚಿತ್ರದುರ್ಗ:** ಜಮ್ಮು–ಕಾಶ್ಮೀರದಲ್ಲಿ ಉಗ್ರಗಾಮಿಗಳು ಕಳೆದ ತಿಂಗಳು ಗುಂಡಿನ ದಾಳಿ ನಡೆಸಿ 26 ಅಮಾಯಕರುಗಳನ್ನು ಹತ್ಯೆಗೈದಿರುವುದು ಅತ್ಯಂತ ಖಂಡನಾರ್ಹ.

ಮಾನವ ಕುಲಕ್ಕೆ ಕಳಂಕ. ಭಯೋತ್ಪಾದಕರು ಎಲ್ಲಿಯೇ ಅಡಗಿ ಕುಳಿತಿರಲಿ ಪತ್ತೆ ಹಚ್ಚಿ ಬಗ್ಗು ಬಡಿಯುವಂತೆ ಎದ್ದೇಳು ಕರ್ನಾಟಕ ಸಂಘಟನೆಯ ಕೇಂದ್ರ ವರ್ಕಿಂಗ್ ಕಮಿಟಿ ಸದಸ್ಯ ಜೆ.ಯಾದವರೆಡ್ಡಿ ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು.

ಪ್ರವಾಸಿ ಮಂದಿರದಲ್ಲಿ ಎದ್ದೇಳು ಕರ್ನಾಟಕ ಸಂಘಟನೆಯ ಪದಾಧಿಕಾರಿಗಳೊಂದಿಗೆ ಬುಧವಾರ ಸಭೆ ನಡೆಸಿ ಮಾತನಾಡಿದ ಅವರು ಕೇಂದ್ರ ಸರ್ಕಾರದ ಕ್ರಮಕ್ಕೆ ಎದ್ದೇಳು ಕರ್ನಾಟಕ ಸಂಪೂರ್ಣ ಬೆಂಬಲವಿದೆ. ಅಂತಹ ಅಮಾನವೀಯ ಘಟನೆ ಮತ್ತೆ ಮರುಕಳಿಸಬಾರದೆಂದರೆ ಉಗ್ರರ ತಂಗುದಾಣಗಳನ್ನು ಪತ್ತೆ ಹೆಚ್ಚಿ ಸರ್ವನಾಶ ಮಾಡಬೇಕು. ಭಯೋತ್ಪಾದಕರಲ್ಲಿ ಕೊಲ್ಲುವ ಮನಸ್ಥಿತಿ ಬಿಟ್ಟರೆ ಮಾನವೀಯತೆ ಅಂತಃಕರಣವಿರುವುದಿಲ್ಲ. ಮನಷ್ಯತ್ವ ಕಳೆದುಕೊಂಡಿರುತ್ತಾರೆ.

# ಕಂದಾಯ ಭೂಮಿ ಅರಣ್ಯಕ್ಕೆ ವರ್ಗಾಯಿಸದಿರಲು ಒತ್ತಾಯ



**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಕಂದಾಯ ಭೂಮಿಯನ್ನು ಅರಣ್ಯ ಇಲಾಖೆಗೆ ವರ್ಗಾಯಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಶಾಸಕರ ನೇತೃತ್ವದಲ್ಲಿ ಮುಖಂಡರುಗಳು ನವೀಕರಿಸಬಹುದಾದ ಇಂಧನ ನಿಗಮ ಮಂಡಳಿ ಅಧ್ಯಕ್ಷ ಟಿ.ಡಿ. ರಾಜೇಗೌಡ ಅವರನ್ನು ಇಂದು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಮಾಜಿ ಶಾಸಕ ಎಂ.ಪಿ.ಕುಮಾರಸ್ವಾಮಿ ಜಿಲ್ಲೆ ಹಾಗೂ ಮೂಡಿಗೆರೆ ತಾಲ್ಲೂಕಿನ ಕಂದಾಯ ಭೂಮಿಯನ್ನು ಅರಣ್ಯ ಇಲಾಖೆಗೆ ವರ್ಗಾಯಿಸಬಾರದು. ಭವಿಷ್ಯದ ಮಕ್ಕಳಿಗೆ ಮೂಲ ಭೂತ ಸೌಲಭ್ಯವನ್ನು ಗಮನದಲ್ಲಿಟ್ಟುಕೊಂಡು ಕಂದಾಯ ಭೂಮಿಯನ್ನು ಅರಣ್ಯಕ್ಕೆ ಸೇರಿಸದೇ 4/1 ನೋಟಿ ಫಿಕೇಷನ್‌ನ್ನು ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

ಮೂಡಿಗೆರೆ ಭಾಗದ ಕಳಸ ತಾಲ್ಲೂಕು ಹಾಗೂ ಆಲ್ದೂರು, ವಸ್ತಾರೆ ಹೋಬಳಿಯ ಹಲವು ಭಾಗಗಳ ಗ್ರಾಮಗಳಲ್ಲಿ 4/1 ನೋಟಿ ಫಿಕೇಷನ್ ಪರಿವರ್ತನೆ ಮಾಡಲು ಅರಣ್ಯ ಇಲಾಖೆ ಸಿದ್ದತೆ ಮಾಡಿಕೊಂಡಿದೆ. ಬಹುತೇಕ ಈ ಗ್ರಾಮದ ಭೂಮಿಗಳಲ್ಲಿ ಕೃಷಿಕರು, ನಿವೇಶನ ರಹಿತರು ವಾಸವಾಗಿದ್ದು ಜೊತೆಗೆ ಸಾವಿರಾರು ಮಂದಿ ನಿವೇಶನಕ್ಕಾಗಿ ಕಾದುಕುಳಿತುಕೊಂಡಿದ್ದಾರೆ ಎಂದು ಹೇಳಿದರು. ಇನ್ನೂ ಕೆಲವೆಡೆ ಸಾವಿರಾರು ಕುಟುಂಬಗಳು, ಬೆಳೆಗಾರರ ಕೂಲಿ ಲೈನ್‌ಗಳಲ್ಲಿ ನಿವೇಶನಕ್ಕಾಗಿ, ಸ್ವಂತ ಮನೆ ನಿರ್ಮಿಸಿಕೊಳ್ಳಲು ಕನಸು ಕಾಣಲಾಗುತ್ತಿದೆ. ಅಂಗನವಾಡಿ ಶಾಲೆ, ಆಟದ ಮೈದಾನ, ಸಮುದಾಯ ಭವನ, ಸ್ಮಶಾನಕ್ಕೆ ಜಾಗವಿಲ್ಲದೆ ಆಹಾಕಾರಪಡುವಂತಾಗಿದೆ ಎಂದರು.

ಮೂಡಿಗೆರೆ ತಾಲ್ಲೂಕು ಸೇರಿದಂತೆ ಜಿಲ್ಲೆಯ ಯಾವುದೇ ಗ್ರಾಮದ ಕಂದಾಯ ಭೂಮಿಯನ್ನು ಅರಣ್ಯ ಎಂದು ಪರಿವರ್ತನೆ ಮಾಡಬೇಕಾದರೆ ಎಲ್ಲಾ ಮೂಲಭೂತ ಸೌಲಭ್ಯದ ಕೊರತೆ ನೀಗಿಸಬೇಕಾಗಿದೆ.

# ಕೋವಿಡ್ ಮುಂಜಾಗ್ರತೆ ಕ್ರಮಕೈಗೊಳ್ಳಿ

**ಚಿತ್ರದುರ್ಗ:** ರಾಜ್ಯದಲ್ಲಿ ಕರೋನಾ ವೈರಸ್ ಸೋಂಕಿತರ ಸಂಖ್ಯೆ ಹೆಚ್ಚಾಗುತ್ತಿದ್ದು, ಈ ಕುರಿತು ಸರ್ಕಾರದಿಂದ ಕಟ್ಟುನಿಟ್ಟಾಗಿ ಮಾರ್ಗಸೂಚಿ ಹೊರಡಿಸಿದ್ದು, ಕೋವಿಡ್ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಿ.ಆನಂದ್ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿ–ದರು. ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿಯ ಮೊದಲನೇ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಂಗಾರು ಉತ್ತಮ ರೀತಿಯಲ್ಲಿ ಆಗಿದ್ದು, ರೈತರಿಗೆ ಯಾವುದೇ ತೊಂದರೆ ಆಗದಂತೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ವಿತರಿಸಲು ಕೃಷಿ ಇಲಾಖೆ ವತಿಯಿಂದ ಅಗತ್ಯ ಕ್ರಮವಹಿಸಲು ತಿಳಿಸಿದರು.

ತೋಟಗಾರಿಕೆ ಇಲಾಖೆ, ರೇಷ್ಮೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಪಶುಪಾಲನಾ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು.

# ಪರಿಶಿಷ್ಟರು ಸರ್ಕಾರದ ಸೌಲಭ್ಯ ವಂಚಿತರಾಗಬಾರದು: ಮೀನಾ ನಾಗರಾಜ್

**ಚಿಕ್ಕಮಗಳೂರು, ಮೇ 28:** ಪರಿಶಿಷ್ಟ ಜಾತಿಯ ಜನರು ಸರ್ಕಾರದ ಸೌಲಭ್ಯಗಳಿಂದ ಯಾವುದೇ ರೀತಿಯಲ್ಲೂ ವಂಚಿತರಾಗಬಾರದು ಎಂಬ ಉದ್ದೇಶದಿಂದ ಸರ್ಕಾರ ಗೌ.ನಿವೃತ್ತ ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನ್ ದಾಸ್ ಅವರ ಏಕಸದಸ್ಯ ವಿಚಾರಣಾ ಆಯೋಗ ರಚಿಸಿದ್ದು, ಆಯೋಗದ ನಿರ್ದೇಶನದಂತೆ ಪರಿಶಿಷ್ಟ ಜಾತಿಯ ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ. ಎನ್. ಹೇಳಿದರು.

ಇಂದು ನಗರದ ಜಿಲ್ಲಾ ಪಂಚಾಯತ್ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ ಪರಿಶಿಷ್ಟ ಜಾತಿಗಳ ಮುಖಂಡರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಿಲ್ಲೆಯಲ್ಲಿ ಇದುವರೆಗೂ ಶೇ.94 ರಷ್ಟು ಸಮೀಕ್ಷೆ ಪೂರ್ಣಗೊಂಡಿದ್ದು, ಇನ್ನು ಶೇ. 6 ರಷ್ಟು ಮಾತ್ರ ಬಾಕಿ ಇದೆ. ಮಳೆ ಹೆಚ್ಚಾಗಿರುವ ಕಾರಣದಿಂದ ಮಲೆನಾಡು ತಾಲ್ಲೂಕುಗಳಾದ ಮೂಡಿಗೆರೆ, ತರೀಕೆರೆ, ಕಳಸ, ಬಾಳೆಹೊನ್ನೂರು, ಚಿಕ್ಕಮಗಳೂರಿನಲ್ಲಿ ಮನೆ–ಮನೆ ಸಮೀಕ್ಷೆ ನಡೆಸಲಾಗುತ್ತಿದೆ. ಮುಂದುವರಿದ ಭಾಗವಾಗಿ ನಡೆಯುತ್ತಿರುವ ಆನ್‌ಲೈನ್ ಸಮೀಕ್ಷೆಗೆ ನೆಟ್‌ವರ್ಕ್ ಸಮಸ್ಯೆಯಾಗುತ್ತಿರುವುದರಿಂದ ಸಮೀಕೆ ಕಾರ್ಯ ವಿಳಂಬವಾಗುತ್ತಿದೆ ಎಂದ ಅವರು, ಮಲೆನಾಡಿನ ಜನರಿಗೆ ಉಪಜಾತಿಯ ಬಗ್ಗೆ ಮಾಹಿತಿ ಕೊರತೆ ಇರುವುದರಿಂದ ತಾವುಗಳು ಉಪಜಾತಿಗಳ ಬಗ್ಗೆ ಮಾಹಿತಿ ಸರಿಯಾಗಿ ನೀಡಿ ಸಹಕರಿಸುವಂತೆ ತಿಳಿಸಿದರು. ಉಪಜಾತಿಗಳ ಉಲ್ಲೇಖ ಸಮಸ್ಯೆಯಿಂದ ಸಮೀಕ್ಷೆಗೆ ತೊಡಕಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ತರುವುದಾಗಿ ಹೇಳಿದರು.

ಸಮುದಾಯದ ಮುಖಂಡರು ಹಳ್ಳಿಗಳಲ್ಲಿ ಸಮೀಕ್ಷೆಯಾಗದಿರುವ ಮನೆಗಳನ್ನು ಗಮನಿಸಿ ಸಮೀಕ್ಷೆ ಮಾಡಿಸುವಂತೆ ಅವರಲ್ಲಿ ಅರಿವು ಮೂಡಿಸಬೇಕು. ಮನೆ ಮಂದಿ ಇಲ್ಲದಿರುವ ಸಂದರ್ಭದಲ್ಲಿ ಅಕ್ಕ–ಪಕ್ಕದವರು ಆ ಕುಟುಂಬದ ಜಾತಿ ಹಾಗೂ ಮೊಬೈಲ್ ಸಂಖ್ಯೆ ಮತ್ತಿತರೆ ಮಾಹಿತಿಯನ್ನು ಕೊಟ್ಟು ಸ್ಥಳೀಯರು ಸಹಕರಿಸುವಂತೆ ತಿಳಿಸಿದರು.

ಸಮೀಕ್ಷೆಗೆ ಎಲ್ಲ ಮುಖಂಡರ ಸಹಕಾರ ಅಗತ್ಯವಾಗಿದ್ದು, ಎಲ್ಲರೂ ಸಹಕರಿಸಿದಲ್ಲಿ ಈ ಸಮೀಕ್ಷೆ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಬಹುದು ಎಂದು ಹೇಳಿದರು.

ಸಭೆಯಲ್ಲಿ ಮಾಜಿ ಸಚಿವ ಬಿ.ಬಿ.ನಿಂಗಯ್ಯ, ಚಿಕ್ಕಮಗಳೂರು ಉಪವಿಭಾಗಾಧಿಕಾರಿ ಆರ್. ದೇವರಾಜ್, ತರೀಕೆರೆ ಉಪವಿಭಾಗಾಧಿಕಾರಿ ಕಾಂತರಾಜ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಬಿ.ಮಾಲತಿ ಹಾಗೂ ಪರಿಶಿಷ್ಟ ಜಾತಿಯ ಮುಖಂಡರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**